ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ನೊಂದವರ ನೈಜ ಕನ್ನಡಿ

ಸಂಪುಟ : 13 ಸಂಚಿಕೆ : 44
28–7–2025 ಸೋಮವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 44

## ಮಾರಕಾಸ್ತ್ರಗಳಿಂದ ಕೊಚ್ಚಿ ಕಾಂಗ್ರೆಸ್ ಮುಖಂಡನ ಬರ್ಬರ ಹತ್ಯೆ



**ಬೆಂಗಳೂರು:** ಬೆಂಗಳೂರು ದಕ್ಷಿಣ ಜಿಲ್ಲೆಯ ಕನಕಪುರ ತಾಲೂಕಿನ ಸಾತನೂರು ಗ್ರಾಮದ ಡಾಬಾವೊಂದರ ಬಳಿ ಮಾರಕಾಸ್ತ್ರಗಳಿಂದ ಕೊಚ್ಚಿ ಕಾಂಗ್ರೆಸ್ ಮುಖಂಡನೋರ್ವನ ಬರ್ಬರ ಹತ್ಯೆ ಮಾಡಲಾಗಿದೆ. ಡಾಬಾವೊಂದರಲ್ಲಿ ಪಾರ್ಟಿ ಮಾಡುತ್ತಿದ್ದ 45 ವರ್ಷದ ಅಚ್ಚಲು ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ನಂಜೇಶ್ ಎಂಬಾತನ ಮೇಲೆ ಗುಂಪೊಂದು ದಾಳಿ ಮಾಡಿದ್ದು ಮಾರಕಾಸ್ತ್ರಗಳಿಂದ ಕೊಚ್ಚಿ ಕೊಲೆ ಮಾಡಿದೆ. ತನ್ನ ಗ್ರಾಮದಲ್ಲಿನ ಜಮೀನಿನ ಸೈಟ್ ವಿವಾದಕ್ಕೆ ಸಂಬಂಧಪಟ್ಟಂತೆ ಸ್ಥಳೀಯರೊಂದಿಗೆ ನಂಜೇಶ್ ಜಗಳವಾಡಿದ್ದರು. ಇದರ ಬೆನ್ನಲ್ಲೇ ಅವರನ್ನು ಕೊಲೆ ಮಾಡಲಾಗಿದ್ದು ಹಲವು ಅನುಮಾನಗಳನ್ನು ಮೂಡಿಸಿದೆ. ಮಾರಣಾಂತಕವಾಗಿ ಗಾಯಗೊಂಡಿದ್ದ ನಂಜೇಶ್ ಅವರನ್ನು ತಕ್ಷಣವೇ ಕನಕಪುರದ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದಾರೆ. ಘಟನಾ ಸ್ಥಳಕ್ಕೆ ಸಾತನೂರು ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

## ಕೇಂದ್ರದ ವಿರುದ್ಧ ಆರೋಪಕ್ಕೆ ಬಿವೈವಿ ಆಕ್ರೋಶ




**ಬೆಂಗಳೂರು, ಜು.27**–ರಸಗೊಬ್ಬರ ದಾಸ್ತಾನು ವಿಚಾರದಲ್ಲಿ ಪೂರ್ವತಯಾರಿ ನಡೆಸದ ಮುಖ್ಯಮಂತ್ರಿ ಸಿದ್ದರಾಮಯ್ಯ ಈಗ ಕೇಂದ್ರ ಸರಕಾರದ ವಿರುದ್ಧ ವಿನಾಕಾರಣ ಆರೋಪ ಮಾಡುತ್ತಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ನಗರದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿ, ಕಲಬುರಗಿ, ಗದಗ, ಶಿವಮೊಗ್ಗ, ದಾವಣಗೆರೆ ಜಿಲ್ಲೆಯಲ್ಲಿ ಎಷ್ಟು ರಸಗೊಬ್ಬರ ಬೇಕೆಂಬ ಪೂರ್ವಾಪರ ಲೆಕ್ಕಾಚಾರ ಇಲ್ಲದೆ ರೈತರಿಗೆ ಆತಂಕದ ಸ್ಥಿತಿ ಉಂಟಾಗಿದೆ ಎಂದರು.

ರಸಗೊಬ್ಬರದ ವಿಷಯದಲ್ಲಿ ಕೃತಕ ಅಭಾವ ಸೃಷ್ಟಿ ಆಗಿದೆ. ರಾಜ್ಯ ಸರಕಾರ ರೈತರಿಗೆ ಅನ್ಯಾಯ ಮಾಡುತ್ತಿದ್ದು, ಇದರ ಸಂಬಂಧ ಬಿಜೆಪಿ ಹೋರಾಟ ನಡೆಸಲಿದೆ. ರಸಗೊಬ್ಬರ ದಾಸ್ತಾನಿದೆ, ಕೊರತೆ ಇಲ್ಲ ಎಂದು ಸರ್ಕಾರ ವಾದಿಸುತ್ತಿದೆ. ಹಾಗಾದರೆ ನಿರ್ವಹಣೆಯಲ್ಲಿ ವಿಫಲವಾಗಿದೆ ಎಂದು ಅರ್ಥವಲ್ಲವೇ? ರೈತರಿಗೆ ತೊಂದರೆ ಆಗದ ರೀತಿಯಲ್ಲಿ ರಾಜ್ಯ ಸರಕಾರ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.ದುಪ್ಪಟ್ಟು ದರದಲ್ಲಿ ಬಿತ್ತನೆ ಬೀಜ, ರಸಗೊಬ್ಬರ ಮಾರಾಟವಾಗುತ್ತಿದೆ. ಕಳ್ಳದಂಧೆಯೂ ನಡೆಯುತ್ತಿದೆ. ಕಾಂಗ್ರೆಸ್ ಸರಕಾರ ಇದ್ದಲ್ಲೆಲ್ಲ ದಲ್ಲಾಳಿಗಳ ಕಾಟ ಖಾಯಂ ಎಂದು ವ್ಯಂಗ್ಯವಾಡಿದರು.

ರಸಗೊಬ್ಬರ ಸಂಬಂಧ ಕೇಂದ್ರ ಸಚಿವ ನಡ್ಡಾ ಅವರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಪತ್ರ ಬರೆದಿದ್ದಾರೆ. ಈ ಬಾರಿ ಮುಂಗಾರು 20–25 ದಿನಗಳ ಮುಂಚಿತವಾಗಿ ಪ್ರಾರಂಭವಾಗಿದೆ. ಹವಾಮಾನ ಇಲಾಖೆ ಇದರ ಸ್ಪಷ್ಟ ಮುನ್ಸೂಚನೆ ನೀಡಿದ್ದರೂ, ಪೂರ್ವ ತಯಾರಿ ಮಾಡದ ಕಾರಣ ರೈತರು ಬೀದಿಗಿಳಿದು ಹೋರಾಟ ಪ್ರಾರಂಭಿಸಿದ್ದಾರೆ.

## ಯಶಸ್ವಿಯಾಗಿ ನಡೆದ "ಸಂಕಲ್ಪ" ಉಚಿತ ಸ್ಪರ್ಧಾತ್ಮಕ ಪ್ರವೇಶ ಪರೀಕ್ಷೆ

### ಕೇಂದ್ರಕ್ಕೆ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ಭೇಟಿ



**ದಾವಣಗೆರೆ. ಜು.27;** ಎಸ್.ಎಸ್. ಕೇರ್ ಟ್ರಸ್ಟ್ ವತಿಯಿಂದ ದಾವಣಗೆರೆ ವಿಶ್ವವಿದ್ಯಾನಿಲಯ ಹಾಗೂ ಐಎಎಸ್ ಬಾಬಾ ಸಂಸ್ಥೆಯ ಸಹಭಾಗಿತ್ವದಲ್ಲಿ ಭಾನುವಾರ ಬೆಳಗ್ಗೆ ಸಂಕಲ್ಪ ಉಚಿತ ಸ್ಪರ್ಧಾತ್ಮಕ ಪ್ರವೇಶ ಪರೀಕ್ಷೆ ದಾವಣಗೆರೆ ಕ್ಷೇತ್ರದಾದ್ಯಂತ ಯಶಸ್ವಿಯಾಗಿ ಜರುಗಿತು.

ಈ ವೇಳೆ ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್ ಅವರು ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪರೀಕ್ಷಾ ಕೇಂದ್ರಕ್ಕೆ ಭೇಟಿ ವಿದ್ಯಾರ್ಥಿಗಳಿಗೆ ಶುಭ ಕೋರಿದರು.

ಹರಿಹರ, ಜಗಳೂರು, ಚನ್ನಗಿರಿ, ಹೊನ್ನಾಳಿಯಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಹಾಗೂ ಹರಪನಹಳ್ಳಿಯ ಟಿ.ಎಂ.ಎ.ಇ. ಶಿಕ್ಷಣ ಮಹಾವಿದ್ಯಾಲಯದ(ತೆಗ್ಗಿನಮಠ) ಕಾಲೇಜುಗಳಲ್ಲಿ ಯಶಸ್ವಿಯಾಗಿ ಪರೀಕ್ಷೆ ನಡೆದಿದೆ.


ಪರೀಕ್ಷೆಗೆ ಹೆಸರು ನೊಂದಾಯಿಸಿದ್ದ 1600 ವಿದ್ಯಾರ್ಥಿಗಳಲ್ಲಿ 1000 ಕ್ಕೂ ಹೆಚ್ಚು ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದಾರೆ.ಮೆರಿಟ್ ಆಧಾರದ ಮೇಲೆ ಆಯ್ಕೆಯಾದವರಿಗೆ ಉಚಿತ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಲಭಿಸಲಿದೆ.

ಯಶಸ್ವಿಯಾಗಿ ಪರೀಕ್ಷೆ ನಡೆಸಿ ಕೊಟ್ಟ ದಾವಣಗೆರೆ ವಿಶ್ವವಿದ್ಯಾಲಯದ ಪರೀಕ್ಷಾಂಗ ಕುಲಸಚಿವರಾದ ಪ್ರೊ. ರಮೇಶ್ ಸಿ ಕೆ, ನೋಡಲ್ ಅಧಿಕಾರಿ ಪ್ರೊ. ಶಶಿಧರ್, ಜಿಎಫ್ ಜಿಸಿ ಕಾಲೇಜಿನ ಪ್ರೊ. ಮಂಜುನಾಥ್, ಶಾಂತಕುಮಾರ್ ಅವರಿಗೆ ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್ ಅವರು ಕೃತಜ್ಞತೆ ಕೋರಿದರು.ಈ ವೇಳೆ ಸಂಕಲ್ಪ ತಂಡದ ವೀರೇಶ್ ಪಟೇಲ್, ಸಿಂಡಿಕೇಟ್ ಸದಸ್ಯ ಪ್ರಶಾಂತ್ ಎನ್ ಸಿ, ಮಹಾನಗರ ಪಾಲಿಕೆ ಮಾಜಿ ಸದಸ್ಯ ಗಡಿಗುಡಾಳ್ ಮಂಜುನಾಥ್, ಶ್ರೀಕಾಂತ್ ಬಂಗೇರ, ನವೀನ್ ಕಕ್ಕರಗೊಳ್ಳ, ಮಧುಕರ್ ಹಾಗೂ ಇತರೆ ಸಂಕಲ್ಪ ತಂಡದವರು ಉಪಸ್ಥಿತರಿದ್ದರು. ಎಲ್ಲಾ ಕೇಂದ್ರಗಳಲ್ಲೂ ವ್ಯವಸ್ಥಿತವಾಗಿ ಕಾರ್ಯನಿರ್ವಹಿಸಿದ ಸಂಕಲ್ಪ ಯುವ ತಂಡದ ಮುಂದಾಳತ್ವ ವಹಿಸಿದ್ದ ವರುಣ್ ಬೆಣ್ಣೆಹಳ್ಳಿ, ಅಲಿ ರೆಹಮತ್ ಪೈಲ್ವಾನ್ ಮತ್ತು ನಗರದ ಎ.ಆರ್ಯ,ಬರ್ಕತ್ ಅಲಿ,ಜಗಳೂರಿನ ಅಕ್ಷಯ್ ಕುಮಾರ್,ಹೊನ್ನಾಳಿಯ ಮನು ವಾಲಿ,ಚನ್ನಗಿರಿಯ ರುದ್ರೇಶ್,ಹರಿಹರದ ಶ್ರೀನಿಧಿ ಹಾಗೂ ಮಾಯಕೊಂಡದ ಲೋಕೇಶ್ ನಾಯ್ಕ್ ಸೇರಿದಂತೆ ತಂಡದವರ ಕಾರ್ಯಕ್ಕೆ ಸಂಸದರು ಶ್ಲಾಘನೆ ವ್ಯಕ್ತಪಡಿಸಿದ್ದಾರೆ.

# ಕಾಲ್ತುಳಿತಕ್ಕೆ 7 ಮಂದಿ ಬಲಿ

### ಹರಿದ್ವಾರದ ಮಾನಸದೇವಿ ದೇವಾಲಯದಲ್ಲಿ ದುರ್ಘಟನೆ:25 ಮಂದಿಗೆ ಗಾಯ





**ಹರಿದ್ವಾರ,ಜು.27**– ಧಾರ್ಮಿಕ ನಗರಿ ಹರಿದ್ವಾರದ ಮಾನಸ ದೇವಿ ದೇವಸ್ಥಾನದಲ್ಲಿ ಸಂಭವಿಸಿದ ಕಾಲ್ತುಳಿತದಲ್ಲಿ 7 ಜನರು ಸಾವನ್ನಪ್ಪಿದ್ದು 25ಕ್ಕೂ ಹೆಚ್ಚು ಮಂದಿ ಗಂಭೀರವಾಗಿ ಗಾಯಗೊಂಡಿರುವ ಘಟನೆ ನಡೆದಿದೆ. ಸಾವಿನ ಸಂಖ್ಯೆ ಏರುವ ಸಾಧ್ಯತೆ ಇದೆ ಎನ್ನಲಾಗಿದೆ.

ದೇವಸ್ಥಾನಕ್ಕೆ ಹೋಗುವ ಮೆಟ್ಟಿಲುಗಳ ಮೇಲೆ ಕಾಲ್ತುಳಿತ ಸಂಭವಿಸಿದೆ.ಇದರಿಂದ ಸ್ಥಳದಲ್ಲೇ 7 ಮಂದಿ ಮೃತಪಟ್ಟಿದ್ದು 25ಕ್ಕೂ ಗಂಭೀರವಾಗಿ ಗಾಯಗೊಂಡಿದ್ದಾರೆ. ಗಾಯಗೊಂಡ ಎಲ್ಲರನ್ನು ಆಸ್ಪತ್ರೆಗೆ ದಾಖಲು ಮಾಡಲಾಗಿದೆ. ಅದರಲ್ಲಿ ಕೆಲವರ ಸ್ಥಿತಿ ಗಂಭೀರವಾಗಿದ್ದು, ಸಾವಿನ ಸಂಖ್ಯೆ ಹೆಚ್ಚಳವಾಗುವ ಸಾಧ್ಯತೆ ಇದೆ ಎಂದು ಹೇಳಲಾಗಿದೆ.

ಸ್ಥಳದಲ್ಲಿ ರಕ್ಷಣಾ ಕಾರ್ಯ ಚುರುಕುಗೊಂಡಿದ್ದು ಗಾಯಾಳು ಭಕ್ತರನ್ನು ಆಸ್ಪತ್ರೆಗೆ ದಾಖಲು ಮಾಡಲಾಗಿದ್ದು ಇನ್ನುಳಿದ ಭಕ್ತರಿಗೆ ದೇವರ ದರ್ಶನಕ್ಕೆ ಅನುವು ಮಾಡಿಕೊಡಲು ಸಂಘಟಕರು ಮತ್ತು ದೇವಾಲಯದ ಆಡಳಿತ ಮಂಡಳಿ ಮತ್ತು ರಕ್ಷಣಾ ತಂಡಗಳು ನಿರಂತವಾಗಿ ಶ್ರಮಿಸುತ್ತಿವೆ.

ಕಾಲ್ತುಳಿತದಿಂದ 6 ಮಂದಿ ಸಾವನ್ನಪ್ಪಿ ಹಲವರು ಗಾಯಗೊಂಡ ವಿಷಯವನ್ನು ಗರ್ವಾಲ್ ವಿಭಾಗದ ಆಯುಕ್ತ ವಿನಯ್ ಶಂಕರ್ ಪಾಂಡೆ ದೃಢಪಡಿಸಿದ್ದು ದೇವಸ್ಥಾನಕ್ಕೆ ತೆರಳುವ ವೇಳೆ ಈ ಅನಾಹುತ ಸಂಭವಿಸಿದೆ ಎಂದು ತಿಳಿಸಿದ್ದಾರೆ

ಪವಿತ್ರ ಹಿಂದೂ ಮಾಸವಾದ ಸಾವನ್‌ನಲ್ಲಿ ದುರಂತ ಸಂಭವಿಸಿದ್ದು, ನಗರದ ಎಲ್ಲಾ ಯಾತ್ರಾ ಸ್ಥಳಗಳಲ್ಲಿ ಭಕ್ತರ ದಟ್ಟಣೆ ಕಂಡುಬಂದಿದೆ. ಈ ಸಮಯದಲ್ಲಿ ಗಂಗಾ ನದಿಯಿಂದ ನೀರು ಸಂಗ್ರಹಿಸಲು ನಗರಕ್ಕೆ ಭೇಟಿ ನೀಡುವ ಶಿವಭಕ್ತ ಕನ್ವಾರಿಯಾಗಳಿಗೆ ಹರಿದ್ವಾರ ಪ್ರಮುಖ ತಾಣವಾಗಿದೆ. ಗಾಯಗೊಂಡ ಭಕ್ತರನ್ನು ಆಂಬ್ಯುಲೆನ್ಸ್‌ಗಳಲ್ಲಿ ಆಸ್ಪತ್ರೆಗೆ ದಾಖಲು ಮಾಡಲಾಗಿದೆ.

ವಾರಾಂತ್ಯದ ಹಿನ್ನೆಲೆಯಲ್ಲಿ, ಹರಿದ್ವಾರದಲ್ಲಿ ಹೆಚ್ಚಿನ ಜನಸಂದಣಿ ಇತ್ತು. ಇಲ್ಲಿನ ಶಂಕರ ರಸ್ತೆಯಲ್ಲಿ ಈ ಅವಘಡ ಸಂಭವಿಸಿದೆ. ಯಾವಾಗಲೂ ಜಾತ್ರೆಯ ಸಂದರ್ಭದಲ್ಲಿ ರಸ್ತೆಯನ್ನು ಸಂಪೂರ್ಣವಾಗಿ ಮುಚ್ಚಲಾಗುತ್ತಿತ್ತು. ಆದರೆ ಅತಿಯಾದ ಜನಸಂದಣಿ ಹಿನ್ನೆಲೆಯಲ್ಲಿ ಭಕ್ತರನ್ನು ಈ ರಸ್ತೆಯ ಮೂಲಕ ಕಳುಹಿಸಲಾಗಿತ್ತು .ಭೂಕುಸಿತದಿಂದ ಈ ಘಟನೆ ನಡೆದಿದೆ.

ಮಾನಸಾ ದೇವಿ ದೇವಸ್ಥಾನದಲ್ಲಿ ಪ್ರತಿದಿನ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುತ್ತಾರೆ. ತಾಯಿಯ ದರ್ಶನಕ್ಕಾಗಿ ದೇಶದ ಹಲವೆಡೆಗಳಿಂದ ಭಕ್ತರು ಬರುತ್ತಾರೆ. ಇದರಿಂದಾಗಿ ಮಾನಸಾ ದೇವಿ ದೇವಸ್ಥಾನದಲ್ಲಿ ಸದಾ ಭಕ್ತರ ಜನಸಂದಣಿ ಇರುತ್ತದೆ.

ಮುಖ್ಯಮಂತ್ರಿ ತೀವ್ರ ಸಂತಾಪ ಹರಿದ್ವಾರದ ಮಾನಸ ದೇವಿ ದೇವಸ್ಥಾನಕ್ಕೆ ಹೋಗುವ ಮಾರ್ಗದಲ್ಲಿ ಕಾಲ್ತುಳಿತದ ಸುದ್ದಿ ಕೇಳಿ ತುಂಬಾ ದುಃಖವಾಗಿದ್ದು ರಕ್ಷಣಾ ಕಾರ್ಯಕ್ಕೆ ಸೂಚನೆ ನೀಡಲಾಗಿದೆ ಎಂದು ಮುಖ್ಯಮಂತ್ರಿ ಪುಷ್ಕರ್ ಧಾಮಿ ಹೇಳಿದ್ದಾರೆ

ಸ್ಥಳೀಯ ಪೊಲೀಸರು ಮತ್ತು ಇತರ ರಕ್ಷಣಾ ತಂಡಗಳು ಸ್ಥಳಕ್ಕೆ ತಲುಪಿದ್ದು, ಪರಿಹಾರ ಮತ್ತು ರಕ್ಷಣಾ ಕಾರ್ಯಾಚರಣೆಯಲ್ಲಿ ತೊಡಗಿವೆ.ಗಾಯಗೊಂಡ ಎಲ್ಲಾ ಭಕ್ತರಿಗೆ ಅಗತ್ಯ ಚಿಕಿತ್ಸೆ ಕೊಡಿಸಲಾಗುವುದು. ಈ ಸಂಬಂಧ ಜಿಲ್ಲಾಡಳಿತೊಂದಿಗೆ ನಿರಂತರ ಸಂಪರ್ಕದಲ್ಲಿರುವುದಾಗಿ ಎಲ್ಲಾ ಭಕ್ತರ ಸುರಕ್ಷತೆ ಮತ್ತು ಯೋಗಕ್ಷೇಮಕ್ಕಾಗಿ ದೇವಿಯನ್ನು ಪ್ರಾರ್ಥಿಸುವುದಾಗಿ ತಿಳಿಸಿದ್ದಾರೆ.

## ವಿಶ್ವ ವಿಖ್ಯಾತ ಜೋಗ ವೈಭವ ಕಣ್ತುಂಬಿಕೊಳ್ಳಲು ದಾವಣಗೆರೆಯಿಂದ ಸಾರಿಗೆ ವ್ಯವಸ್ಥೆ



**ದಾವಣಗೆರೆ:** ಮುಂಗಾರು ಮಳೆ ಆರಂಭವಾದರೆ ಸಾಕು ಜೋಗ ವೈಭವ ಕಾಣ್ತುಂಬಿಕೊಳ್ಳ ಬೇಕೇನಿಸುತ್ತದೆ. ಇಂಥ ಜಗದ್ವಿವಿಖ್ಯಾತ ಜಲಧಾರೆ ನೋಡುವ ಅವಕಾಶವನ್ನು ದಾವಣಗೆರೆ ಕೆ ಎಸ್ ಆರ್ ಟಿ ಸಿ ರಾಜಹಂಸ ಬಸ್ ವ್ಯವಸ್ಥೆ ಮಾಡಿದೆ. ಪ್ರತಿ ಶನಿವಾರ ಹಾಗೂ ಭಾನುವಾರ ವಿಶೇಷ ಪ್ರವಾಸದ ವ್ಯವಸ್ಥೆ ಯನ್ನು ಕಲ್ಪಿಸಿದೆ.

ಬೆಳಗ್ಗೆ 7.15 ಕ್ಕೆ ದಾವಣಗೆರೆ ಯಿಂದ ಹೊರಡುವ ಬಸ್ ಹರಿಹರ ನಗರ ಕ್ಕೆ 7.45 ಕ್ಕೆ ಅಲ್ಲಿಂದ ಪ್ರಯಾಣಿಕರನ್ನು ಕರೆದುಕೊಂಡು ಬೆಳಗ್ಗೆ 10.30 ಕ್ಕೆ ಶಿರಸಿ ತಲುಪಿ ಶಕ್ತಿ ದೇವತೆ ಮಾರಿಕಾಂಬಾ ದೇವರ ದರ್ಶನ ಮಾಡಿಕೊಂಡು ಬಳಿಕ ಮಧ್ಯಾಹ್ನ 1 ಗಂಟೆಗೆ ಜೋಗ ತಲುಪುತ್ತದೆ ಜೋಗ ದಿಂದ ಮತ್ತೆ 4.30 ಕ್ಕೆ ಹೊರಟು ರಾತ್ರಿ 8.30 ಕ್ಕೆ ದಾವಣಗೆರೆ ಗೆ ಬರುತ್ತದೆ. ಎರಡು ಕಡೆ ಯಿಂದ ಓರ್ವ ವ್ಯಕ್ತಿಗೆ 650 ರೂ, ಮಕ್ಕಳಿಗೆ 500 ರೂ ಪ್ರಯಾಣ ದರ ನಿಗದಿ ಮಾಡಲಾಗಿದೆ. ಮಾಧ್ಯಮ ವರ್ಗ ಹಾಗೂ ಪುಟ್ಟ ಕುಟುಂಬದವರು ಒಂದು ದಿನದ ಪಿಕ್ ನಿಕ್ ಮೂಲಕ ಅದ್ಬುತ ಪ್ರವಾಸ ಮಾಡಬಹುದು. ಈ ವೇಳೆ ಮಾತನಾಡಿದ ಕೆ ಎಸ್ ಆರ್ ಟಿ ಸಿ ನಿವೃತ್ತ ನಿಲ್ದಾಣಾಧಿಕಾರಿ ಗಣೇಶ್ ಎ.ಕೆ. ಮಾತನಾಡಿ ವೀಕೆಂಡ್ ಲ್ಲಿ ಒಂದು ದಿನದ ಪ್ರವಾಸ ಮಾಡಿ ಜೋಗ ಜಲಪಾತ ಸೌಂದರ್ಯ ಸವಿಯಬಹುದು, ದಾವಣಗೆರೆ ಜನರಿಗೆ ಅನುಕೂಲವಾಗಲೆಂದು ಈ ಸಾರಿಗೆ ಸಂಸ್ಥೆ ಈ ಅನುಕೂಲ ಮಾಡಿದೆ ಈ ಅವಕಾಶ ವನ್ನು ಸದುಪಯೋಗ ಮಾಡಿಕೊಂಡು ಪ್ರವಾಸ ಮಾಡಿ ಎಂದು ತಿಳಿಸಿದರು. ಈ ಮಾತನಾಡಿದ ಸಂಚಾರ ನಿಯಂತ್ರಣಾ ಧಿಕಾರಿ ಪುಷ್ಪಾ ಬಜಂತ್ರಿ ಮಾತನಾಡಿ ಕಡಿಮೆ ಖರ್ಚಿನಲ್ಲಿ ನಾವು ಜೋಗ ನೋಡಲು ಹಾಗೂ ಮಕ್ಕಳು ಸೇರಿದಂತೆ ಎಲ್ಲರು ಸಹ ಪ್ರವಾಸ ಮಾಡಬಹುದು ಎಂದು ತಿಳಿಸಿದರು. ಜೋಗ ಪ್ರವಾಸ ಕೈಗೊಂಡ ಪ್ರಯಾಣಿಕರಿಗೆ ಕೆ ಎಸ್ ಆರ್ ಟಿ ಸಿ ದಾವಣಗೆರೆ ವಿಭಾಗದ ಜಿಲ್ಲಾ ಸಂಚಾರ ನಿಯಂತ್ರಣಾಧಿಕಾರಿಗಳಾದ ಗಿರೀಶ್ ಅವರು ಸುಖಕರ ಪ್ರಯಾಣವಾಗಲಿ ಎಂದು ಶುಭ ಹಾರೈಸಿದರು. ಈ ವೇಳೆ ಸಂಚಾರ ನಿರೀಕ್ಷಕ ಅಧಿಕಾರಿ ಕೊಟ್ರೇಶ್ ಪುಂಡಿ, ಬಸ್ ನಿಲ್ದಾಣದ ಪೊಲೀಸ್ ಕೊಟ್ರೇಶ್ ಕುಂಬಾರ ಹಾಗೂ ಚಾಲಕರಾದ ಕೃಷ್ಣಮೂರ್ತಿ, ಪ್ರವಾಸಿಗರು ಉಪಸ್ಥಿತರಿದ್ದರು.

## ದೇಶ ಮತ್ತು ಯೋಧರ ವಿಚಾರದಲ್ಲಿ ರಾಜಕೀಯ ಸಲ್ಲ: ದಿನೇಶ್ ಕೆ ಶೆಟ್ಟಿ




**ದಾವಣಗೆರೆ:** ದೇಶ ಮತ್ತು ಯೋಧರ ವಿಚಾರದಲ್ಲಿ ಬಿಜೆಪಿ ರಾಜಕೀಯ ಮಾಡುತ್ತಿರುವುದು ಈ ದೇಶಕ್ಕೆ ಒಳ್ಳೆಯ ಬೆಳವಣಿಗೆಯಲ್ಲ. ಬಿಜೆಪಿ ಪಕ್ಷದವರು ತಮ್ಮ ಕೆಲಸದ ಮೂಲಕ ಜನರ ಬಳಿಗೆ ಹೋಗಬೇಕೆ ವಿನಃ ದೇಶ ಮತ್ತು ಯೋಧರ ವಿಚಾರವನ್ನು ಮುಂದಿಟ್ಟುಕೊಂಡು ಚುನಾವಣೆ ಎದುರಿಸುವುದು ಬೇಡ ಎಂದು ದಾವಣಗೆರೆ ಜಿಲ್ಲಾ ಕಾಂಗ್ರೆಸ್ ಪಕ್ಷದ ಪ್ರಧಾನ ಕಾರ್ಯದರ್ಶಿ ದಿನೇಶ್ ಕೆ ಶೆಟ್ಟಿ ಅಭಿಪ್ರಾಯಪಟ್ಟರು.

ಅವರಿಂದು ದಾವಣಗೆರೆ ಜಿಲ್ಲಾ ಕಾಂಗ್ರೆಸ್ ಪಕ್ಷದ ವತಿಯಿಂದ ದಿವಂಗತ ಎಸ್.ನಿಜಲಿಂಗಪ್ಪ ಬಡಾವಣೆಯಲ್ಲಿರುವ ಅಮರ್ ಜವಾನ್ ಪಾರ್ಕ್‌ನಲ್ಲಿ ಹಮ್ಮಿಕೊಂಡಿದ್ದ ಕಾರ್ಗಿಲ್ ವಿಜಯ ದಿವಸ್ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದರು.

ಯಾರೇ ಆಗಲಿ ದೇಶ ಮತ್ತು ಯೋಧರನ್ನು ಬಳಸಿಕೊಂಡು ರಾಜಕೀಯ ಮಾಡುವುದು ಒಳ್ಳೆಯದಲ್ಲ. ಈ ಹಿಂದೆ ಸಹ ಕಾಂಗ್ರೆಸ್ ಪಕ್ಷ ಅನೇಕ ಯುದ್ಧಗಳನ್ನು ಎದುರಿಸಿ ವಿಜಯೋತ್ಸವ ಆಚರಿಸಿದೆ ಆದರೆ ಎಂದಿಗೂ ಸಹ ಅದನ್ನು ರಾಜಕೀಯಕ್ಕೆ ಬಳಸಿಕೊಳ್ಳಲಿಲ್ಲ ಎಂದು ಉದಾಹರಣೆ ಸಮೇತ ವಿವರಿಸಿದರು.

ಇಂದು ಬಿಜೆಪಿ ಪಕ್ಷ ಭಾರತದ ಮೇಲೆ ಶತ್ರು ದೇಶಗಳಿಂದ ಆಗಿರುವ ದಾಳಿ ಬಗ್ಗೆ ದೇಶದ ನಾಗರಿಕರಲ್ಲಿ ತಪ್ಪು ಅಭಿಪ್ರಾಯ ಮೂಡಿಸಿ ತನ್ನ ರಾಜಕೀಯಕ್ಕೆ ಬಳಸಿಕೊಳ್ಳುತ್ತಿದೆ ಎಂದು ದೂರಿದರು.

ಮಹಾನಗರ ಪಾಲಿಕೆ ಮಾಜಿ ಉಪ ಮಹಾಪೌರ ಸೋಗಿ ಶಾಂತಕುಮಾರ್ ಮಾತನಾಡಿ ದೇಶದ ವಿಚಾರದಲ್ಲಿ ಯೋಧರು ಎಂದಿಗೂ ಸಹ ಸುಮ್ಮನೆ ಕುಳಿತುಕೊಳ್ಳದೆ ತಮ್ಮ ಕರ್ತವ್ಯವನ್ನು ನಿರ್ವಹಿಸುತ್ತಿದ್ದು ಅವರಿಗೆ ನಾವೆಲ್ಲರೂ ಬೆಂಬಲವಾಗಿ ನಿಲ್ಲೋಣ ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ನಿವೃತ್ತ ಯೋಧರಾದ ಮಹೇಂದ್ರ ಕರ್, ಮಂಜ ನಾಯ್ಕ, ಸುರೇಶ್ ರಾವ್, ಸತ್ಯಪ್ರಕಾಶ್, ಬೀರೇಶ್, ಶ್ರೀನಿವಾಸ್, ರೆಡ್ಡಿ, ಮಹಾನಗರ ಪಾಲಿಕೆ ಮಾಜಿ ಸದಸ್ಯರಾದ ಎ.ನಾಗರಾಜ್ ಜಿ.ಎಸ್. ಮಂಜುನಾಥ್, ಬಿ ಎಚ್ ವೀರಭದ್ರಪ್ಪ, ಎಲ್. ಡಿ.ಗೋಣೆಪ್ಪ, ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಎಸ್. ಮಲ್ಲಿಕಾರ್ಜುನ್, ಜಿಲ್ಲಾ ಪರಿಶಿಷ್ಟ ಜಾತಿ ಘಟಕದ ಅಧ್ಯಕ್ಷ ಬಿ ಎಚ್ ವೀರಭದ್ರಪ್ಪ, ಕಾರ್ಯದರ್ಶಿ ಆರ್. ಹೆಚ್.ನಾಗಭೂಷಣ್, ಮಹಿಳಾ ಘಟಕದ ಅಧ್ಯಕ್ಷರಾದ ಅನಿತ ಬಾಯಿ ಮಾಲತೇಶ್, ಮಂಗಳಮ್ಮ ಮಂಜುಳಮ್ಮ ಕವಿತಾ ಚಂದ್ರಶೇಖರ್, ಶುಭ ಮಂಗಳ ಸಲ್ಮಾ ಬಾನು ಯಶೋಧಮ್ಮ ಸುನಂದಮ್ಮ ಉಮಾ ಕುಮಾರ್ ಜಯ ಶಾಮನೂರ ಪದ್ಮ ಪುಷ್ಪ ಮತ್ತಿತರರು ಇದ್ದರು.

## ಅಕ್ರಮವಾಗಿ ಸಂಗ್ರಹಿಸಿಟ್ಟಿದ್ದ ಅಕ್ಕಿ, ರಾಗಿ ವಶ

**ದಾವಣಗೆರೆ:** ಇಲ್ಲಿನ ನಿಜಲಿಂಗಪ್ಪ ಬಡಾವಣೆ 1ನೇ ಮುಖ್ಯರಸ್ತೆಯ ಶೆಡ್ ಒಂದರಲ್ಲಿ ಅಕ್ರಮವಾಗಿ ಅನ್ನಭಾಗ್ಯ ಯೋಜನೆ ಅಡಿಯಲ್ಲಿ ಪಡಿತರ ಚೀಟಿದಾರರಿಗೆ ನೀಡಲಾದ ಅಕ್ಕಿ ಸಂಗ್ರಹಿಸಲಾಗಿದೆ ಎಂದು ಸಾರ್ವಜನಿಕರು ಜಿಲ್ಲಾಧಿಕಾರಿಗಳಿಗೆ ಮಾಹಿತಿ ನೀಡಿದ ಹಿನ್ನೆಲೆಯಲ್ಲಿ ಆಹಾರ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ದಾಳಿ ನಡೆಸಿ ಅಕ್ರಮವಾಗಿ ಸಂಗ್ರಹಿಸಿ ಇಡಲಾಗಿದ್ದ ಅಕ್ಕಿ ಮತ್ತು ರಾಗಿಯನ್ನು ವಶಪಡಿಸಿಕೊಂಡಿದ್ದಾರೆ.

ದಾವಣಗೆರೆ ನಗರ ಆಹಾರ ಇಲಾಖೆಯ ಸಹಾಯಕ ನಿರ್ದೇಶಕ ಎಂ. ಎನ್.ವಿಶ್ವನಾಥಗೌಡ, ಆಹಾರ ನಿರೀಕ್ಷಕರಾದ ಟಿ.ಮಂಜುನಾಥ, ಜೆ.ನಾಗೇಂದ್ರ ಇವರ ತಂಡವು ಬಡಾವಣೆ ಠಾಣೆ ಪೋಲೀಸರೊಂದಿಗೆ ಶುಕ್ರವಾರ ರಾತ್ರಿ ದಾಳಿ ಮಾಡಿ ಅಕ್ರಮ ಅಕ್ಕಿ ಹಾಗೂ ರಾಗಿ ದಾಸ್ತಾನು ಪತ್ತೆ ಮಾಡಿ ವಶಕ್ಕೆ ಪಡೆದಿದ್ದಾರೆ.

ಈ ಸಂಬಂಧ ತನಿಖೆ ನಡೆಸುವಂತೆ ಆಹಾರ ನಿರೀಕ್ಷಕ ಟಿ.ಮಂಜುನಾಥ ಬಡಾವಣೆ ಪೋಲೀಸ್ ಠಾಣೆಯಲ್ಲಿ ದೂರು ನೀಡಿದ್ದು, ಪೋಲೀಸರು ಎಫ್‌ಐಆರ್ ದಾಖಲಿಸಿಕೊಂಡು ತನಿಖೆ ನಡೆಸುತ್ತಿದ್ದಾರೆ.



## ತಾಯ್ನಾಡಿನ ಋಣ ತೀರಿಸಲು ಸೈನಿಕ ವೃತ್ತಿ ಶ್ರೇಷ್ಠ: ಹನುಮಂತಪ್ಪ



**ಚಿಕ್ಕಮಗಳೂರು:** ಭೂಮಿಯಲ್ಲಿ ಜನಿಸಿದ ಮನುಜ ಕೊನೆಗೊಂದು ದಿನ ದೇಹವನ್ನು ತ್ಯಜಿಸಲೇಬೇಕು. ಈ ಮಧ್ಯೆದಲ್ಲಿ ತಾಯ್ನಾಡಿನ ಋಣ ತೀರಿಸಲು ಹಾಗೂ ಭಾರತವನ್ನು ಗಟ್ಟಿಗೊಳಿಸಲು ಸೈನಿಕ ವೃತ್ತಿ ಅತ್ಯಂತ ಶ್ರೇಷ್ಠವಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಸದಸ್ಯ ಕಾರ್ಯದರ್ಶಿ ವಿ.ಹನುಮಂತಪ್ಪ ಹೇಳಿದರು.

ನಗರದ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಜಿಲ್ಲಾ ಮಾಜಿ ಸೈನಿಕರ ಸಂಘದಿಂದ ಏರ್ಪಡಿಸಿದ್ದ 26ನೇ ಕಾರ್ಗಿಲ್ ವಿಜಯೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪ್ರಸ್ತುತ ಕಾಲಮಾನದಲ್ಲಿ ದೇಶವನ್ನು ಕಾಯುವ ಯೋಧರನ್ನು ಸಮಾಜಕ್ಕೆ ಸ್ಪೂರ್ತಿ ಹಾಗೂ ನಾಯಕರಾಗಿ ಕಾಣಬೇಕು. ಆದರೆ ಇಂದಿನ ಯುವಕರು ಸಿನಿಮಾ ನಟರನ್ನೇ ಬದುಕಿನ ನಾಯಕರಾಗಿ ರೂಪಿಸಿಕೊಳ್ಳುತ್ತಿದೆ. ಅಲ್ಲದೇ ಮಾದಕದ್ರವ್ಯಗಳಂಥ ದುಶ್ಚಟಕ್ಕೆ ಬಲಿಯಾಗಿ ಅಮೂಲ್ಯ ಜೀವನದ ದಿಕ್ಕನ್ನು ತಪ್ಪುತ್ತಿದೆ ಎಂದು ತಿಳಿಸಿದರು.

ಯುವಪೀಳಿಗೆಗೆ ಸಲೀಸಾಗಿ ಸಿಗುತ್ತಿರುವ ಮಾದಕವಸ್ತುಗಳಿಂದ ಭವಿಷ್ಯದ ಕನಸನ್ನು ಲೆಕ್ಕಿಸದೇ ಕೆಲವು ನಿಮಿಷಗಳ ಹಮಲಿಗಾಗಿ ಇಡೀ ಜೀವನವನ್ನು ಹಾಳುಮಾಡಿಕೊಳ್ಳುತ್ತಿದೆ. ಈ ಚಟದಿಂದ ಹೊರತರಲು ಪಾಲಕರು ಹೆಚ್ಚು ಕಾಳಜಿ ವಹಿಸಬೇಕು. ಶಾಲಾ–ಕಾಲೇಜುಗಳಲ್ಲಿ ಮಕ್ಕಳ ಚಲನವಲನಗಳ ಬಗ್ಗೆ ಗಮಹರಿಸುತ್ತಿರಬೇಕು ಎಂದು ಕಿವಿಮಾತು ಹೇಳಿದರು.

ಇಂದಿನ ಯುವಕರಿಗೆ ಕ್ರಿಕೇಟ್ ಬೆಟ್ಟಿಂಗ್ ಹಣ ಹೂಡಿಸುವಂಥ ಕ್ರೀಡೆಯಾಗಿದೆ. ಅನೇಕ ಯುವಕರು ಪೋಕ್ಸೋ ಪ್ರಕರಣಗಳಲ್ಲಿ ಸಿಲುಕಿ ಶಿಕ್ಷೆ ಅನುಭವಿಸುತ್ತಿದ್ದಾರೆ. ಈ ಯೌವ್ವನದಲ್ಲಿ ದೇಶಸೇವೆಗಾಗಿ ಮುಡಿಪಿಡುವ ಪ್ರಾಯವನ್ನು ಸಮಾಜಕ್ಕೆ ಮಾರಕವಾಗಿರುವ ಚಟಗಳಿಗೆ ಬಲಿಯಾಗುತ್ತಿರುವುದು ವಿಷಾಧಕರ ಸಂಗತಿ ಎಂದರು.

ಮಾಜಿ ಸೈನಿಕರು ಸಮಸ್ಯೆಗಳನ್ನು ಆಲಿಸುವ ನಿಟ್ಟಿನಲ್ಲಿ ರಾಷ್ಟ್ರಾದ್ಯಂತ ಇಂದು ವೀರ್ ಸಹಾಯಕ್ ಪರಿವಾರ್ ಯೋಜನೆಯನ್ನು ಜಾರಿಗೊಳಿಸಿ ಉಚಿತ ಕಾನೂನು ನೆರವು ಒದಗಿಸಲು ಚಾಲನೆ ನೀಡಲಾಗಿದ್ದು, ಇದರಿಂದ ನಿವೃತ್ತ ಸೈನಿಕರ ಭೂಒತ್ತುವರಿ, ಕೌಟುಂಬಿಕ ಕಲಹಗಳನ್ನು ಬಗೆಹರಿಸಲು ಸಹಕಾರಿಯಾಗಲಿದೆ ಎಂದು ಹೇಳಿದರು.

ಕೆ.ಆರ್.ಎಸ್. ಆಸ್ಪತ್ರೆ ಹೃದ್ರೋಗ ತಜ್ಞ ಡಾ. ಶ್ರೀಧರ್ ಮಾತನಾಡಿ, ಭವಿಷ್ಯದ ಭಾರತವನ್ನು ಕಾಪಾಡಲು ಅಂದಿನ ಯೋಧಕರು ವರ್ತಮಾನದ ಬದುಕನ್ನು ದೇಶಕ್ಕಾಗಿ ಹುತಾತ್ಮರಾದ ಕಾರಣ ಭಾರತದ ಅಸ್ಥಿತ್ವವನ್ನು ಉಳಿಸಿಕೊಂಡು ಯಶಸ್ವಿಯಾಗಿದ್ದು ಶ್ರುತುದೇಶದ ಅನೇಕ ಯುದ್ಧಗಳಲ್ಲಿ ಅತ್ಯಂತ ಕ್ಲಿಷ್ಟಕರ ಯುದ್ಧವೇ ಕಾರ್ಗಿಲ್ ಆಗಿತ್ತು ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಸಂಘದ ಅಧ್ಯಕ್ಷ ಮಂಜುನಾಥ್ ಕಾರ್ಗಿಲ್ ಯುದ್ಧದಲ್ಲಿ ಸುಮಾರು 527 ವೀರ ಯೋಧರು ಹುತಾತ್ಮರಾದರು. ಸುಮಾರು 1369 ಹೆಚ್ಚು ಯೋಧರು ಅಂಗಾಂಗ ವೈಫಲ್ಯದಿಂದ ತುತ್ತಾದರು. ಈ ಪೈಕಿ ವೀರ ಯೋಧರಾದ ನಾಲ್ಕು ಮಂದಿಗೆ ಪರಮವೀರ ಚಕ್ರವನ್ನು ನೀಡಿ ಗೌರವಿಸಲಾಗಿದೆ ಎಂದರು.

ಈ ಸಂದರ್ಭದಲ್ಲಿ ಹಿರಿಯ ವಕೀಲ ಲಕ್ಷ್ಮಣಗೌಡ, ಮಾಜಿ ಸೈನಿಕರ ಸಂಘದ ಮಾಜಿ ಅಧ್ಯಕ್ಷ ಕೃಷ್ಣೇಗೌಡ, ಕಾರ್ಯದರ್ಶಿ ಸಿ.ಕೆ.ಗೋಪಾಲಕೃಷ್ಣ, ಸಹ ಕಾರ್ಯದರ್ಶಿ ರಾಜೇಗೌಡ, ಸದಸ್ಯರಾದ ಹೆಚ್.ಡಿ. ಸುರೇಶ್, ಸಿ.ಟಿ.ಗೋಪಾಲ್, ಪಿ.ಪ್ರಕಾಶ್, ದೈವನಯ, ಸುಶ್ಮಿತಾ ಮತ್ತಿತರರು ಹಾಜರಿದ್ದರು.

## ದೆಹಲಿಯಲ್ಲಿ ಇಂಡಿಯಾ ಮೈತ್ರಿಕೂಟದ ಪ್ರತಿಭಟನೆ; ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ಭಾಗಿ



**ದಾವಣಗೆರೆ/ನವದೆಹಲಿ;** ಬಿಹಾರದಲ್ಲಿ ಭಾರತೀಯ ಚುನಾವಣಾ ಆಯೋಗವು ನಡೆಸುತ್ತಿರುವ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆಯನ್ನು ವಿರೋಧಿಸಿ ಬುಧವಾರ ಲೋಕಸಭೆಯ ವಿರೋಧ ಪಕ್ಷದ ನಾಯಕರಾದ ರಾಹುಲ್ ಗಾಂಧಿಯವರ ನೇತೃತ್ವದಲ್ಲಿ ಇಂಡಿಯಾ ಮೈತ್ರಿಕೂಟದ ಸಂಸದರು ನವದೆಹಲಿಯ ಸಂಸತ್ ಭವನದ ಮಕರದ್ವಾರದಲ್ಲಿ ಪ್ರತಿಭಟನೆ ನಡೆಸಿದರು.ಈ ಪ್ರತಿಭಟನೆಯಲ್ಲಿ ದಾವಣಗೆರೆ ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್ ಸಹ ಭಾಗವಹಿಸಿದ್ದರು.

ಚುನಾವಣಾ ಪ್ರಕ್ರಿಯೆಯ ಪಾರದರ್ಶಕತೆ, ಸಮಾನತೆ ಹಾಗೂ ಜನರ ಹಕ್ಕುಗಳ ಕಾಪಾಡುವ ನಿಟ್ಟಿನಲ್ಲಿ ಈ ಪ್ರತಿಭಟನೆಯನ್ನು ನಡೆಸಲಾಯಿತು. ಮೈತ್ರಿಕೂಟದ ಸಂಸದರು ಕಪ್ಪುಪಟ್ಟಿ ಧರಿಸಿ ಪ್ರಜಾಸತ್ತಾತ್ಮಕ ಮೌಲ್ಯಗಳನ್ನು ಉಲ್ಲಂಘಿಸುವ ಕ್ರಮಗಳ ವಿರುದ್ಧ ತಮ್ಮ ತೀವ್ರ ಆಕ್ರೋಶವನ್ನು ವ್ಯಕ್ತಪಡಿಸಿದರು.ಈ ವೇಳೆ ರಾಹುಲ್ ಗಾಂಧಿಯವರು ಚುನಾವಣಾ ಆಯೋಗದ ಕ್ರಮಗಳ ಮೇಲೆ ತೀವ್ರ ಟೀಕೆ ನಡೆಸಿ, ಜನರ ಮತದಾನ ಹಕ್ಕುಗಳನ್ನು ಅಸಮರ್ಪಕವಾಗಿ ಕಸಿದುಕೊಳ್ಳುವ ಯಾವುದೇ ಯತ್ನವನ್ನು ದೇಶದ ಜನತೆ ಸಹಿಸುವುದಿಲ್ಲ ಎಂಬ ಸ್ಪಷ್ಟ ಸಂದೇಶವನ್ನು ನೀಡಿದರು.ಈ ವೇಳೆ ಮೈತ್ರಿಕೂಟದ ಸಂಸದರು ಉಪಸ್ಥಿತರಿದ್ದರು.

## ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ಆರೋಗ್ಯ ಪರಿಪೂರ್ಣವಾಗಿರುತ್ತದೆ. ಜಂಟಿ ಯೋಜನೆಗಳು ಮತ್ತು ಸಂಶಯಾಸ್ಪದ ಹಣಕಾಸು ಯೋಜನೆಗಳಲ್ಲಿ ಹೂಡಿಕೆ ಮಾಡಬೇಡಿ. ಸ್ನೇಹಿತರು ಮತ್ತು ಕುಟುಂಬದ ಸದಸ್ಯರು ನಿಮಗೆ ನೆರವು ಮತುಪ್ರೀತಿ ಒದಗಿಸುತ್ತಾರೆ. ನಿಮ್ಮ ಪ್ರೇಮಿ ಅಥವಾ ಪ್ರೇಮಿಕ ಇಂದು ತುಂಬಾ ಕೋಪದಲ್ಲಿ ಕಾಣಬಹುದು, ಇದರಿಂದಾಗಿಅವರ ಮನೆಯ ಪರಿಸ್ಥಿತಿ ಇರುತ್ತದೆ. ಅವರು ಕೋಪದಲ್ಲಿದ್ದರೆ , ಅವರನ್ನು ಸಮಾಧಾನಗೊಳಿಸಲು ಪ್ರಯತ್ನಿಸಿ.

### ವೃಷಭ ರಾಶಿ

ಇಂದಿನ ಮನರಂಜನೆ ಕ್ರೀಡಾ ಚಟುವಟಿಕೆಗಳು ಮತ್ತು ಹೊರಾಂಗಣ ಕಾರ್ಯಕ್ರಮಗಳನ್ನು ಒಳಗೊಂಡಿರಬೇಕು. ರಾತ್ರಿಯ ವೇಳೆಯಲ್ಲಿ ಇಂದು ನೀವು ಹಣದ ಪ್ರಯೋಜನವನ್ನು ಪಡೆಯುವ ಪೂರ್ತಿ ಸಾಧ್ಯತೆ ಇದೆ ಏಕೆಂದರೆ ನಿಮ್ಮ ಮೂಲಕ ಕೊಟ್ಟಿರುವ ಹಣ ಇಂದು ನಿಮಗೆ ಮರಳಿ ಸಿಗಬಹುದು. ನಿಮ್ಮ ಸಂಗಾತಿಯ ಜೊತೆಗಿನ ಸಂಬಂಧ ನಿಮ್ಮ ಕಚೇರಿ ಕೆಲಸದ ಕಾರಣ ಹಾಳಾಗಬಹುದು.

### ಮಿಥುನ ರಾಶಿ

ನಿಮ್ಮ ಮನಸ್ಥಿತಿಯನ್ನು ಬದಲಾಯಿಸಲು ಯಾವುದಾದರೂ ಸಾಮಾಜಿಕ ಸಭೆಗೆ ಹಾಜರಾಗಿ. ನಿಮ್ಮ ತಾಯಿ ಅಥವಾ ತಂದೆಯ ಆರೋಗ್ಯಕ್ಕಾಗಿ ನೀವು ಇಂದು ಸಾಕಷ್ಟು ಹಣವನ್ನು ಖರ್ಚು ಮಾಡಬೇಕಾಗಬಹುದು. ಇದು ನಿಮ್ಮ ಹಣಕಾಸಿನ ಸ್ಥಿತಿಯನ್ನು ಹದಗೆಡಿಸುತ್ತದೆ ಆದರೆ ಸಂಬಂಧವನ್ನು ಬಲಪಡಿಸುತ್ತದೆ. ಪ್ರತಿಯೊಬ್ಬರೂ ಇಂದು ನಿಮ್ಮ ಸ್ನೇಹಿತರಾಗಯಸುತ್ತಾರೆ ಮತ್ತು ನಿಮಗೆ ಇದರಿಂದ ಸಂತೋಷವೆನಿಸುತ್ತದೆ.

### ಕರ್ಕ ರಾಶಿ

ನಿಮ್ಮಲ್ಲಿ ಇಂದು ಚುರುಕುತನವನ್ನು ನೋಡಬಹುದು. ನಿಮ್ಮ ಆರೋಗ್ಯವು ಇಂದು ನಿಮ್ಮನ್ನು ಸಂಪೂರ್ಣವಾಗಿ ಬೆಂಬಲಿಸುತ್ತದೆ. ಭೂಮಿಯನ್ನು ಖರೀದಿಸಿದ ಮತ್ತು ಈಗ ಅದನ್ನು ಮಾರಾಟ ಮಾಡಲು ಬಯಸುವ ಜನರು ಇಂದು ಉತ್ತಮ ಖರೀದಿದಾರರನ್ನು ಕಾಣಬಹುದು ಮತ್ತು ಭೂಮಿಯನ್ನು ಮಾರಾಟ ಮಾಡುವ ಮೂಲಕ ಅವರು ಉತ್ತಮ ಹಣವನ್ನು ಪಡೆಯಬಹುದು.

### ಸಿಂಹ ರಾಶಿ

ನಿಮ್ಮ ಸ್ನೇಹಿತರು ಅಥವಾ ಕುಟುಂಬ ಸದಸರೊಂದಿಗಿನ ಸಂತಸದ ಪ್ರಯಾಣ ನಿಮಗೆ ಸಮಾಧಾನ ನೀಡುತ್ತದೆ. ಬ್ಯಾಂಕ್ ವ್ಯವಹರಗಳಲ್ಲಿ ಕಾಳಜಿ ವಹಿಸಬೇಕು. ಇಂದು ನೀವು ಹೆಚ್ಚು ಪ್ರಯತ್ನ ಮಾಡಬೇಕಾಗಿ ಬಂದರೂ ಕೂಡ ಮಕ್ಕಳ ಸಂಗದಲ್ಲಿ ನಿಮ್ಮ ಬಿಡುವಿನ ಸಮಯ ಕಳೆಯಲು ಪ್ರಯತ್ನಿಸಬೇಕು. ನಿಮ್ಮ ನಗು ಯಾವುದೇ ಅರ್ಥ ಹೊಂದಿಲ್ಲ ನಗುವಿಗೆ ಧ್ವನಿಯಿಲ್ಲ ನಿಮ್ಮ ಸಂಗವಿಲ್ಲದಿದ್ದಾಗ ಹೃದಯ ಬಡಿಯುವುದನ್ನು ಮರೆಯುತ್ತದೆ.

### ಕನ್ಯಾ ರಾಶಿ

ನಿಮ್ಮ ಒರಟು ವರ್ತನೆ ನಿಮ್ಮ ಪತ್ನಿಯೊಂದಿಗಿನ ಸಂಬಂಧವನ್ನು ಹಾಳು ಮಾಡಬಹುದು. ಏನಾದರೂ ಬಾಲಿಶವಾದದ್ದನ್ನು ಮಾಡುವ ಮೊದಲು ನಿಮ್ಮ ವರ್ತನೆಯ ಪರಿಣಾಮದ ಬಗ್ಗೆ ಆಲೋಚಿಸಿ. ಸಾಧ್ಯವಾದಲ್ಲಿ ದೂರ ಹೋಗಿ ನಿಮ್ಮ ಮನಸ್ಥಿತಿಯನ್ನು ಬದಲಾಯಿಸಿ. ನಿಮ್ಮ ತಾಯಿ ಅಥವಾ ತಂದೆಯ ಆರೋಗ್ಯಕ್ಕಾಗಿ ನೀವು ಇಂದು ಸಾಕಷ್ಟು ಹಣವನ್ನು ಖರ್ಚು ಮಾಡಬೇಕಾಗಬಹುದು.

### ತುಲಾ ರಾಶಿ

ಗಾಳಿಯಲ್ಲಿ ಮನೆ ಕಟ್ಟುವುದು ನಿಮಗೆ ಸಹಾಯ ಮಾಡಲಾರದು. ನೀವು ಕುಟುಂಬದ ನಿರೀಕ್ಷೆಗಳನ್ನು ಪೂರ್ಣಗೊಳಿಸಲು ಏನಾದರೂ ಮಾಡಬೇಕು.

ಕೆಲಸದ ಸ್ಥಳದಲ್ಲಿ ಅಥವಾ ವ್ಯಾಪಾರದಲ್ಲಿ ನಿಮ್ಮ ಯಾವುದೇ ಅಜಾಗರೂಕತೆ ಇಂದು ನಿಮಗೆ ಆರ್ಥಿಕ ನಷ್ಟವನ್ನು ಉಂಟುಮಾಡಬಹುದು ಕುಟುಂಬದ ಸದಸ್ಯರೊಂದಿಗೆ ಒಂದು ಶಾಂತಿಯುತ ಮತ್ತು ಶಾಂತ ದಿನವನ್ನು ಆನಂದಿಸಿ ಜನರು ಸಮಸ್ಯೆಗಳೊಡನೆ ನಿಮ್ಮನ್ನು ಸಮೀಪಿಸಿದರೆ – ಅವರನ್ನು ನಿರ್ಲಕ್ಷಿಸಿ ಮತ್ತು ನಿಮ್ಮ ಮನಸ್ಸಿನಲ್ಲಿ ಈ ಚಿಂತೆ ಬೇರೂರಲು ಅವಕಾಶ ನೀಡಬೇಡಿ. ಒಂದು ಅಚ್ಚರಿಯ ಸಂದೇಶ ನಿಮಗೆ ಸಿಹಿ ಕನಸುಗಳನ್ನು ನೀಡುತ್ತದೆ.

### ವೃಶ್ಚಿಕ ರಾಶಿ

ಆರೋಗ್ಯ ಪರಿಪೂರ್ಣವಾಗಿರುತ್ತದೆ. ಜೀವನದ ವಾಹನವನ್ನು ಚೆನ್ನಾಗಿ ಚಲಾಯಿಸಲು ಬಯಸುತ್ತಿದ್ದರೆ, ಇಂದು ನೀವು ಹಣದ ಬಗ್ಗೆ ವಿಶೇಷ ಗಮನ ಹರಿಸಬೇಕು. ಹೊಸ ಸಂಬಂಧಗಳು ದೀರ್ಘಾವಧಿಯದ್ದಾಗಿರುತ್ತವೆ ಮತ್ತು ಹೆಚ್ಚು ಅನುಕೂಲಕರವಾಗಿರುತ್ತವೆ. ನಿಮ್ಮ ಹೃದಯಕ್ಕೆ ಪ್ರಿಯವಾಗುವ ಯಾರನ್ನಾದರೂ ಸಂಧಿಸುವ ಅವಕಾಶಗಳು ಇಂದು ಬಲವಾಗಿವೆ. ಇಂದು ಕೆಲಸದಲ್ಲಿ ಎಲ್ಲರೂ ಪ್ರಾಮಾಣಿಕವಾಗಿ ನಿಮ್ಮನ್ನು ಆಲಿಸುತ್ತಾರೆ. ಜೀವನದಲ್ಲಿ ನಡೆಯುತ್ತಿರುವ ಅಡಚಣೆಗಳ ನಡುವೆ ಇಂದು ನಿಮಗೆ ನಿಮಗಾಗಿ ಸಮಯ ಸಿಗುತ್ತದೆ ಮತ್ತು ನಿಮ್ಮ ನೆಚ್ಚಿನ ಕೆಲಸಗಳನ್ನು ಮಾಡಲು ನಿಮಗೆ ಸಾಧ್ಯವಾಗುತ್ತದೆ

### ಧನು ರಾಶಿ

ವಿಶ್ರಾಂತಿ ಪ್ರಮುಖವಾದ ಒಂದು ದಿನ ಇತ್ತೀಚೆಗೆ ನೀವು ಬಹಳಷ್ಟು ಮಾನಸಿಕ ಒತ್ತಡ ಎದುರಿಸುತ್ತಿದ್ದೀರಿ – ಮನೋಲ್ಲಾಸ ಮತ್ತು ಮನೋರಂಜನೆ ನಿಮಗೆ ವಿಶ್ರಾಂತಿ ಪಡೆಯಲು ಸಹಾಯ ಮಾಡುತ್ತದೆ. ಈ ರಾಶಿಚಕ್ರದ ದೊಡ್ಡ ಉದ್ಯಮಿಗಳು ಇಂದು ತುಂಬಾ ಯೋಚಿಸಿ ಅರ್ಥಮಾಡಿಕೊಂಡು ಹಣದ ಹೂಡಿಕೆ ಮಾಡುವ ಅಗತ್ಯವಿದೆ.

### ಮಕರ ರಾಶಿ

ಸಂತಸದ ಪ್ರಯಾಣ ಮತ್ತು ಸಾಮಾಜಿಕ ಕಾರ್ಯಕ್ರಮಗಳು ನಿಮಗೆ ಆರಾಮ ಮತ್ತು ಸಂತೋಷ ತರುತ್ತದೆ. ನಿಮ್ಮ ಹಣವನ್ನು ಉಳಿಸಲು ನೀವು ಇಂದು ನಿಮ್ಮ ಮನೆಯ ಜನರೊಂದಿಗೆ ಮಾತನಾಡಬೇಕು. ಅವರ ಸಲಹೆ ನಿಮ್ಮ ಆರ್ಥಿಕ ಪರಿಸ್ಥಿತಿಯನ್ನು ಸುಧಾರಿಸಲು ಸಹಾಯಕವಾಗುತ್ತದೆ. ಅನಿರೀಕ್ಷಿತ ಅತಿಥಿಗಳು ಸಂಜೆ ನಿಮ್ಮ ಮನೆಯಲ್ಲಿ ತುಂಬಿರುತ್ತಾರೆ. ಇಂದು ನಿಮ್ಮ ಪ್ರೀತಿಯ ಜೀವನದಲ್ಲಿ ಅದ್ಭುತ ದಿನವಾಗಿದೆ.

### ಕುಂಭ ರಾಶಿ

ನಿಮ್ಮ ಸಾಮಾನ್ಯ ಜ್ಞಾನದ ಜೊತೆಗೆ ನಿಮ್ಮ ನಿರಂತರ ಪ್ರಯತ್ನ ಖಂಡಿತವಾಗಿಯೂ ಯಶಸ್ಸು ತರುವುದರಿಂದ ತಾಳ್ಮೆಯಿಂದಿರಿ. ಈ ರಾಶಿಚಕ್ರದ ದೊಡ್ಡ ಉದ್ಯಮಿಗಳು ಇಂದು ತುಂಬಾ ಯೋಚಿಸಿ ಅರ್ಥಮಾಡಿಕೊಂಡು ಹಣದ ಹೂಡಿಕೆ ಮಾಡುವ ಅಗತ್ಯವಿದೆ. ಮೊಮ್ಮಕ್ಕಳು ಅಪಾರ ಸಂತೋಷದ ಮೂಲವಾಗುತ್ತಾರೆ.

### ಮೀನ ರಾಶಿ

ನಿಮ್ಮ ಸಾಮಾನ್ಯ ಜ್ಞಾನದ ಜೊತೆಗೆ ನಿಮ್ಮ ನಿರಂತರ ಪ್ರಯತ್ನ ಖಂಡಿತವಾಗಿಯೂ ಯಶಸ್ಸು ತರುವುದರಿಂದ ತಾಳ್ಮೆಯಿಂದಿರಿ. ನಿಧಿಗಳ ಹಠಾತ್ ಒಳಹರಿವು ನಿಮ್ಮ ಪಾವತಿಗಳು ಮತ್ತು ತಕ್ಷಣದ ವೆಚ್ಚಗಳನ್ನು ನೋಡಿಕೊಳ್ಳುತ್ತದೆ. ನಿಮಗೆ ಗೊತ್ತಿದ್ದ ಯಾರಾದರೂ ಹಣಕಾಸಿಗೆ ಸಂಬಂಧಿಸಿದ ವಿಷಯಗಳಿಗೆ ಅತಿಯಾಗಿ ಪ್ರತಿಕ್ರಿಯಿಸಬಹುದು, ಇದು ಮನೆಯಲ್ಲಿ ಆತಂಕದ ಕ್ಷಣಗಳು ತರುತ್ತದೆ. ಇಂದು ಪ್ರಣಯಕ್ಕಾಗಿ ಸಂಕೀರ್ಣ ಜೀವನವನ್ನು ತ್ಯಜಿಸಿ. ಚಿಲ್ಲರೆ ಮತ್ತು ಸಗಟು ವ್ಯಾಪಾರಿಗಳಿಗೆ ಒಳ್ಳೆಯ ದಿನ

# ಹದಿಹರೆಯದ ಮಕ್ಕಳಿಗೆ ಸರಿಯಾದ ಮಾರ್ಗದರ್ಶನ ಶಿಕ್ಷಣ ಅಗತ್ಯ : ಮಂಜುಳ



**ಚಿಕ್ಕಮಗಳೂರು:** ಕಾಯ, ವಾಚ, ಮನಸಾ ಪ್ರಾಚಾರ್ಯರು ಮತ್ತುಉಪನ್ಯಾಸಕರು ಸೇವೆ ಸಲ್ಲಿಸಿ ವೃತ್ತಿಇರುವುದೇ ಮಕ್ಕಳ ಅಭಿವೃದ್ಧಿಗಾಗಿ–ಶ್ರೇಯಸ್ಸಿಗಾಗಿ ಅನ್ನುವುದನ್ನುಅರ್ಥಮಾಡಿಕೊಂಡು ಶ್ರಮವಹಿಸಿದರೆ ಮಕ್ಕಳಲ್ಲಿರುವ ಪ್ರತಿಭೆ ಸಹಕಾರಿಎಂದು ಶಾಲಾ ಶಿಕ್ಷಣ ಇಲಾಖೆಯ (ಪದವಿ ಪೂರ್ವ) ಉಪನಿರ್ದೇಶಕರಾದ ಮಂಜುಳ.ಕೆ ಅಭಿಪ್ರಾಯಿಸಿದರು.

ಅವರುಇಂದುಜೆವಿಎಸ್‌ಕಾಲೇಜು ಕುವೆಂಪು ಸಭಾಂಗಣದಲ್ಲಿ ಪದವಿ ಪೂರ್ವ ಕಾಲೇಜುಗಳ ಪ್ರಾಚಾರ್ಯರ ಸಂಘ ಏರ್ಪಡಿಸಿದ್ದ ಪ್ರತಿಭಾ ಪುರಸ್ಕಾರ ನಿವೃತ್ತ ಪ್ರಾಚಾರ್ಯರಿಗೆ ಸನ್ಮಾನ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ಹದಿಹರೆಯದ ಮಕ್ಕಳಿಗೆ ಸರಿಯಾದ ಮಾರ್ಗದರ್ಶನದ ಶಿಕ್ಷಣ ಕೊಡುವಜವಾಬ್ದಾರಿ ಕಾಲೇಜುಗಳಿಗಿದೆ. ವಿದ್ಯಾ ಪ್ರತಿಭೆ, ಕ್ರೀಡಾ, ಸಾಂಸ್ಕೃತಿಕ ಪ್ರತಿಭೆಗಳೂ ಸೇರಿದಂತೆಎಲ್ಲವೂ ಹೊರಬರಲುಕಾರಣವಾಗಿ ಪ್ರತಿಭಾ ಶಕ್ತಿಯಾಗಿ ರೂಪುಗೊಳ್ಳುತ್ತದೆ, ಪ್ರೇರಣೆಯಾಗುತ್ತದೆಎಂದು ಹೇಳಿದರು.

ಕಳೆದ ಎರಡು ವರ್ಷದಲ್ಲಿ ದ್ವಿತೀಯ ಪಿಯುಸಿಯಲ್ಲಿ ವಾಣಿಜ್ಯ, ಕಲಾ, ವಿಜ್ಞಾನ ವಿಭಾಗದಲ್ಲಿ ಶಿಕ್ಷಣ ಪಡೆದುಅತೀ ಹೆಚ್ಚು ಅಂಕ ಪಡೆದಜಿಲ್ಲಾ ಮಟ್ಟ, ತಾಲ್ಲೂಕು ಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದ ವಿದ್ಯಾರ್ಥಿ–ವಿದ್ಯಾರ್ಥಿನಿಯರನ್ನು ಆಹ್ವಾನಿಸಿ ಪ್ರೋತ್ಸಾಹಧನದೊಂದಿಗೆಗೌರವಿಸುವ ಕೆಲಸವನ್ನು ಪ್ರಾಚಾರ್ಯರ ಸಂಘ ಮಾಡುತ್ತಿರುವುದುಅಭಿನಂದನೀಯಎಂದರು.

ಕಳೆದ 35 ವರ್ಷಗಳಿಂದ ಸೇವೆ ಸಲ್ಲಿಸಿ ನಿವೃತ್ತರಾಗಿರುವ ಪ್ರಾಚಾರ್ಯರನ್ನುಕರೆದು ಜಿಲ್ಲಾಮಟ್ಟದಲ್ಲಿಗೌರವಿಸುತ್ತಿರುವುದುಅವರಿಗ ತೃಪ್ತಿ ನೀಡಿದೆಎಂದು ಭಾವಿಸುತ್ತೇನೆಎಂದು ತಿಳಿಸಿದರು.

ಶಿಕ್ಷಣ ಕ್ಷೇತ್ರಅತ್ಯಂತ ಪವಿತ್ರವಾಗಿದ್ದು, ಸಮಾಜದ ಒಳಿತಿಗೆ ಈ ನಮ್ಮಕ್ಷೇತ್ರ ಪ್ರಮುಖ ಪಾತ್ರ ವಹಿಸಬೇಕು. ಶಿಕ್ಷಕರು, ಉಪನ್ಯಾಸಕರು, ಪ್ರಾಚಾರ್ಯರು ಸನ್ನಡತೆಯಿಂದ ಸದ್ಗುಣ, ಸಹನೆಯಿಂದ ವರ್ತಿಸಿದರೆ ಸಮಾಜವೂಕಲಿಯುತ್ತದೆಎಂಬುದನ್ನು ನಂಬಿದ್ದೇನೆಎಂದು ಹೇಳಿದರು.ಸಂಘದಅಧ್ಯಕ್ಷೆ ತಸ್ನೀಮಾ ಫಾತೀಮಾ ಮಾತನಾಡಿ, ಸಂಘದ ವತಿಯಿಂದ ಹಲವಾರು ಶಿಕ್ಷಣಕ್ಕೆ ಪೂರಕವಾದ ಕಾರ್ಯಕ್ರಮಗಳನ್ನು ನಡೆಸುತ್ತಾ ಬರುತ್ತಿದ್ದು, ಕಾಲೇಜಿನಲ್ಲಿ ಪ್ರಾಂಶುಪಾಲರು ಮತ್ತುಉಪನ್ಯಾಸಕರಜವಾಬ್ದಾರಿಕರ್ತವ್ಯದಜೊತೆಗೆ ವಿದ್ಯಾರ್ಥಿಗಳ ಸಮಸ್ಯೆಗಳ ಬಗ್ಗೆಯೂಚಿಂತನೆ ಮಾಡುವುದುಅಗತ್ಯಎಂದರು.

ಸಂಘದಎಲ್ಲರ ಸಹಕಾರದೊಂದಿಗೆ ಬ್ಯಾಂಕಿನಲ್ಲಿ ಪ್ರತ್ಯೇಕ ಉಳಿತಾಯ ಖಾತೆತೆರೆದು 12 ಲಕ್ಷರೂ ನಿಶ್ಚಿತ ಠೇವಣಿಯನ್ನುಇಡಲಾಗಿದ್ದು, ಈ ಹಣವನ್ನುಅನ್ಯಉದ್ದೇಶಕ್ಕೆ ಬಳಸದೆ ಸಂಘದ ನಿವೇಶನ ಖರೀದಿಗೆ ನೀಡಲು ನಿರ್ಧರಿಸಲಾಗಿದೆಎಂದು ಹೇಳಿದರು.

ಕಾರ್ಯದರ್ಶಿ ತೇಜಸ್ವಿನಿ.ಜಿ, ಖಜಾಂಚಿ ಎಚ್.ಎಂ.ನಾಗರಾಜರಾವ್, ರಾಜ್ಯ ಪ್ರಾಂಶುಪಾಲ ಸಂಘದಜಿಲ್ಲಾ ಪ್ರತಿನಿಧಿ ರವಿಕಾಂತ್, ಪ.ಪೂ.ಕಾ.ಪ್ರಾ.ಸಂ ಉಪಾಧ್ಯಕ್ಷರಾದ ವಿರೂಪಾಕ್ಷ.ಜಿ.ಬಿ, ಸೋಮಶೇಖರ್.ಎಂ.ಎಲ್, ಉಪಾಧ್ಯಕ್ಷ ಮಿನಿ ಥಾಮಸ್, ಸಹಕಾರ್ಯದರ್ಶಿನಾಗಮಣಿ, ಸ.ಪ.ಪೂ ಕಾಲೇಜು ಪ್ರಾಚಾರ್ಯರಾದ ಶಿವಕುಮಾರ್.ಕೆ.ಆರ್, ಜಯಪ್ಪ.ಸಿ.ಆರ್, ಪುಟ್ಟಸ್ವಾಮಿನಾಯ್ಕ್, ಭಾಗೀರಥಿ, ಭೂದೇಶ.ಕೆ.ಆರ್, ಅರುಣ್‌ಕುಮಾರ್.ಟಿ.ಆರ್, ಎಂ.ಆರ್.ಮುರಳೀಧರ, ಹೆಚ್.ಎಂ.ಸದಾಶಿವಯ್ಯ, ಅನಂತಪದ್ಮನಾಭ.ಎ.ಡಿ ಉಪಸ್ಥಿತರಿದ್ದರು.

## ಹೊಳೆ ಜಾತ್ರೆ ಕಾರ್ಣಿಕೋತ್ಸವ

**ಸಾಸ್ವೆಹಳ್ಳಿ:** ಹೊನ್ನಾಳಿ ತಾಲೂಕು ಕಮ್ಮಾರಗಟ್ಟೆ ಗ್ರಾಮದ ಪುರಾಣ ಪ್ರಸಿದ್ಧ ಶ್ರೀ ಆಂಜನೇಯ ಸ್ವಾಮಿಯ ಹೊಳೆ ಜಾತ್ರೆ ಕಾರ್ಣಿಕೋತ್ಸವ ಜು.28, 29 ರಂದು ನಡೆಯಲಿದೆ. ಜು.28ರ ಸೋಮವಾರ ಗರುಡಪಂಚಮಿ, 29ರ ಹೇಳವನಕಟ್ಟೆ ಗಿರಿಯಮ್ಮ ಪುಣ್ಯತಿಥಿ, ಹೊಳೆ ಜಾತ್ರೆ, ಆಂಜನೇಯ ಸ್ವಾಮಿಯ ಕಾರ್ಣಿಕೋತ್ಸವ ನಡೆಯಲಿದೆ ಎಂದು ದೇವಾಲಯದ ಆಡಳಿತ ಮಂಡಳಿ ತಿಳಿಸಿದೆ.

## ನಗರದಲ್ಲಿ ಇಂದು ಸಂದರ್ಶನ

**ದಾವಣಗೆರೆ :** ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ವತಿಯಿಂದ ಇಂದು ಬೆಳಿಗ್ಗೆ 10 ಗಂಟೆಗೆ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಕೊಠಡಿ –51, ಕಚೇರಿಯಲ್ಲಿ ಜಿಲ್ಲಾಧಿಕಾರಿಗಳ ಇಂಟರ್‌ವೀವ್ ಆಯೋಜಿಸಲಾಗಿದೆ.ವಾಕ್ ಇನ್ ಇಂಟರ್‌ವೀವ್‌ನಲ್ಲಿ ಖಾಸಗಿ ಸಂಸ್ಥೆಗಳು ಭಾಗವಹಿಸುತ್ತಿದ್ದು, ತಮ್ಮ ಸಂಸ್ಥೆಯಲ್ಲಿ ಖಾಲಿ ಇರುವ ಹುದ್ದೆಗಳಿಗೆ ಎಸ್.ಎಸ್.ಎಲ್.ಸಿ., ಪಿಯುಸಿ, ಐ.ಟಿ.ಐ. ಡಿಪ್ಲೋಮಾ, ಪದವಿ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿ ಗಳನ್ನು ನೇಮಕಾತಿ ಮಾಡಿಕೊಳ್ಳಲಿದ್ದಾರೆ. ಆಸಕ್ತ ಅಭ್ಯರ್ಥಿಗಳು ಕನಿಷ್ಠ 05 ಬಯೋಡಾಟಾ ಮತ್ತು ಆಧಾರ್ ನಂಬರ್ ನೊಂದಿಗೆ ಭಾಗವಹಿಸಬ ಹುದು. ಹೆಚ್ಚಿನ ಮಾಹಿತಿಗಾಗಿ ದೂ.ಸಂ: 74838* 08321 08192–259446 ಸಬಹುದೆಂದು ಜಿಲ್ಲಾ ಉದ್ಯೋಗಾಧಿಕಾರಿ ರವೀಂದ್ರ ತಿಳಿಸಿದ್ದಾರೆ.

## ದಿನೇಶ್ ಜೈನ್‌ಗೆ ಸನ್ಮಾನ

**ದಾವಣಗೆರೆ :** ನಗರದ ರೇಣುಕ ಮಂದಿರದಲ್ಲಿ ಕಳೆದ ವಾರ ನಡೆದ ಆಷಾಢ ಮಾಸದ ಇಷ್ಟಲಿಂಗ ಮಹಾಪೂಜೆ ಕಾರ್ಯಕ್ರಮದಲ್ಲಿ ಅವರಗೆರೆ ಗೋಶಾಲೆ ಅಧ್ಯಕ್ಷರೂ ಆಗಿರುವ ವರ್ತಕ ದಿನೇಶ್ ಪಿ. ಜೈನ್ ಮತ್ತು ಮಮತ ಡಿ. ಜೈನ್ ದಂಪತಿಗೆ ರಂಭಾಪುರಿ ಜಗದ್ಗುರುಗಳು ಗುರು ರಕ್ಷೆ ನೀಡಿದರು.

## ಭಗವತ್ ಪ್ರಸಾದ್‌ಗೆ ಚಿನ್ನದ ಪದಕ

**ದಾವಣಗೆರೆ:** ಜಿಲ್ಲಾ ಯೋಗಾಸನ ಸ್ಪೋರ್ಟ್ಸ್ ಅಸೋಸಿಯೇಷನ್ ಹಾಗೂ ಜಿಲ್ಲಾ ಒಕ್ಕೂಟ ಇವರ ಸಂಯುಕ್ತಾಶ್ರಯದಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಭವನದಲ್ಲಿ ಕಳೆದ ವಾರ ನಡೆದ ಅಂತರ್ ಜಿಲ್ಲಾ ಮಟ್ಟದ ಯೋಗಾಸನ ಚಾಂಪಿಯನ್ ಶಿಪ್ ಸ್ಪರ್ಧೆಯಲ್ಲಿ ಪಿಯು ಕಾಲೇಜಿನ ವಿದ್ಯಾರ್ಥಿ ಭಗವತ್ ಪ್ರಸಾದ್ ವಿ. ಎಸ್. ಪ್ರಥಮ ಸ್ಥಾನದೊಂದಿಗೆ ಬಂಗಾರದ ಪದಕ ಪಡೆದಿದ್ದಾರೆ.

# ಗಿರಿಗೆ ವಾಹನ ಮಿತಿನಿಗದಿಪಡಿಸಿದ ಕ್ರಮಸ್ವಾಗತಾರ್ಹ ತಾಳಿಕೆ ಸಾಮರ್ಥ್ಯದ ಬಗ್ಗೆ ಇನ್ನಷ್ಟು ವೈಜ್ಞಾನಿಕ ಚಿಂತನೆ ಅಗತ್ಯ

**ಚಿಕ್ಕಮಗಳೂರು:** ಗಿರಿ ಪ್ರದೇಶಕ್ಕೆ ವಾಹನಗಳಪ್ರವೇಶಕ್ಕೆಮಿತಿ ನಿಗದಿಪಡಿಸುವಮೂಲಕ ವಾಹನ ದಟ್ಟಣೆಯನ್ನು ನಿಯಂತ್ರಿಸಲು ಮುಂದಾಗಿರುವಜಿಲ್ಲಾಡಳಿತದ ಕ್ರಮ ಸ್ವಾಗತಾರ್ಹ. ಇದನ್ನು ನಾವು ತುಂಬು ಮನಸ್ಸಿನಿಂದ ಸ್ವಾಗತಿಸುವುದಾಗಿಪರಿಸರವಾದಿಗಳು ತಿಳಿಸಿದ್ದಾರೆ.

ಈ ಕುರಿತು ಹೇಳಿಕೆಯೊಂದನ್ನು ಬಿಡುಗಡೆ ಮಾಡಿರುವ ಭದ್ರಾ ವೈಲ್ಡ್ ಲೈಫ್‌ಕನ್ಸರ್ವೇಶನ್ ಸೊಸೈಟಿಯ ಮುಖ್ಯಸ್ಥ ಡಿ.ವಿ.ಗಿರೀಶ್, ರಾಜ್ಯ ವನ್ಯಜೀವಿ ಮಂಡಳಿಯ ಮಾಜಿ ಸದಸ್ಯಸ.ಗಿರಿಜಾಶಂಕರ ಹಾಗೂ ಭದ್ರಾ ವೈಲ್ಡ್‌ಕ್ಯಾಟ್–ಸಿ.ಯ ಮುಖ್ಯಸ್ಥ ಶ್ರೀದೇವ್ ಹುಲಿಕೆರೆ, ಜಿಲ್ಲಾಡಳಿತದ ದೂರದೃಷ್ಟಿಯಅತ್ಯಂತ ವಿವೇಚನಾಯುತಕ್ರಮಇದುಎಂದಿದ್ದಾರೆ. 2018ರಲ್ಲೇ ಗಿರಿಯ ತಾಳಿಕೆ ಸಾಮರ್ಥ್ಯ ಆಧರಿಸಿ ವಾಹನಗಳನ್ನು ಬಿಡುವಂತಾಗಬೇಕೆಂದು ಸಲಹೆ ಮಾಡಲಾಗಿತ್ತು. ಈಗಲಾದರೂಈ ಬಗ್ಗೆ ಜಿಲ್ಲಾಡಳಿತ ಗಮನ ಹರಿಸಿರುವುದು ನಿಜಕ್ಕೂ ಸಂತಸವುಂಟು ಮಾಡುವ ಸಂಗತಿ. ಜೊತೆಗೆ ಮುಂಗಡ ಬುಕ್ಕಿಂಗ್ ವ್ಯವಸ್ಥೆ ಸಹ ಅನುಕೂಲವಾಗಲಿದೆಎಂದು ಹೇಳಿದ್ದಾರೆ.

ಇದೀಗ ಬೆಳಗ್ಗಿನಿಂದ ಮಧ್ಯಾಹ್ನದವರೆಗೆ 600 ಹಾಗೂ ಮಧ್ಯಾಹ್ನದಿಂದಸಂಜೆಯವರೆಗೆ 600 ವಾಹನಗಳನ್ನು ಎರಡು ಹಂತಗಳಲ್ಲಿ ಗಿರಿಕಡೆಗೆ ಪ್ರವೇಶಿಸಲು ಬಿಡುವುದಕ್ಕೆಕೈಗೊಂಡ ಜಿಲ್ಲಾಡಳಿತದ ನೀತಿ ಕೇವಲ ವಾಹನದಟ್ಟಣೆ ಹಿನ್ನೆಲೆಯಲ್ಲಿಜನರ ಅನುಕೂಲವನ್ನಾಧರಿಸಿದ ಕ್ರಮವಾಗಬಾರದು. ಇಲ್ಲಿ ಗಿರಿಶಿಖರಗಳು,ರಸ್ತೆಗಳ ತಾಳಿಕೆ ಸಾಮರ್ಥ್ಯವನ್ನುಗಣನೆಗೆ ತೆಗೆದುಕೊಳ್ಳಲೇಬೇಕು.1200 ವಾಹನಗಳ ಮಿತಿಗಿರಿಯ ತಾಳಿಕೆ ಸಾಮರ್ಥ್ಯಕ್ಕೆ ಪೂರಕವಾಗಿದೆಯೇ ಎಂಬ ಬಗ್ಗೆ ಭೂಗರ್ಭತಜ್ಞರಿಂದ ವೈಜ್ಞಾನಿಕವಾಗಿಪುನರ್ಪರಿಶೀಲನೆ ನಡೆಯಬೇಕಿದೆ. ಅನಂತರವಷ್ಟೇಅಂತಿಮವಾಗಿ ನಿರ್ಧರಿಸಬೇಕು. ಅದು ಬಿಟ್ಟು ಈ ತೀರ್ಮಾನಜನರ ಅನುಕೂಲಕ್ಕಾಗಿ ಕೈಗೊಂಡಒಂದುಅಂದಾಜು ಮಾತ್ರಆಗಬಾರದುಎಂದುಅವರು ಸಲಹೆ ನೀಡಿದ್ದಾರೆ.

ಸೀತಾಳಯ್ಯನಗಿರಿಯಲ್ಲಿ ಕಟ್ಟಡ ನಿರ್ಮಿಸುವ ತೀರ್ಮಾನಕ್ಕೆಗೊಂಡಿರುವುದನ್ನುತೀವ್ರವಾಗಿ ವಿರೋಧಿಸುವುದಾಗಿ ತಿಳಿಸಿರುವ ಅವರು, ಗಿರಿಯ ಮೇಲೆ ಯಾವುದೇ ಕಟ್ಟಡಗಳ ನಿರ್ಮಾಣಕ್ಕೆ ಅವಕಾಶ ನೀಡಬಾರದೆಂಬ ಬಗ್ಗೆ ನ್ಯಾಯಾಲಯದ ಆದೇಶಕೂಡ ಇದೆಎಂದುತಿಳಿಸಿದ್ದಾರೆ.ಇದೀಗ ಫುಡ್‌ಕೋರ್ಟ್ ಮಾದರಿಯಲ್ಲಿಕಟ್ಟಡ ನಿರ್ಮಿಸಲು ಜಿಲ್ಲಾಡಳಿತ ತೀರ್ಮಾನಿಸಿರುವುದು ಸಮಂಜಸವಲ್ಲ. ಒಂದು ವೇಳೆ ಈ ರೀತಿಕಟ್ಟಡನಿರ್ಮಾಣಕ್ಕೆಅನುಮತಿ ನೀಡಿದಲ್ಲಿಅದು ಪಶ್ಚಿಮಘಟ್ಟದ ಅತ್ಯಂತ ಪ್ರಶಾಂತವಾದನಿಸರ್ಗದ ಮಡಿಲಿನಲ್ಲಿ, ಅಸಂಖ್ಯಾತ ವನ್ಯಜೀವಿಗಳಿಗೆ ಆಶ್ರಯತಾಣವಾದ ಪ್ರದೇಶದಲ್ಲಿ ನಗರೀಕರಣಉದಯಿಸುವಪ್ರಥಮಹೆಜ್ಜೆಯಾಗಲಿದೆ. ಮತ್ತಷ್ಟು ಕಟ್ಟಡಗಳ ನಿರ್ಮಾಣಕ್ಕೆಅನುಮತಿ ನೀಡುವ ಅನಿವಾರ್ಯತೆ ಮುಂದೆ ಸೃಷ್ಟಿಯಾಗಿಅಪಾಯಕಾರಿ ಬೆಳವಣಿಗೆಗೆ ಮುನ್ನುಡಿಯಾಗಲಿದೆ.ಈ ಬಗ್ಗೆ ಮುಂದುವರಿದಲ್ಲಿಕಾನೂನು ಹೋರಾಟ ಅನಿವಾರ್ಯವಾಗುತ್ತದೆಎಂದುಅವರು ಗಮನ ಸೆಳೆದಿದ್ದಾರೆ.

### ಧರ್ಮಸ್ಥಳ ಸರಣಿ ಹತ್ಯೆ ಪ್ರಕರಣ: ಎಸ್.ಐ.ಟಿ.ಗೆ

# ಸರ್ಕಾರದ ನಿರ್ಧಾರ ಸ್ವಾಗತಾರ್ಹ



**ಚಿಕ್ಕಮಗಳೂರು:** ಧರ್ಮಸ್ಥಳದಲ್ಲಿ ನಡೆದಿದೆ ಎನ್ನಲಾದ ಸರಣಿ ಹತ್ಯೆ ಪ್ರಕರಣವನ್ನು ಎಸ್.ಐ.ಟಿ. ತನಿಖೆಗೆ ವಹಿಸಿರುವ ರಾಜ್ಯ ಸರ್ಕಾರದ ನಿರ್ಧಾರ ಸ್ವಾಗತಾರ್ಹ ಕ್ರಮ ಎಂದು ಹಝರತ್ ಟಿಪ್ಪು ಸುಲ್ತಾಲ್ ಚಾರಿಟಬಲ್ ಟ್ರಸ್ಟ್‌ನ ರಾಜ್ಯಾಧ್ಯಕ್ಷ ಜಮ್‌ಷೀದ್ ಖಾನ್ ಹೇಳಿದ್ದಾರೆ.

ಸರಣಿ ಹತ್ಯೆ ಇದೊಂದು ಗಂಭೀರ ಪ್ರಕರಣವಾಗಿದ್ದು, ಅಮಾಯಕರು ಬಲಿಯಾಗಿರುವ ಶಂಕೆ ಇದ್ದು, ಘಟನೆ ಕುರಿತು ನಿಷ್ಪಕ್ಷಪಾತ ತನಿಖೆ ನಡೆಸಿ ತಪ್ಪಿತಸ್ಥರಿಗೆ ಕಠಿಣ ಶಿಕ್ಷೆ ವಿಧಿಸಬೇಕೆಂದು ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಕಳೆದೊಂದು ದಶಕದ ಹಿಂದೆ ಇದೇ ಧರ್ಮಸ್ಥಳದಲ್ಲಿ ನಡೆದಿರುವ ಸೌಜನ್ಯ ಎಂಬ ಯುವತಿಯ ಹತ್ಯೆ ಪ್ರಕರಣ ಇಡೀ ದೇಶಾದ್ಯಂತ ಸುದ್ದಿಯಾಗಿದ್ದರೂ ಈ ಪ್ರಕರಣದಲ್ಲಿ ಆರೋಪಿಗಳನ್ನು ಈವರೆಗೂ ಬಂಧಿಸಲಾಗಿಲ್ಲ. ಈ ಪ್ರಕರಣ ಹಸಿಯಾಗಿರುವಾಗಲೇ ಧರ್ಮಸ್ಥಳದಲ್ಲಿ ನೂರಾರು ಜನರ ಹತ್ಯೆ ನಡೆದಿದೆ ಎಂದು ಹೇಳಿಕೆ ನೀಡಿ, ಸಾಕ್ಷಿ ಹೇಳಲು ಮುಂದೆ ಬಂದಿರುವ ವ್ಯಕ್ತಿಗೆ ಸೂಕ್ತ ರಕ್ಷಣೆ ನೀಡಬೇಕೆಂದು ಒತ್ತಾಯಿಸಿದ್ದಾರೆ.

ಮುಖ್ಯಮಂತ್ರಿ ಸಿದ್ಧರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ ತನಿಖೆಯನ್ನು ಎಸ್.ಐ.ಟಿ. ತನಿಖೆಗೆ ವಹಿಸಿದ್ದು, ಈ ಪ್ರಕರಣದ ಹಿಂದೆ ಕೆಲವು ಪಟ್ಟಭದ್ರ ಹಿತಾಸಕ್ತಿಗಳ ಕೈವಾಡವಿದೆ ಎಂಬ ಗುಮಾನಿ ಕಾಡುತ್ತಿದೆ. ಕೆಲವು ರಾಜಕಾರಣಿಗಳು ಜೊತೆಗೆ ಕೆಲವು ಕಾಣದ ಕೈಗಳು ಕೂಡ ಈ ಹತ್ಯೆ ಹಿಂದೆ ಕೆಲಸ ಮಾಡಿದೆ ಎಂಬ ಅನುಮಾನಗಳು ಇದ್ದು, ತನಿಖೆಯ ಜವಾಬ್ದಾರಿ ವಹಿಸಿಕೊಂಡಿರುವ ಎಸ್.ಐ.ಟಿ. ಅಧಿಕಾರಿಗಳು ಸ್ಥಳೀಯ ಪೊಲೀಸರನ್ನು ಹೊರಗಿಟ್ಟು ನ್ಯಾಯಸಮ್ಮತ ತನಿಖೆ ನಡೆಸುವಂತೆ ಆಗ್ರಹಿಸಿದ್ದಾರೆ.

ಹಿಂದೂ ಧರ್ಮದ ವಕ್ತಾರರೆಂದು ಭಾಷಣ ಮಾಡುವ ಕೋಮುವಾದಿ ಸಂಘಟನೆಗಳ ಕೆಲ ಮುಖಂಡರು ಹಿಂದೂ ಸಮುದಾಯದ ಬಗ್ಗೆ ಉದ್ದುದ್ದ ಭಾಷಣ ಮಾಡುತ್ತಾ, ಹಿಂದೂ ಸಮುದಾಯದ ವಕ್ತಾರರೆಂದು ಹೇಳಿಕೊಂಡು ಜಾತಿ ಜಾತಿಗಳ ನಡುವೆ ಸಂಘರ್ಷದ ವಿಷಬೀಜ ಬಿತ್ತಿ ಕೋಮು ಸೌಹಾರ್ದತೆ ಕದಡುವ ಕೆಲಸ ಮಾಡುತ್ತಿರುವ ಹಿಂದೂ ಸಂಘಟನೆ ಮುಖಂಡರು ಈ ಧರ್ಮಸ್ಥಳ ಸರಣಿ ಹತ್ಯೆ ಪ್ರಕರಣದಲ್ಲಿ ಮೌನ ವಹಿಸಿರುವುದು ಹಲವು ಸಂಶಯಗಳಿಗೆ ಎಡೆಮಾಡಿದೆ. ಈ ಮುಖಂಡರಿಗೆ ನಿಜವಾಗಿಯೂ ಹಿಂದೂ ಸಂಘಟನೆಯ ಮೇಲೆ ನಂಬಿಕೆ, ಗೌರವ ಇದ್ದಲ್ಲಿ ಈ ಸರಣಿ ಹತ್ಯೆ ಪ್ರಕರಣದ ಬಗ್ಗೆ ಬೀದಿಗಿಳಿದು ಹೋರಾಟ ಮಾಡಬೇಕೆಂದು ಒತ್ತಾಯಿಸಿದ್ದಾರೆ.

ಈ ಪ್ರಕರಣದಲ್ಲಿ ನಿಷ್ಪಕ್ಷಪಾತ ತನಿಖೆ ನಡೆದು ಹತ್ಯೆಯಾಗಿರುವ ಅಮಾಯಕ ಕುಟುಂಬಗಳಿಗೆ ನ್ಯಾಯ ಸಿಗಬೇಕಾದಲ್ಲಿ ಯಾವುದೇ ಪಕ್ಷದ ರಾಜಕಾರಣಿಗಳು ಈ ಹತ್ಯೆ ಪ್ರಕರಣದಲ್ಲಿ ಮೂಗು ತೂರಿಸಬಾರದೆಂದು ಮನವಿ ಮಾಡಿದ್ದಾರೆ.

# ಸ್ವಚ್ಛತೆ ಮೂಲಕ ಬಹು ದೊಡ್ಡ ಕಾಯಕ ಮಾಡುತ್ತಿರುವ ಪೌರಕಾರ್ಮಿಕರು ಆರೋಗ್ಯಕ್ಕೆ ಆದ್ಯತೆ ಕೊಡಬೇಕು



**ಚಿಕ್ಕಮಗಳೂರು:** ಸ್ವಚ್ಛತೆ ಮೂಲಕ ಬಹುದೊಡ್ಡಕಾಯಕ ಮಾಡುತ್ತಿರುವ ಪೌರಕಾರ್ಮಿಕರು ನಗರದ ನಾಗರೀಕರಆರೋಗ್ಯಕಾಪಾಡಲು ಶ್ರಮಿಸುತ್ತಿರುವಜೊತೆಗೆತಮ್ಮಆರೋಗ್ಯಕ್ಕೆಆದ್ಯ ಗಮನ ಕೊಡಬೇಕುಎಂದು ನಗರಸಭಾಧ್ಯಕ್ಷೆ ಶೀಲಾ ದಿನೇಶ್ ಹೇಳಿದರು.

ಅವರುಇಂದು ನಗರಸಭೆಆವರಣದಲ್ಲಿ ಸಹ್ಯಾದ್ರಿ ನಾರಾಯಣ ಹೃದಯಾಲಯ ಶಿವಮೊಗ್ಗ, ನಗರಸಭೆ, ಜಿಲ್ಲಾ ವಿಕಲಚೇತನರ ಪುನರ್ ವಸತಿಕೇಂದ್ರ, ಎಸ್‌ಪಿಐಡಿ ಸಂಸ್ಥೆ, ಹಿರಿಯ ನಾಗರೀಕರ ಸಹಾಯವಾಣಿಕೇಂದ್ರ ಇವರುಗಳ ಸಂಯುಕ್ತಾಶ್ರಯದಲ್ಲಿಜೀವಿತಾ ಫೌಂಡೇಶನ್ ಏರ್ಪಡಿಸಿದ್ದ ಪೌರಕಾರ್ಮಿಕರಿಗೆಉಚಿತಆರೋಗ್ಯತಪಾಸಣಾ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು.

ಇಂದು ನಡೆಯುತ್ತಿರುವಉಚಿತಆರೋಗ್ಯತಪಾಸಣಾ ಶಿಬಿರದಲ್ಲಿ ಪರೀಕ್ಷೆ ಮಾಡಿಸಿಕೊಂಡ ಪೌರಕಾರ್ಮಿಕರುತಮ್ಮಆರೋಗ್ಯಕ್ಕೆ ಹೆಚ್ಚು ಒತ್ತುನೀಡಿದಾಗ ಮಾತ್ರ ನಗರದಅಭಿವೃದ್ಧಿಗೆ ಸಹಕಾರಿಯಾಗಲಿದೆಎಂದರು.

ಪೌರಕಾರ್ಮಿಕರಿಗೆಗ್ಲೌಸ್, ಶೂ ಮತ್ತಿತರ ಮೂಲ ಸೌಕರ್ಯಗಳನ್ನು ನಗರಸಭೆ ಒದಗಿಸಿದ್ದರೂ ಧರಿಸದೇ ಬಂದು ಸ್ವಚ್ಛತೆಕಾರ್ಯ ಮಾಡುತ್ತಿರುವ ಬಗ್ಗೆ ಸಂಬಂಧಪಟ್ಟಇಂಜಿನಿಯರ್‌ಗೆ ಸೂಚನೆ ನೀಡಿದರು.

ಪೌರಾಯುಕ್ತ ಬಿ.ಸಿ. ಬಸವರಾಜ್ ಮಾತನಾಡಿ, ಪೌರಕಾರ್ಮಿಕರಿಗೆ ಪ್ರತಿ ಮೂರು ತಿಂಗಳಿಗೊಮ್ಮೆ ಆರೋಗ್ಯತಪಾಸಣಾ ಶಿಬಿರವನ್ನು ನಡೆಸುತ್ತಿದ್ದು, ಇದಕ್ಕೆ ಪೂರಕವಾಗಿಜೀವಿತಾ ಫೌಂಡೇಶನ್‌ಅವರು ಮುಂದೆ ಬಂದಿರುವುದಕ್ಕೆ ಧನ್ಯವಾದಗಳನ್ನು ಅರ್ಪಿಸಿದರು.

ಪೌರಕಾರ್ಮಿಕರು ವೈದ್ಯರ ಸಲಹೆ ಸೂಚನೆಗಳನ್ನು ಪಾಲಿಸದೇಇರುವುದರಿಂದ ಅನಾರೋಗ್ಯಕ್ಕೆಕಾರಣವಾಗುತ್ತಿದೆ. ಕಡ್ಡಾಯವಾಗಿ ಪರೀಕ್ಷೆ ಮಾಡಿಸಿಕೊಂಡು ನಿಗದಿತ ಸಮಯದಲ್ಲಿಚಿಕಿತ್ಸೆ ಪಡೆದುಕೊಳ್ಳುವ ಮೂಲಕ ತಮ್ಮಆರೋಗ್ಯದ ಬಗ್ಗೆ ಹೆಚ್ಚು ಗಮನಹರಿಸಬೇಕೆಂದು ಕಿವಿಮಾತು ಹೇಳಿದರು.

ನಾರಾಯಣ ಹೃದಯಾಲಯಆಸ್ಪತ್ರೆ ವೈದ್ಯಡಾ. ನಿತಿನ್ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಹೃದಯಾಘಾತ ಪ್ರಕರಣಗಳು ಸೇರಿದಂತೆ ವಿವಿಧರೀತಿಯ ಕಾಯಿಲೆಗಳು ಹೆಚ್ಚುತ್ತಿದ್ದು, ಬಹಳ ಮುಖ್ಯವಾಗಿಯಾವುದೇರೀತಿಯಆರೋಗ್ಯ ಸಮಸ್ಯೆಗಳಿಗೆ ಪೌರಕಾರ್ಮಿಕರುತಪಾಸಣೆ ಮಾಡಿಸಿಕೊಂಡು ಚಿಕಿತ್ಸೆ ಪಡೆಯುವ ಮೂಲಕ ಪರಿಹರಿಸಿಕೊಳ್ಳಿ ಎಂದು ಸಲಹೆ ನೀಡಿದರು.

ಮದ್ಯಪಾನ, ಧೂಮಪಾನದಂತಹ ಕೆಲವು ಹವ್ಯಾಸಗಳನ್ನು ಪೌರಕಾರ್ಮಿಕರುತ್ಯಜಿಸುವ ಮೂಲಕ ತಮ್ಮಆರೋಗ್ಯಕ್ಕೆಆದ್ಯತೆ ನೀಡಬೇಕೆಂಬ ಬಗ್ಗೆ ಅರಿವು ಮೂಡಿಸುವುದು ಅಗತ್ಯವಾಗಿದೆಎಂದರು.

ಪೌಷ್ಟಿಕ ಆಹಾರ ಸೇವಿಸಬೇಕು, ಜೊತೆಗೆಎಣ್ಣೆಯಲ್ಲಿಕರಿದ ಪದಾರ್ಥಗಳನ್ನು ಕಡಿಮೆ ಮಾಡಬೇಕು. ಇದುಆದಾಗ ಸಕ್ಕರೆ ಕಾಯಿಲೆ, ಅಧಿಕರಕ್ತದೊತ್ತಡ, ಹೃದಯಾಘಾತತಡೆಯಲು ಸಾಧ್ಯಎಂದು ಹೇಳಿದರು.ಉಪಾಧ್ಯಕ್ಷೆಅನುಮಧುಕರ್ ಮಾತನಾಡಿ, ಜನಹಿತಕ್ಕಾಗಿ ಕೆಲಸ ಮಾಡುತ್ತಿರುವ ಪೌರಕಾರ್ಮಿಕರು ನಿಗದಿತ ಸಮಯದಲ್ಲಿ ಸೂಕ್ತ ಚಿಕಿತ್ಸೆ ಪಡೆದುಕೊಂಡುತಮ್ಮಆರೋಗ್ಯ ಕಾಪಾಡಿಕೊಳ್ಳಬೇಕೆಂದು ತಿಳಿಸಿದರು.

ಮೊದಲಿಗೆಜೀವಿತ ಫೌಂಡೇಶನ್‌ಅಧ್ಯಕ್ಷ ಪ್ರಕಾಶ್ ಪ್ರಾಸ್ತಾವಿಕವಾಗಿ ಸ್ವಾಗತಿಸಿ ಮಾತನಾಡಿ, ಕಳೆದ 13 ವರ್ಷಗಳಿಂದ ಫೌಂಡೇಶನ್ 8 ಸಾವಿರ ವಿಕಲ ಚೇತನರಿಗೆಚಿಕಿತ್ಸೆಜೊತೆಗೆ ಸಾಧನ ಸಲಕರಣೆಗಳನ್ನು ನೀಡುತ್ತಿದ್ದೇವೆಎಂದರು.

ಈ ಸಂದರ್ಭದಲ್ಲಿ ನಗರಸಭೆ ಸದಸ್ಯ ಗೋಪಿ, ಪರಿಸರಅಭಿಯಂತರರಾದ ತೇಜಸ್ವಿನಿ, ಆರೋಗ್ಯ ನಿರೀಕ್ಷಕ ನಾಗಪ್ಪ ಹಾಗೂ ನಾಗರಾಜು, ಶ್ರೀನಿವಾಸ, ವಿವೇಕ್, ಅಣ್ಣಯ್ಯ, ಸತೀಶ್ ಉಪಸ್ಥಿತರಿದ್ದರು.

## ಇಂದು ಕಾರ್ಮಿಕರ ಪ್ರತಿಭಟನೆ

**ಚನ್ನಗಿರಿ:** ಗ್ರಾಪಂ ನೌಕರರ ಕನಿಷ್ಠವೇತನ ಹೆಚ್ಚಳ ಹಾಗೂ ಸೇವಾ ಹಿರಿತನ ಆಧಾರದ ಮೇಲೆ ವೇತನ ಹಾರಿಗಾಗಿ ಇಂದು ಜಿಲ್ಲಾ ಕಾರ್ಮಿಕ ಇಲಾಖೆ ಮುಂದೆ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ. ತಾಲೂಕಿನ ಎಲ್ಲ ಗ್ರಾಪಂ ನೌಕರರು ಭಾಗವಹಿಸುವಂತೆ ಗ್ರಾಪಂ ನೌಕರರ ಸಂಘದ ಜಿಲ್ಲಾಧ್ಯಕ್ಷ ಎಸ್ ಶ್ರೀನಿವಾಸಚಾರ್ ತಿಳಿಸಿದ್ದಾರೆ.

## ಪ್ರತಿ ಸೋಮವಾರ ಜನರ ಭೇಟಿ

**ಹಿರೇಕೋಗಲೂರು:** ಚನ್ನಗಿರಿ ತಾಲೂಕಿನ ಹಿರೇಕೋಗಲೂರು ನೂತನ ಗೃಹದಲ್ಲಿ ಪ್ರತಿ ಸೋಮವಾರ 4 ಗಂಟೆಯಿಂದ ಸಾರ್ವಜನಿಕರ ಕುಂದುಕೊರತೆ ಆಲಿಸಲಾಗುವುದು ಎಂದು ಶಾಸಕ ಬಸವರಾಜು ಶಿವಗಂಗು ತಿಳಿಸಿದ್ದಾರೆ. ನಿತ್ಯ ಬೆಳಗ್ಗೆಯಿಂದ ಸಂಜೆಯವರೆಗೆ ಶಾಸಕರ ಕೊಠಡಿ ಹಾಗೂ ಪಕ್ಷದ ಕಾರ್ಯಾಲಯದಲ್ಲಿ ಸಾರ್ವಜನಿಕರ ಸಮಸ್ಯೆ ಪರಿಹರಿಸುವ ಕೆಲಸ ಮಾಡಲಾಗುವುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹಾಲು ಕುಡಿಸುವ ಹಬ್ಬ

**ದಾವಣಗೆರೆ:** ನಗರದ ದೊಡ್ಡಪೇಟೆಯ ಬಸವಕೇಂದ್ರ ವಿರಕ್ತಮಠದಲ್ಲಿ ಇಂದು ಬೆಳಗ್ಗೆ 10ಕ್ಕೆ ಹಾಲು ಕುಡಿಸುವ ಹಬ್ಬ–ಬಸವ ಪಂಚಮಿ ಆಯೋಜಿಸಲಾಗಿದೆ. ಶ್ರೀಬಸವಪ್ರಭು ಸ್ವಾಮೀಜಿ ಅಧ್ಯಕ್ಷತೆ ವಹಿಸುವರು. ಎಸ್ಪಿ ಉಮಾಪ್ರಶಾಂತ್ ಉದ್ಘಾಟಿಸುವರು. ಪುಟ್ಟರಾಜ ಗವಾಯಿಗಳ ಶಿಕ್ಷಕರಾದ ಬಿ.ಎಂ. ಪಂಚಾಕ್ಷರಿ ಶಾಸ್ತ್ರಿಗಳು, ಶಿವಯೋಗಾಶ್ರಮದ ಎಸ್.ಓಂಕಾರಪ್ಪ, ಬಸವ ಜಯಂತಿ ಆಚರಣೆ ಸಮಿತಿ ಅಧ್ಯಕ್ಷ ಎಂ. ಶಿವಕುಮಾರ್, ಎಚ್.ವಿ. ಮಂಜುನಾಥಸ್ವಾಮಿ, ಲಂಬಿ ಮುರುಗೇಶಪ್ಪ ಇತರರು ಮುಖ್ಯ ಅತಿಥಿಗಳಾಗಿದ್ದಾರೆ.

## ನಿಧನ ಸುದ್ದಿಗಳು

### ಹರಲೀಪುರ ಬಸಮ್ಮ ನಿಧನ

**ಬಸವಾಪಟ್ಟಣ :** ಹರಲೀಪುರ ಗ್ರಾಮದ ಬಸಮ್ಮ (86) ಶುಕ್ರವಾರ ನಿಧನರಾದರು.ಮೃತರಿಗೆ ಐವರು ಪುತ್ರರು, ಓರ್ವ ಪುತ್ರಿ ಇದ್ದಾರೆ. ಶನಿವಾರ ಸ್ವಗ್ರಾಮದಲ್ಲಿ ಅಂತ್ಯಕ್ರಿಯೆ ನೆರವೇರಿಸಲಾಯಿತು.

## ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟ: ಆಕ್ಷೇಪಣೆ ಆಹ್ವಾನ

**ಶಿವಮೊಗ್ಗ :** ರಾಷ್ಟ್ರೀಯ ಆರೋಗ್ಯ ಅಭಿಯಾನ ಎನ್‌ಹೆಚ್‌ಎಂ ಯೋಜನೆಯಡಿ ಗುತ್ತಿಗೆ ಆಧಾರದ ಮೇಲೆ ಖಾಲಿಯಿರುವ ವೈದ್ಯಕೀಯ ಹುದ್ದೆಗಳನ್ನು ಭರ್ತಿ ಮಾಡುವ ಸಂಬಂಧ ನೇರ ಸಂದರ್ಶನದಲ್ಲಿ ಭಾಗವಹಿಸಿದ ಅಭ್ಯರ್ಥಿಗಳ ರೋಸ್ಟರ್ ಕಂ ಮೆರಿಟ್ ಆಧಾರದ ಮೇಲೆ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಿದ್ದು, ಅಭ್ಯರ್ಥಿಗಳ ಆಕ್ಷೇಪಣೆ ಇದ್ದಲ್ಲಿ ಲಿಖಿತ ರೂಪದಲ್ಲಿ ಜು.28 ರೊಳಗಾಗಿ ಜಿಲ್ಲಾ ಆರ್.ಸಿ.ಹೆಚ್. ಅಧಿಕಾರಿಗಳು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ, ಎನ್.ಹೆಚ್.ಎಂ. ವಿಭಾಗಕ್ಕೆ ಸಲ್ಲಿಸುವಂತೆ ಸಂಘದ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ಜು.30 ರಂದು ಅನುಪಯುಕ್ತ ವಸ್ತುಗಳ ಹರಾಜು ಪ್ರಕ್ರಿಯೆ

**ಬಳ್ಳಾರಿ :** ಕಂಪ್ಲಿ ಪಟ್ಟಣದ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿರುವ ಅನುಪಯುಕ್ತ ವಸ್ತುಗಳು, ಪುಸ್ತಕಗಳು ಹಾಗೂ ಇತರೆ ಉಪಕರಣಗಳನ್ನು ಜುಲೈ 30 ರಂದು ಕಾಲೇಜಿನ ಆವರಣದಲ್ಲಿ ನಿಯಮಾನುಸಾರ ಹರಾಜು ಪ್ರಕ್ರಿಯೆ ನಡೆಸಲಾಗುವುದು ಎಂದು ಕಾಲೇಜಿನ ಪ್ರಾಚಾರ್ಯ ಠಾಕ್ರಾ ನಾಯ್ಕ್ ಅವರು ತಿಳಿಸಿದ್ದಾರೆ.

ಕಾಲೇಜಿನಲ್ಲಿರುವ ಅನುಪಯುಕ್ತ ವಸ್ತುಗಳಾದ ಕಂಪ್ಯೂಟರ್ಸ್, ಪ್ರಿಂಟರ್ಸ್, ಯುಪಿಎಸ್ ಮತ್ತು ಬ್ಯಾಟರಿಗಳು, ಪವರ್ ಸಪ್ಲೈ ಚಾನೆಲ್, ಡಿಜಿಟಲ್ ಮಲ್ಟಿಮೀಟರ್ಸ್, ಆರ್‌ಪಿಎಸ್ ಡ್ಯುಯಲ್, ಆರ್‌ಪಿಎಸ್ ಸಿಂಗಲ್ ಚಾನೆಲ್ಸ್, ಅನಲಾಗ್ ವೋಲ್ಟ್‌ಮೀಟರ್ಸ್, ಅನಲಾಗ್ ಅಮ್ಮೀಟರ್ಸ್ ಸೇರಿದಂತೆ ಮುಂತಾದ ಉಪಕರಣಗಳನ್ನು ಹರಾಜು ಮಾಡಲಾಗುವುದು.

ಆಸಕ್ತಿಯುಳ್ಳ ಸಾರ್ವಜನಿಕರು ಪಾಲ್ಗೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ಮೊ.9845181482, 9731979865 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 2ನೇ ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟ: ಆಕ್ಷೇಪಣೆ ಸಲ್ಲಿಸಲು ಅವಕಾಶ

**ಬಳ್ಳಾರಿ :** ಜಿಲ್ಲೆಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಂಗನವಾಡಿ ಕೇಂದ್ರಗಳಲ್ಲಿ ಖಾಲಿ ಇರುವ ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರ ಆಯ್ಕೆಗಾಗಿ ಅಧಿಸೂಚನೆ ಹೊರಡಿಸಲಾಗಿದ್ದು, ಈಗಾಗಲೇ ತಾತ್ಕಾಲಿಕವಾಗಿ ಆಯ್ಕೆಗೊಂಡ ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರ 2ನೇ ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟಿಸಲಾಗಿದೆ. ಆಯ್ಕೆ ಪಟ್ಟಿಗೆ ಸಂಬಂಧಿಸಿದಂತೆ ಆಕ್ಷೇಪಣೆಗಳಿದ್ದಲ್ಲಿ ಸಲ್ಲಿಸಬಹುದು. ಆಯ್ಕೆಪಟ್ಟಿಯನ್ನು ಸಂಬಂಧಿಸಿದ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ, ಮಹಾನಗರ ಪಾಲಿಕೆ, ನಗರಸಭೆ ಕಚೇರಿ, ಪಟ್ಟಣ ಪಂಚಾಯತ್, ಪುರಸಭೆ, ಗ್ರಾಮ ಪಂಚಾಯತಿ, ಜಿಲ್ಲಾ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರ ಕಚೇರಿ ಹಾಗೂ ಜಿಲ್ಲಾಧಿಕಾರಿಗಳ ಕಚೇರಿ ಸೂಚನಾ ಫಲಕಗಳಲ್ಲಿ ಪ್ರಕಟಿಸಲಾಗಿದೆ.

## ಯುವಕ ನಾಪತ್ತೆ: ಪತ್ತೆಗೆ ಮನವಿ

**ಬಳ್ಳಾರಿ :** ಬಳ್ಳಾರಿ ರೈಲ್ವೇ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಕಲಬುರ್ಗಿ ಜಿಲ್ಲೆಯ ಚಿಂಚೋಳ್ಳಿ ತಾಲ್ಲೂಕಿನ ಸಲಗರ ಬಸಂತಪುರ ಗ್ರಾಮದ ಶಿವರಾಮ ನಾಯಕ ತಾಂಡದ ನಿವಾಸಿಯಾದ ರಾಹುಲ್ ಎನ್ನುವ 24 ವರ್ಷದ ಯುವಕ ಜು.17 ರಂದು ಕಾಣೆಯಾಗಿರುವ ಕುರಿತು ಪ್ರಕರಣ ದಾಖಲಾಗಿದ್ದು, ಪತ್ತೆಗೆ ಸಹಕರಿಸಬೇಕು ಎಂದು ಪೊಲೀಸ್ ಉಪ–ನಿರೀಕ್ಷಕರು ಮನವಿ ಮಾಡಿದ್ದಾರೆ.

ಚಹರೆ: 5.8 ಅಡಿ ಎತ್ತರ, ಕೋಲು ಮುಖ, ಗೋಧಿ ಮೈಬಣ್ಣ, ತೆಳ್ಳನೇಯ ಮೈಕಟ್ಟು, ಕಪ್ಪು ಕೂದಲು ಹೊಂದಿದ್ದು, ಕಾಣೆಯಾದ ಸಂದರ್ಭದಲ್ಲಿ ನೀಲಿ ಬಣ್ಣದ ಟೀ–ಶರ್ಟ್, ಕಪ್ಪು ಬಣ್ಣದ ನೈಟ್ ಪ್ಯಾಂಟ್ ಧರಿಸಿರುತ್ತಾನೆ. ಬಿಳಿಯ ಕನ್ನಡಕ ಹಾಕಿರುತ್ತಾನೆ. ಯುವಕ ಬಗ್ಗೆ ಸುಳಿವು ಸಿಕ್ಕಲ್ಲಿ ಬಳ್ಳಾರಿ ರೈಲ್ವೆ ಪೊಲೀಸ್ ಠಾಣೆಯ ದೂ.08392–276063,

# 2 ಕೋಟಿ ದೋಚಿದ್ದ ಗ್ಯಾಂಗ್ ಸೆರೆ



**ಬೆಂಗಳೂರು**–ಶ್ರೀಮಂತರ ಬಳಿಯಿಂದ ಹಣವನ್ನು ಪಡೆದು ಅದನ್ನು ಯುಎಸ್ ಡಿಟಿ ಡಿಜಿಟಲ್ ಕರೆನ್ಸಿಗೆ ಪರಿವರ್ತಿಸಿ ಅದನ್ನು ಅರ್ ಟಿಜಿಎಸ್ ಪ್ರೀಮಿಯಂ ಮೂಲಕ ಜಿಎಸ್ ಟಿ ಸಮೇತ ದ್ವಿಗುಣಗೊಳಿಸಿ ಹಿಂದಿರುಗಿಸುವುದಾಗಿ ನಂಬಿಸಿ ತರಿಸಿಕೊಂಡ 2ಕೋಟಿ ನಗದನ್ನು ಅವರ ಸಹಚರರಿಂದ ದರೋಡೆ ಮಾಡಿಸಿದಂತೆ ನಟಿಸಿ ದೋಚಿದ 15 ಮಂದಿ ಗ್ಯಾಂಗ್ ಬಂಧಿಸುವಲ್ಲಿ ವಿದ್ಯಾರಣ್ಯಪುರ ಪೊಲೀಸರು ಯಶಸ್ವಿಯಾಗಿದ್ದಾರೆ.

ಬಂಧಿತ ಗ್ಯಾಂಗ್ ನಿಂದ 1.11 ಕೋಟಿ ನಗದು, ಕೃತ್ಯಕ್ಕೆ ಬಳಸಿದ 4 ಕಾರುಗಳು,4 ದ್ವಿ–ಚಕ್ರ ವಾಹನಗಳು, 2 ಪ್ಯಾಸೆಂಜರ್ ಆಟೋಗಳು, 2 ಚಾಕು 1 ಲಾಂಗ್, 1 ಮಚ್ಚು, 8 ಮೊಬೈಲ್ ಸೇರಿ 1.40 ಕೋಟಿ ಮೌಲ್ಯದ ಮಾಲುಗಳನ್ನು ವಶಪಡಿಸಿಕೊಂಡು ಹೆಚ್ಚಿನ ತನಿಖೆಯನ್ನು ಕೈಗೊಳ್ಳಲಾಗಿದೆ ಎಂದು ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಅವರು ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು.

ಯಲಹಂಕದ ಬೆಂಚಮೀನ್ ಹರ್ಷ ಅಲಿಯಾಸ್ ಹರ್ಷ(45)ತುಮಕೂರಿನ ನಜರಾಬಾದ್ ನ ರಕ್ಷಿತ್ ಅಲಿಯಾಸ್ ಅಪ್ಪು(29) ಬಾಗಲಗುಂಟೆಯ ಚಂದ್ರಶೇಖರ್(58)ವಿದ್ಯಾರಣ್ಯಪುರದ ಸೈಯದ್ ಅಕೀಂಪಾಷ(28) ಸೈಯದ್ ಅಮ್ಜದ್ (31) ಸೈಯದ್ ರಫೀ(27) ಸೈಯದ್ ವಾಸೀಂ(23) ಶೇಖ್ ವಾಸೀಂ(33)

ಮೊಹಮದ್ ಸಾಹಿಲ್ ಅನ್ಸರ್ (28) ಸಲ್ಮಾನ್ ಖಾನ್ ಅಲಿಯಾಸ್ ಸಲ್ಮಾನ್ (33) ಚಿಕ್ಕಬೆಟ್ಟದಹಳ್ಳಿಯ ಮುಹೀದ್ ಅಲಿಯಾಸ್ ಗುಡ್ಡು(30) ಚಾಮರಾಜಪೇಟೆಯ ಮೋಸಿನ್ ಖಾನ್ (32) ಬನಶಂಕರಿಯ ಸಲ್ಮಾನ್ ಖಾನ್(35)ಕೆಂಗೇರಿಯ ಹರ್ಷ(33) ಹಾಗೂ ಇಲಿಯಾಸ್ ನಗರದ ಮೊಹಮ್ಮದ್ ಅತೀಕ್ (38)ಬಂಧಿತ ಗ್ಯಾಂಗ್ ನ ಆರೋಪಿಗಳಾಗಿದ್ದಾರೆ.


ವಿದ್ಯಾರಣ್ಯಪುರ ಎಂ ಎಸ್ ಪಾಳ್ಯದ ಸರ್ಕಲ್‌ನ ಮಳಿಗೆಯೊಂದರ ಬಳಿ ಕಳೆದ ಜೂ.26 ರಂದು ಹಲಗೇವಡರಹಳ್ಳಿಯ ಶಾಂತಕುಮಾರ್ ಅವರ 2 ಕೋಟಿ ನಗದನ್ನು ದರೋಡೆ ಮಾಡಿದ ದೂರು ದಾಖಲಿಸಿದ ವಿದ್ಯಾರಣ್ಯಪುರ ಪೊಲೀಸ್ ಇನ್ಸ್ ಪೆಕ್ಟರ್ ಶಿವಸ್ವಾಮಿ ಅವರು ವಿವಿಧ ಆಯಾಮಗಳಲ್ಲಿ ತನಿಖೆಯನ್ನು ಕೈಗೊಂಡು ಖಚಿತ ಮಾಹಿತಿಯನ್ನು ಕಲೆಹಾಕಿ ಜೂ.26 ರಂದು ಹೆಗಡೆ ನಗರದ ಜಾಮೀಯಾ ಮಸೀದಿ ಬಳಿ ಇಬ್ಬರು ಬಂಧಿಸಿ ನಡೆಸಿದ ವಿಚಾರಣೆಯಲ್ಲಿ, ಈ ಪ್ರಕರಣದಲ್ಲಿ ಭಾಗಿಯಾಗಿರುವುದಾಗಿ ತಪ್ಪೊಪ್ಪಿಕೊಂಡಿದ್ದು, ಇತರೆ 17 ಸಹಚರರು ಕೃತ್ಯದಲ್ಲಿ ಭಾಗಿಯಾಗಿರುವುದನ್ನು ಬಾಯ್ಬಿಟ್ಟಿದ್ದರು.


ಅದರಂತೆಯೇ ತನಿಖೆಯನ್ನು ಮುಂದುವರೆಸಿ ಆರೋಪಿಗಳಿಬ್ಬರನ್ನು ಸುದೀರ್ಘ ವಿಚಾರಣೆಗೊಳಪಡಿಸಿ ಏಳು ಮಂದಿಯನ್ನು ಬಾಗಲಗುಂಟೆ, ಚಿಕ್ಕಮಗಳೂರು ಜಿಲ್ಲೆಯ ಹಾಲೇನಹಳ್ಳಿಯಿಂದ, ಮಂಗಳೂರು, ಅಜ್ಮೀರ್ ಹಾಗೂ ಬೀದರ್ ನ ಓಲ್ಡ್ ಸಿಟಿಯಿಂದ ಬಂಧಿಸಲಾಗಿದೆ.

ಅವರನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿ, 14 ದಿನಗಳ ಕಾಲ ಕಸ್ಟಡಿಗೆ ಪಡೆದು ಕೆರೆಗುಡ್ಡದಹಳ್ಳಿ, ಬನ್ನೇರುಘಟ್ಟದ ವಸಂತನಗರ ಮತ್ತು ಕೊಟರಗೆರೆಯ ಲಾಡ್ಜ್‌ವೊಂದರ ಬಳಿ ಆರು ಮಂದಿ ಸೇರಿ ಹದಿನೈದು ಆರೋಪಿಗಳನ್ನು ಬಂಧಿಸಲಾಗಿದೆ ಪ್ರಕರಣದಲ್ಲಿ ಹದಿನೈದು ಮಂದಿಯನ್ನು ತಲೆಮರೆಸಿಕೊಂಡಿರುವ ನಾಲ್ವರು ಆರೋಪಿಗಳು ಪತ್ತೆಕಾರ್ಯ ಮುಂದುವರೆದಿದ್ದು, ಉಳಿದ ಹಣ ಮತ್ತು ಕಾರುಗಳನ್ನು ಜಪ್ತಿ ಮಾಡಬೇಕಿದ್ದು ತನಿಖೆ ಪ್ರಗತಿಯಲ್ಲಿದೆ ಎಂದು ತಿಳಿಸಿದರು.

ಈಶಾನ್ಯ ವಿಭಾಗದ ಡಿಸಿಪಿ ಸಜೀತ್ ವಿ.ಜೆ,ಎಸಿಪಿ ನರಸಿಂಹಮೂರ್ತಿ ಪಿ, ಮಾರ್ಗದರ್ಶನದಲ್ಲಿ ವಿದ್ಯಾರಣ್ಯಪುರ ಪೊಲೀಸ್ ಇನ್ಸ್ ಪೆಕ್ಟರ್ ಶಿವಸ್ವಾಮಿ ಸಿ.ಬಿ ಮತ್ತವರ ಸಿಬ್ಬಂದಿ ಪ್ರಕರಣವನ್ನು ಬಂಧಿಸುವಲ್ಲಿ ಯಶಸ್ವಿಯಾಗಿದೆ.

# ಧನ್ಕರ್ ರಾಜೀನಾಮೆ ಸುತ್ತ ಹಲವು ಅನುಮಾನಗಳು





**ನವದೆಹಲಿ :** ಉಪರಾಷ್ಟ್ರಪತಿ ಜಗದೀಪ್ ಧನ್ಕರ್ ಅವರ ದಿಢೀರ್ ರಾಜೀನಾಮೆ ರಾಷ್ಟ್ರ ರಾಜಕೀಯದಲ್ಲಿ ನಾನಾ ಚರ್ಚೆಗೆ ಗ್ರಾಸವಾಗಿದ್ದು, ರಾಜೀನಾಮೆಗೆ ಬಲವಾದ ಕಾರಣಗಳಿವೆ ಎಂಬ ಅನುಮಾನಗಳು ಸೃಷ್ಟಿಯಾಗಿವೆ.

ಉಪರಾಷ್ಟ್ರಪತಿ ಜಗದೀಪ್ ಧನ್ಕರ್ ಅವರು ಆರೋಗ್ಯ ಕಾರಣಗಳನ್ನು ನೀಡಿ ನಿನ್ನೆ ಸಂಸತ್‌ನ ಮುಂಗಾರು ಅಧಿವೇಶನದ ಮೊದಲ ದಿನವೇ ತಮ್ಮ ರಾಜೀನಾಮೆಯನ್ನು ಘೋಷಣೆ ಮಾಡಿದ್ದರು. ಧನ್ಕರ್ ಅವರು ರಾಜೀನಾಮೆ ನೀಡುವ ಮುನ್ನ ರಾಜ್ಯಸಭೆಯಲ್ಲಿ 62 ನಿಮಿಷ ಕಲಾಪ ನಡೆಸಿದ್ದಾರೆ. ಹೊಸದಾಗಿ ಆಯ್ಕೆಯಾದ ಐವರು ರಾಜ್ಯಸಭಾ ಸದಸ್ಯರಿಗೆ ಪ್ರಮಾಣ ವಚನ ಬೋಧಿಸಿದ್ದರು. ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನಖರ್ಗೆ ಅವರಿಗೆ ಹುಟ್ಟು ಹಬ್ಬದ ಶುಭಾಷಯ ಕೋರಿ ರಾಜ್ಯಸಭೆಯಲ್ಲಿ ಸುದೀರ್ಘವಾಗಿ ಮಾತನಾಡಿದ್ದರು. ಇದಾದ ನಂತರ ಅವರು ರಾಜೀನಾಮೆ ನಿರ್ಧಾರ ಕೈಗೊಂಡಿರುವುದು ಹಲವು ಅನುಮಾನಗಳಿಗೆ ಕಾರಣವಾಗಿದೆ.

ಜಗದೀಪ್ ಧನ್ಕರ್ ಅವರು ಆರೋಗ್ಯದ ಕಾರಣಕ್ಕೆ ರಾಜೀನಾಮೆ ನೀಡುವುದಾಗಿ ಮಂಗಾರು ಅಧಿವೇಶನ ಆರಂಭವಾಗುವವರೆಗೂ ಏಕೆ ಕಾಯುತ್ತಿದ್ದರು. ಅಧಿವೇಶನ ಆರಂಭಕ್ಕೂ ಮೊದಲೇ ನಿರ್ಧಾರ ಕೈಗೊಳ್ಳುವ ಅವಕಾಶ ಇತ್ತು ಎಂಬೆಲ್ಲಾ ಚರ್ಚೆಗಳು ನಡೆದಿವೆ.

ವಿರೋಧ ಪಕ್ಷವಾದ ಕಾಂಗ್ರೆಸ್, ಧನ್ಕರ್ ಅವರ ರಾಜೀನಾಮೆ ಬಗ್ಗೆಯೂ ಅನುಮಾನ ವ್ಯಕ್ತಪಡಿಸಿ, ರಾಜೀನಾಮೆಗೆ ಬಲವಾದ ಕಾರಣವಿದೆ ಎಂದು ಹೇಳಿದೆ.

ಜಯರಾಮ್ ರಮೇಶ್ ಅನುಮಾನ : ಉಪ ರಾಷ್ಟ್ರಪತಿ ಹುದ್ದೆಗೆ ಜಗದೀಪ್ ಧನ್ಕರ್ ರಾಜೀನಾಮೆ ನೀಡಿರುವುದರ ಬಗ್ಗೆ ಅಚ್ಚರಿ ವ್ಯಕ್ತಪಡಿಸಿರುವ ಕಾಂಗ್ರೆಸ್ ಪಕ್ಷ ರಾಜೀನಾಮೆಗೆ ಆರೋಗ್ಯ ಸಮಸ್ಯೆಗಿಂತಲೂ ಬಲವಾದ ಕಾರಣ ಇದೆ ಎಂಬ ಅನುಮಾನವನ್ನು ವ್ಯಕ್ತಪಡಿಸಿದೆ.

ಈ ಬಗ್ಗೆ ತಮ್ಮ ಎಕ್ಸ್ ಖಾತೆಯಲ್ಲಿ ಪೋಸ್ಟ್ ಮಾಡಿರುವ ಕಾಂಗ್ರೆಸ್‌ನ ವಕ್ತಾರ ಹಾಗೂ ಕೇಂದ್ರದ ಮಾಜಿ ಸಚಿವ ಜಯರಾಮ್ ರಮೇಶ್, ಉಪರಾಷ್ಟ್ರಪತಿ ಧನ್ಕರ್ ಅವರು ನಿನ್ನೆ ಮಧ್ಯಾಹ್ನ 12.30 ಕ್ಕೆ ರಾಜ್ಯಸಭೆಯ ಕಲಾಪ ಸಲಹಾ ಸಮಿತಿಯ ಸಭೆ ಕರೆದಿದ್ದರು. ಈ ಸಭೆಯಲ್ಲಿ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜೀಜು ಹಾಗೂ ಜೆ.ಪಿ. ನಡ್ಡಾ ಅವರು ಭಾಗವಹಿಸಿದ್ದರು.

ನಂತರ ಸಂಜೆ 4.30 ಕ್ಕೆ ಮತ್ತೆ ಸಭೆ ಸೇರುವ ನಿರ್ಧಾರ ಮಾಡಲಾಯಿತು. ಸಂಜೆ 4.30 ಕ್ಕೆ ಉಪರಾಷ್ಟ್ರಪತಿ ಧನ್ಕರ್ ಅವರ ಅಧ್ಯಕ್ಷತೆಯಲ್ಲಿ ಕಲಾಪ ಸಲಹಾ ಸಮಿತಿ ಸಭೆ ಮತ್ತೆ ಸೇರಿತ್ತಾದರೂ ಜೆ.ಪಿ. ನಡ್ಡಾ ಮತ್ತು ರಿಜೀಜು ಗೈರು ಹಾಜರಾದರು. ಇವರಿಬ್ಬರು ತಮ್ಮ ಗೈರು ಹಾಜರಿ ಬಗ್ಗೆ ಧನ್ಕರ್ ಅವರಿಗೆ ವೈಯುಕ್ತಿಕವಾಗಿ ಹೇಳಿಯೆ ಇರಲಿಲ್ಲ. ಇದರಿಂದ ಸಿಟ್ಟುಗೊಂಡ ಧನ್ಕರ್ ಇಂದು (ಮಂಗಳವಾರ) ಮಧ್ಯಾಹ್ನ 1 ಗಂಟೆಗೆ ಸಭೆ ನಡೆಸುವುದಾಗಿ ಹೇಳಿದರು ಎಂದು ಜಯರಾಮ್ ರಮೇಶ್ ತಿಳಿಸಿದ್ದಾರೆ.

ನಿನ್ನೆ ಮಧ್ಯಾಹ್ನ 1 ಗಂಟೆಯಿಂದ ಸಂಜೆ 4.30ರ ನಡುವೆ ಬಹಳ ಗಂಭೀರವಾದದ್ದೇನೋ ನಡೆದಿದೆ. ಈ ಕಾರಣಕ್ಕೆ ಸಂಜೆ ನಡೆದ ರಾಜ್ಯಸಭಾ ಕಲಾಪ ಸಲಹಾ ಸಮಿತಿ ಸಭೆಗೆ ನಡ್ಡಾ ಮತ್ತು ರಿಜೀಜು ಉದ್ದೇಶ ಪೂರ್ವಕವಾಗಿಯೇ ಗೈರು ಆಗಿದ್ದರು ಎಂದು ಅವರು ಅನುಮಾನ ವ್ಯಕ್ತಪಡಿಸಿದ್ದಾರೆ.


ನಿನ್ನೆರಾತ್ರಿ ಅಚ್ಚರಿ ಎನ್ನುವಂತೆ ಧನ್ಕರ್ ತಮ್ಮ ಹುದ್ದೆಗೆ ರಾಜೀನಾಮೆ ನೀಡಿದ್ದಾರೆ. ಇದಕ್ಕೆ ಅವರು ಆರೋಗ್ಯದ ಕಾರಣಗಳನ್ನು ನೀಡಿದ್ದಾರೆ ಇದನ್ನು ನಾವು ಗೌರವಿಸಬೇಕಿದೆ. ಆದರೆ ಅವರ ರಾಜೀನಾಮೆಗೆ ಇದಕ್ಕಿಂತಲೂ ಬಲವಾದ ಕಾರಣಗಳಿವೆ ಎಂಬುದು ಸತ್ಯ ಎಂದು ರಮೇಶ್ ಟ್ವೀಟ್ ಮಾಡಿದ್ದಾರೆ.

**ರಾಜೀನಾಮೆ ಅಂಗೀಕಾರ :** ಉಪರಾಷ್ಟ್ರಪತಿ ಹುದ್ದೆಗೆ ಜಗದೀಪ್ ಧನ್ಕರ್ ಅವರು ನೀಡಿದ್ದ ರಾಜೀನಾಮೆಯನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಅಂಗೀಕರಿಸಿದ್ದಾರೆ.

ಉಪರಾಷ್ಟ್ರಪತಿ ಧನ್ಕರ್ ಅವರು ತಮ್ಮ ಹುದ್ದೆಗೆ ರಾಜೀನಾಮೆ ನೀಡಿದ ಪತ್ರವನ್ನು ರಾಷ್ಟ್ರಪತಿಗಳಿಗೆ ಕಳುಹಿಸಿ ಸಂವಿಧಾನದ 67ಎ ಪರಿಚ್ಛೇಧದಡಿ ರಾಜೀನಾಮೆ ನೀಡುತ್ತಿರುವುದಾಗಿ ತಮ್ಮ ಪತ್ರದಲ್ಲಿ ಹೇಳಿ ರಾಜೀನಾಮೆಯನ್ನು ಅಂಗೀಕರಿಸುವಂತೆ ಕೋರಿದ್ದರು.

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಉಪರಾಷ್ಟ್ರಪತಿ ಜಗದೀಪ್ ಧನ್ಕರ್ ಅವರ ರಾಜೀನಾಮೆಯನ್ನು ಇಂದು ಅಂಗೀಕರಿಸಿದ್ದಾರೆ.

# ಮಂಗಳೂರಿನಲ್ಲಿ ಬಹುಕೋಟಿ ವಂಚನೆ ಪ್ರಕರಣದ ತನಿಖೆ ಸಿಐಡಿ ಹೆಗಲಿಗೆ




**ಮಂಗಳೂರು:** ತನ್ನ ಐಷಾರಾಮಿ ಬಂಗಲೆ ಮೂಲಕ ತಾನೊಬ್ಬ ಉದ್ಯಮಿಯೆಂದು ಬಿಂಬಿಸಿಕೊಂಡು ನೂರಾರು ಕೋಟಿ ರೂ. ವಂಚಿಸಿದ ರೋಷನ್ ಸಲ್ದಾನಾ(43) ಬಹುಕೋಟಿ ವಂಚನೆ ಪ್ರಕರಣವನ್ನು ಮಂಗಳವಾರ ಹೆಚ್ಚಿನ ತನಿಖೆಗಾಗಿ ಅಪರಾಧ ತನಿಖಾ ಇಲಾಖೆ(ಸಿಐಡಿ)ಗೆ ವರ್ಗಾಯಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಪ್ರಮುಖ ಆರೋಪಿ ಮಂಗಳೂರಿನ ಕಂಕನಾಡಿ ಬಳಿಯ ಬೊಳ್ಳಗುಡ್ಡ ಬಜಾಲ್‌ನ 43 ವರ್ಷದ ವಂಚಕ ರೋಷನ್ ಸಲ್ದಾನಾ ಪ್ರಸ್ತುತ ನ್ಯಾಯಾಂಗ ಬಂಧನದಲ್ಲಿದ್ದಾರೆ ಎಂದು ಅವರು ಹೇಳಿದ್ದಾರೆ.

ಕಡಿಮೆ ಬಡ್ಡಿದರದಲ್ಲಿ ನೂರಾರು ಕೋಟಿ ರೂ. ಸಾಲ ನೀಡುವುದಾಗಿ ಭರವಸೆ ನೀಡಿ, ಅವರಿಂದ ಕೋಟಿಗಟ್ಟಲೆ ಹಣ ಸಂಗ್ರಹಿಸಿ, ವಂಚನೆ ಮಾಡಿ ನಾಪತ್ತೆಯಾಗಿದ್ದ ವಂಚಕ ರೋಷನ್ ಸಲ್ದಾನಾನನ್ನು ಕಳೆಗ ಗುರುವಾರ ಪೊಲೀಸರು ಬಂಧಿಸಿದ್ದಾರೆ.

ಬಿಹಾರದ ಉದ್ಯಮಿಯೊಬ್ಬರು ನೀಡಿದ ದೂರಿನ ಆಧಾರದ ಮೇಲೆ ಸಿಇಎನ್ ಪೊಲೀಸ್ ಠಾಣೆಯಲ್ಲಿ ಸಲ್ದಾನಾ ವಿರುದ್ಧ ಪ್ರಕರಣ ದಾಖಲಿಸಲಾಗಿದ್ದು, 10 ಕೋಟಿ ರೂ.ಗಳಿಗೂ ಹೆಚ್ಚು ವಂಚಿಸಲಾಗಿದೆ ಎಂದು ಆರೋಪ ಹೊರಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಈ ಪ್ರಕರಣವು ನಕಲಿ ದಾಖಲೆಗಳ ಬಳಕೆ, ಶೆಲ್ ಕಂಪನಿಗಳು ಮತ್ತು ಹಣಕಾಸಿನ ಕುಶಲತೆಯ ಅತ್ಯಾಧುನಿಕ ವಿಧಾನಗಳನ್ನು ಒಳಗೊಂಡಿದೆ ಎಂದು ಅವರು ಹೇಳಿದ್ದಾರೆ.

ಕಾನೂನು ನಿಬಂಧನೆಗಳ ಪ್ರಕಾರ, 10 ಕೋಟಿ ರೂ.ಗಿಂತ ಹೆಚ್ಚಿನ ವಂಚನೆ ಪ್ರಕರಣಗಳು ಸಿಐಡಿ ತನಿಖೆಗೆ ಅರ್ಹವಾಗಿವೆ.

ಈ ಹಿಂದೆ ಔಪಚಾರಿಕ ವಿನಂತಿಯನ್ನು ಸಲ್ಲಿಸಲಾಗಿತ್ತು ಮತ್ತು ಈಗ ಸಿಐಡಿ ತನಿಖೆ ಕೈಗೆತ್ತಿಕೊಳ್ಳಲು ಒಪ್ಪಿಕೊಂಡಿದೆ.

## ಕಲಬುರಗಿ ಚಿನ್ನದಂಗಡಿ ದರೋಡೆ ಪ್ರಕರಣ: ಮೂವರು ಅಂತಾರಾಜ್ಯ ದರೋಡೆಕೋರರ ಬಂಧನ



**ಕಲಬುರಗಿ:** ಕಲಬುರಗಿ ನಗರದ ಸರಾಫ್ ಬಝಾರ್‌ನಲ್ಲಿ ಜ್ಯುವೆಲರಿ ಶಾಪ್ ದರೋಡೆ ಪ್ರಕರಣವನ್ನು ಪೊಲೀಸರು ಭೇದಿಸಿದ್ದು, ಮೂವರು ಅಂತರರಾಜ್ಯ ದರೋಡೆಕೋರರನ್ನ ಬಂಧಿಸಿದ್ದಾರೆ.

ಬಂಧಿತರಿಂದ 2.865 ಕೆಜಿ ಚಿನ್ನ ಹಾಗೂ 4.80 ಲಕ್ಷ ರೂ. ನಗದನ್ನು ವಶಕ್ಕೆ ಪಡೆದಿದ್ದಾರೆ.

ಈ ಸಂಬಂಧ ನಗರದ ಪೊಲೀಸ್ ಆಯುಕ್ತಾಲಯದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ ಅವರು, ಪಶ್ಚಿಮ ಬಂಗಾಳದ ಗೋಪಾಲ ನಗರ ಪೊಲೀಸ್ ಠಾಣೆಯ ವ್ಯಾಪ್ತಿಯ ನಿವಾಸಿ ಅಯೋಧ್ಯಾ ಪ್ರಸಾದ್ ಚೌಹಾಣ್(48), ದಡಪೂರ ಪೊಲೀಸ್ ಠಾಣೆಯ ವ್ಯಾಪ್ತಿಯ ಬಂಗಾರ ವ್ಯಾಪಾರಿಯಾಗಿದ್ದ ಫಾರುಕ್ ಅಹಮದ್ ಮಲ್ಲಿಕ್(40) ಹಾಗೂ

ಮುಂಬೈನಲ್ಲಿ ಟೇಲರ್ ಆಗಿ ಕೆಲಸ ಮಾಡುತ್ತಿದ್ದ ಸೊಹೆಲ್ ಶೇಖ್ ಅಲಿಯಾಸ್ ಬಾದಶಾ(30) ಎಂಬ ದರೋಡೆಕೋರರನ್ನು ಪಶ್ಚಿಮ ಬಂಗಾಳದ ಹೂಗ್ಲಿಯಲ್ಲಿ ಬಂಧಿಸಲಾಗಿದೆ ಎಂದು ತಿಳಿಸಿದರು.

ಜುಲೈ 11ರಂದು ನಗರದಲ್ಲಿ ಮಲ್ಲಿಕ್ ಜ್ಯುವೆಲರಿ ಶಾಪ್‌ನಿಂದ ಅಂದಾಜು 3 ಕೋಟಿ ಮೌಲ್ಯದ ಬಂಗಾರದ ಆಭರಣಗಳನ್ನು ದರೋಡೆ ಮಾಡಿರುವ ಈ ಪ್ರಕರಣ ಭಾರೀ ಸಂಚಲನ ಮೂಡಿಸಿತ್ತು.

ಈ ಪ್ರಕರಣವನ್ನು ಬೇಧಿಸಲು ಕಲಬುರಗಿ ಪೊಲೀಸರು, 5 ತನಿಖಾ ತಂಡಗಳನ್ನು ರಚಿಸಿ, ಪಶ್ಚಿಮ ಬಂಗಾಳ, ಉತ್ತರ ಪ್ರದೇಶ, ಮಹಾರಾಷ್ಟ್ರ, ತೆಲಂಗಾಣ ರಾಜ್ಯಗಳಲ್ಲಿ ಕಾರ್ಯಾಚರಣೆ ನಡೆಸಿತ್ತು.

ಬ್ರಹ್ಮಪುರ ಪಿಐ ಸೋಮಲಿಂಗ, ಚೌಕ್ ಪೊಲೀಸ್ ಠಾಣೆಯ ಪಿಐ ರಾಘವೇಂದ್ರ, ಅಶೋಕ್‌ನಗರ ಸಿಪಿಐ ಅರುಣ್ ಕುಮಾರ್, ವಿವಿ ಸಿಪಿಐ ಸುಶೀಲ್, ಶಿವಾನಂದ ವಾಲೀಕಾರ, ಬಂದೇ ನವಾಜ್ ಮತ್ತಿತರರನ್ನು ಒಳಗೊಂಡ ತನಿಖಾ ತಂಡ ಪಶ್ಚಿಮ ಬಂಗಾಳ ಹಾಗೂ ಉತ್ತರ ಪ್ರದೇಶಕ್ಕೆ ತೆರಳಿತ್ತು. ಈ ತಂಡ ಸೇರಿದಂತೆ ಇನ್ನುಳಿದ 4 ತಂಡಗಳ ಶ್ರಮದಿಂದ ಆರೋಪಿಗಳನ್ನು ಹೆಡೆಮುರಿ ಕಟ್ಟುವಲ್ಲಿ ಯಶಸ್ವಿಯಾಗಿದೆ.

## ಆರ್‌ಪಿಎಲ್ ಕಿಟ್ ವಿತರಣೆ



**ಚಿತ್ರದುರ್ಗ:** ಚಿತ್ರದುರ್ಗ ತಾಲ್ಲೂಕಿನಲ್ಲಿ ಆರ್‌ಪಿಎಲ್ (Recognition of Prior Learning) ತರಬೇತಿ ಪಡೆದ ಕಾರ್ಮಿಕರಿಗೆ ನಗರದ ಪ್ರವಾಸಿ ಮಂದಿರದಲ್ಲಿ ಸೋಮವಾರ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅವರು ಆರ್‌ಪಿಎಲ್ ಕಿಟ್ ವಿತರಿಸಿದರು.

ಕಾರ್ಮಿಕ ಇಲಾಖೆಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿವತಿಯಿಂದ ಸರಬರಾಜು ಆದ ಆರ್.ಪಿ.ಎಲ್ ಕಿಟ್‌ಗಳನ್ನು ಚಿತ್ರದುರ್ಗ ತಾಲ್ಲೂಕಿನಲ್ಲಿ ಆರ್.ಪಿ.ಎಲ್. ತರಬೇತಿ ಪಡೆದ ಕಾರ್ಮಿಕರಿಗೆ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಆರ್.ಶಿವಣ್ಣ, ಚಿತ್ರದುರ್ಗ ಕಾರ್ಮಿಕ ನಿರೀಕ್ಷಕ ಪಿ.ಭೀಮೇಶ್, ತಾಲ್ಲೂಕು ಕೆಡಿಪಿ ಸದಸ್ಯ ನಾಗರಾಜ್ ಹಾಗೂ ನೊಂದಾಯಿತ ಫಲಾನುಭವಿಗಳು ಉಪಸ್ಥಿತರಿದ್ದರು.

ಫೋಟೋ ವಿವರ: ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ ವತಿಯಿಂದ ಸರಬರಾಜು ಆದ ಆರ್‌ಪಿಎಲ್ ಕಿಟ್‌ಗಳನ್ನು ಚಿತ್ರದುರ್ಗ ತಾಲ್ಲೂಕಿನಲ್ಲಿ ಆರ್‌ಪಿಎಲ್ ತರಬೇತಿ ಪಡೆದ ಕಾರ್ಮಿಕರಿಗೆ ಚಿತ್ರದುರ್ಗ ನಗರದ ಪ್ರವಾಸಿ ಮಂದಿರದಲ್ಲಿ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅವರು ಆರ್‌ಪಿಎಲ್ ಕಿಟ್ ವಿತರಿಸಿದರು.

## ಕ್ಷೌರಿಕ ವೃತ್ತಿಯ ದರಪಟ್ಟಿ ದುರ್ಬಳಕೆ : ಸವಿತಾ ಸಮಾಜದಿಂದ ಪ್ರತಿಭಟನೆ



**ಚಿಕ್ಕಮಗಳೂರು:** ಕ್ಷೌರಿಕ ವೃತ್ತಿಯ ದರಪಟ್ಟಿಯ ದುರ್ಬಳಕೆ ಮತ್ತು ಸಾಮಾಜಿಕ ಜಾಲತಾಣಗಳಲ್ಲಿ ನಿಗಧಿತ ದರಕ್ಕಿಂತ ಕಡಿಮೆ ದರ ಪ್ರಚಾರ ಮಾಡುತ್ತಿರುವವ ವಿರುದ್ಧ ಶ್ರೀರಾಮಮಂದಿರ ಆರ್ಯನಯನಜ ಕ್ಷತ್ರಿಯ ಸಂಘ ಮತ್ತು ಜಿಲ್ಲಾ ಸವಿತಾ ಸಮಾಜದ ಮುಖಂಡರುಗಳು ನಗರದ ಆಜಾದ್ ಪಾರ್ಕ್ ವೃತ್ತದಲ್ಲಿ ಇಂದು ಪ್ರತಿಭಟನೆ ನಡೆಸಿದರು.

ಈ ಕುರಿತು ಮಾತನಾಡಿದ ಸಂಘದ ಜಿಲ್ಲಾಧ್ಯಕ್ಷ ಮಹಾಲಿಂಗಪ್ಪ ಪೂರ್ವಜರ ಕಾಲದಿಂದಲೂ ಕ್ಷೌರಿಕ ವೃತ್ತಿಯನ್ನು ಜೀವನದ ಭಾಗವಾಗಿ ಅವಲಂಬಿಸಿಕೊಂಡಿದ್ದೇವೆ. ಈ ವೃತ್ತಿ ಹೊರತಾಗಿ ಬೇರೆ ಯಾವುದೇ ಕೆಲಸ ತಿಳಿಯದ ಸಮಾಜ ಬಾಂಧವರಿಗೆ ಕೆಲವರು ತೊಂದರೆ ನೀಡುತ್ತಿದ್ದಾರೆ ಎಂದರು.

ಸವಿತಾ ಸಮಾಜದ ಬಾಂಧವರ ಒಳಿತಿಗಾಗಿ ವೃತ್ತಿಯ ದರಪಟ್ಟಿಯನ್ನು ಸ್ಥಾಪಿಸಿದ್ದು, ಕ್ಷೌರಿಕ ವೃತ್ತಿದಾರರು ಈ ನಿಯಮಗಳನ್ನು ಸಂಪೂರ್ಣವಾಗಿ ಪಾಲಿಸುತ್ತಿದ್ದಾರೆ. ಆದರೆ, ಇತ್ತೀಚೆಗೆ ಹೊರರಾಜ್ಯದಿಂದ ಕೆಲವರನ್ನು ಕರೆತಂದಿರುವ ಬಂಡವಾಳ ಶಾಹಿಗಳು ಕಡಿಮೆ ದರ ನಿಗಧಿಪಡಿಸಿ ಮೂಲ ವೃತ್ತಿಗೆ ಧಕ್ಕೆಯುಂಟುಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ಕ್ಷತ್ರಿಯ ಸಂಘದ ತಾಲ್ಲೂಕು ಅಧ್ಯಕ್ಷ ಸಿ.ಎಂ.ಯೋಗೇಶ್ ಮಾತನಾಡಿ, ಕ್ಷೌರಿಕ ವೃತ್ತಿಯವರಿಗೆ ಸಮಾಜವು ನಿಗಧಿಪಡಿಸಿ ದರದಲ್ಲೇ ಕೆಲಸ ಮಾಡಲಾಗುತ್ತಿದೆ. ಆದರೆ, ಕೆಲವರು ವೃತ್ತಿಯವರ ಹೊಟ್ಟೆಮೇಲೆ ಹೊಡೆದು ಕಡಿಮೆ ದರದಲ್ಲಿ ಸಾಮಾಜಿಕ ಜಾಲತಾಣದಲ್ಲಿ ಪ್ರಸಾರ ಮಾಡಿಸುವುದು ಸರಿಯಲ್ಲ. ಕೂಡಲೇ ಈ ಬಗ್ಗೆ ಜಿಲ್ಲಾಡಳಿತ ಕ್ರಮ ವಹಿಸಬೇಕು ಎಂದು ಆಗ್ರಹಿಸಿದರು.

# ಸ್ವಚ್ಛಗೊಳಿಸಲು ಒಳಚರಂಡಿಗೆ ಇಳಿದಿದ್ದ ವ್ಯಕ್ತಿ ಉಸಿರುಗಟ್ಟಿ ಸಾವು; ನಾಲ್ವರ ಬಂಧನ



**ಬೆಂಗಳೂರು:** ಸ್ವಚ್ಛಗೊಳಿಸಲು ಒಳಚರಂಡಿಗೆ ಇಳಿದ ವ್ಯಕ್ತಿಯೋರ್ವ ಉಸಿರುಗಟ್ಟಿ ಸಾವನ್ನಪ್ಪಿರುವ ಘಟನೆ ಆರ್‌ಎಂಸಿ ಯಾರ್ಡ್ ಠಾಣಾ ವ್ಯಾಪ್ತಿಯ ಆಶ್ರಯನಗರದಲ್ಲಿ ನಡೆದಿದೆ.

ಮೃತ ವ್ಯಕ್ತಿಯನ್ನು ಆರ್‌ಎಂಸಿ ಯಾರ್ಡ್ ನ ಪುಟ್ಟಸ್ವಾಮಿ (31) ಎಂದು ಗುರುತಿಸಲಾಗಿದೆ. ನಿಷೇಧದ ಹೊರತಾಗಿಯೂ ಪುಟ್ಟಸ್ವಾಮಿಯನ್ನು ಸ್ವಚ್ಛಗೊಳಿಸಲು ಒಳಚರಂಡಿಗೆ ಇಳಿಸಿದ ಆರೋಪದ ಮೇಲೆ ನಾಲ್ವರನ್ನು ಪೊಲೀಸರು ಬಂಧನಕ್ಕೊಳಪಡಿಸಿದ್ದಾರೆ.

ಆಶ್ರಯನಗರದ ಇಂದಿರಾ ಕ್ಯಾಂಟೀನ್ ಬಳಿಯ ಒಳಚರಂಡಿ ಶುಚಿಗೊಳಿಸಲು ಭಾನುವಾರ ಸಂಜೆ ಪುಟ್ಟ ಹಾಗೂ ಅಂಥೋಣಿ ಇಳಿದಿದ್ದರು. ಶುಚಿಗೊಳಿಸುವ ವೇಳೆ ಇಬ್ಬರೂ ಉಸಿರುಗಟ್ಟಿ ಅಸ್ವಸ್ಥರಾಗಿದ್ದರು. ಇಬ್ಬರನ್ನೂ ಹೊರಕ್ಕೆ ಕ–ರೆತಂದು ಮಜ್ಜಿಗೆ ಹಾಗೂ ನೀರು ಕುಡಿಸಿ ಮನೆಗೆ ಕಳುಹಿಸಲಾಗಿತ್ತು. ಆದರೆ, ರಾತ್ರಿ ಮನೆಯಲ್ಲಿ ಮಲಗಿದ್ದ ಸ್ಥಳದಲ್ಲೇ ಪುಟ್ಟಸ್ವಾಮಿ ಮೃತಪಟ್ಟಿದ್ದಾರೆಂದು ಮೂಲಗಳು ತಿಳಿಸಿವೆ.

ಬಂಧಿತ ನಾಲ್ವರು ಆರೋಪಿಗಳಲ್ಲಿ ಒಬ್ಬನಾದ ನಾಗರಾಜು, ಅಕ್ಷಯ ನಗರದಲ್ಲಿ ಮುಚ್ಚಿಹೋಗಿರುವ ಒಳಚರಂಡಿಯನ್ನು ಸ್ವಚ್ಛಗೊಳಿಸಲು ಪುಟ್ಟಸ್ವಾಮಿ ಮತ್ತು ಆಂಥೋಣಿ ಎಂಬ ದಿನಗೂಲಿ ಕಾರ್ಮಿಕರನ್ನು ನೇಮಿಸಿದ್ದಾನೆ.

ಇಬ್ಬರೂ ಸಂಜೆ 7 ಗಂಟೆ ಸುಮಾರಿಗೆ ಯಾವುದೇ ಸುರಕ್ಷತಾ ಸಾಧನಗಳಿಲ್ಲದೆ ಒಳಚರಂಡಿ ಸ್ವಚ್ಛಗೊಳಿಸಲು ಒಳಗೆ ಇಳಿದಿದ್ದಾರೆ. ಈ ವೇಳೆ ಮ್ಯಾನ್ ಹೋಲ್ ಒಳಗೆ ಇದ್ದ ವಿಷಕಾರಿ ಅನಿಲವನ್ನು ಉಸಿರಾಡಿದ ಪರಿಣಾಮ ಉಸಿರಾಟದ ಸಮಸ್ಯೆ ಎದುರಾಗಿದೆ. ಅಸ್ವಸ್ಥಗೊಂಡಿದ್ದ ಇಬ್ಬರಿಗೆ ಹೊರತಂದ ಬಳಿಕ ಯಾವುದೇ ವೈದ್ಯಕೀಯ ಚಿಕಿತ್ಸೆಗಳನ್ನು ಕೊಡಿಸಿಲ್ಲ.

ಮನೆಗೆ ತೆರಳಿದ ಪುಟ್ಟಸ್ವಾಮಿಯವರು ವಿಶ್ರಾಂತಿ ಪಡೆದಿದ್ದು, ರಾತ್ರಿ ಮೃತುಪಟ್ಟಿದ್ದಾರೆ. ಶವವನ್ನು ಇದೀಗ ಮರಣೋತ್ತರ ಪರೀಕ್ಷೆಗೆ ರವಾನಿಸಲಾಗಿದೆ ಎಂದು ಪೊಲೀಸರು ಹೇಳಿದ್ದಾರೆ.

ಪುಟ್ಟಸ್ವಾಮಿ ಅವರ ತಂದೆ ನೀಡಿದ ದೂರಿನ ಆಧಾರದ ಮೇಲೆ, ಪುಟ್ಟಸ್ವಾಮಿಯನ್ನು ಒಳಚರಂಡಿ ಸ್ವಚ್ಛತೆಗಿಳಿಸಿದ ಆರೋಪದ ಮೇಲೆ ನಾಗರಾಜು, ಆಂಟನಿ, ಅನಂತಕುಮಾರ್ ಮತ್ತು ದೇವರಾಜು ವಿರುದ್ಧ ಪ್ರಕರಣ ದಾಖಲಿಸಲಾಗಿದೆ. ಮ್ಯಾನ್‌ಹೋಲ್ ಸ್ವಚ್ಛಗೊಳಿಸಲು ಪುಟ್ಟಸ್ವಾಮಿಯನ್ನು ಕರೆದೊಯ್ದ ಆರೋಪದ ಮೇಲೆ ಆಂಟನಿ ವಿರುದ್ಧ ಪ್ರಕರಣ ದಾಖಲಿಸಲಾಗಿದೆ ಎಂದು ತಿಳಿಸಿದ್ದಾರೆ.

## ಡಿಸಿಸಿ ಬ್ಯಾಂಕ್ ಚುನಾವಣೆ ಮತದಾರರ ಕರಡು ಪಟ್ಟಿ ಪ್ರಕಟ

**ಚಿಕ್ಕಮಗಳೂರು:** ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್‌ನ ಆಡಳಿತ ಮಂಡಳಿಯ ಚುನಾವಣೆಗೆ ಸಂಬಂಧಿಸಿದಂತೆ ಬ್ಯಾಂಕ್‌ನ ಸದಸ್ಯ ಸಹಕಾರ ಸಂಘಗಳ ಪೈಕಿ ಅರ್ಹ ಸಹಕಾರ ಸಂಘಗಳ ಪಟ್ಟಿ, ಸುಸ್ತಿದಾರರ ಪಟ್ಟಿ ಹಾಗೂ ಅನರ್ಹ ಸಹಕಾರ ಸಂಘಗಳ ಕರಡು ಮತದಾರ ಪಟ್ಟಿಯನ್ನು ಜಿಲ್ಲೆಯ ಎಲ್ಲಾ ಸಹಕಾರ ಸಂಘಗಳಲ್ಲಿ ಜುಲೈ 25 ರಂದು ಪ್ರಚುರಪಡಿಸಿದ್ದು, ಯಾವುದೇ ಆಕ್ಷೇಪಣೆಗಳಿದ್ದಲ್ಲಿ ಆಗಸ್ಟ್ 10 ರೊಳಗೆ ಜಿಲ್ಲಾಧಿಕಾರಿಗಳ ಕಚೇರಿ ಅಥವಾ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್‌ಗೆ ಲಿಖಿತವಾಗಿ ಆಕ್ಷೇಪಣೆ ಸಲ್ಲಿಸಬಹುದು ಎಂದು ಜಿಲ್ಲಾ ಫೆಡೆರಲ್ ಸಹಕಾರ ಸಂಘಗಳ ಚುನಾವಣಾಧಿಕಾರಿಯೂ ಆಗಿರುವ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸರ್ಕಾರಿ ಪಾಲಿಟೆಕ್ನಿಕ್‌ನಲ್ಲಿ ಪ್ರವೇಶಾವಕಾಶ

**ಚಿಕ್ಕಮಗಳೂರು :** ನಗರದ ಡಿಎಸಿಜಿ ಪಾಲಿಟೆಕ್ನಿಕ್‌ನಲ್ಲಿ ಎಸ್‌ಎಸ್‌ಎಲ್‌ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾದ ಅರ್ಹ ಅಭ್ಯರ್ಥಿಗಳಿಗೆ ಮೊದಲನೇ ಸೆಮಿಸ್ಟರ್ ಮತ್ತು ಲ್ಯಾಟರಲ್ ಎಂಟ್ರಿ 3ನೇ ಸೆಮಿಸ್ಟರ್ ಡಿಪ್ಲೊಮಾಗೆ ಭರ್ತಿಯಾಗದೆ ಉಳಿದಿರುವ ಕೆಲವೇ ಕೆಲವು ಸೀಟುಗಳನ್ನು ಪ್ರಾಂಶುಪಾಲರ ಹಂತದಲ್ಲಿ ಆಫ್‌ಲೈನ್ ಮೂಲಕ ಭರ್ತಿ ಮಾಡಿಕೊಳ್ಳುವ ಅವಕಾಶವನ್ನು ಆಗಸ್ಟ್ 11ರವರೆಗೆ ವಿಸ್ತರಿಸಲಾಗಿದೆ. ಹೆಚ್ಚಿನ ಮಾಹಿತಿಗೆ ದೂರವಾಣಿ ಸಂಖ್ಯೆ (9886489678 ಅಥವಾ 9620158708) ಗಳನ್ನು ಸಂಪರ್ಕಿಸಬಹುದು ಎಂದು ಪಾಲಿಟೆಕ್ನಿಕ್‌ನ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರಸನ್ನ ರಾಮೇಶ್ವರ ಸ್ವಾಮಿ ದೇವಸ್ಥಾನ ಸಮಿತಿಯಿಂದ ಶಾಸಕರಿಗೆ ಮನವಿ



**ತರೀಕೆರೆ :** ಪಟ್ಟಣದ ಚಿಕ್ಕೆರೆ ಏರಿಯ ಪಕ್ಕದಲ್ಲಿರುವ ಶ್ರೀ ಪ್ರಸನ್ನ ರಾಮೇಶ್ವರ ಸ್ವಾಮಿ ದೇವಸ್ಥಾನ ಸಮಿತಿ ವತಿಯಿಂದ ಭಕ್ತಾಧಿಗಳ ಅನುಕೂಲಕ್ಕಾಗಿ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಶಾಸಕ ಜಿ.ಎಚ್. ಶ್ರೀನಿವಾಸ್‌ರವರಿಗೆ ಮನವಿ ಸಲ್ಲಿಸಿದರು.

ದೇವಸ್ಥಾನದ ಆವರಣದಲ್ಲಿರುವ ಸುಬ್ಬರಾಯನ ಕೊಳ, ಶ್ರೀ ಸುಬ್ರಮಣ್ಯ ಸ್ವಾಮಿ ದೇವಸ್ಥಾನ ಮತ್ತು ನಾಗಬನ ದೇವರುಗಳು ಇತಿಹಾಸ ಪ್ರಸಿದ್ದವಾಗಿದ್ದು, ಹತ್ತಾರು ವರ್ಷಗಳ ನಂತರ ಇದ್ದ ಹಳೆಯ ದೇವಸ್ಥಾನ ಪುನರ್ ನಿರ್ಮಾಣವಾಗಿದೆ. ಇದು ಪಟ್ಟಣದ ಭಕ್ತಾಧಿಗಳ ಪ್ರಮುಖ ಶ್ರದ್ಧಾ ಕೇಂದ್ರವಾಗಿದೆ. ಶಿವರಾತ್ರಿ ಹಬ್ಬದಂದು ವಿಶೇಷ ಪೂಜೆಗಳು, ಭಜನೆ, ಅನ್ನಸಂತರ್ಪಣೆ ಮತ್ತು ನಿತ್ಯ ಪೂಜೆ ಸಾಂಗವಾಗಿ ನಡೆದುಕೊಂಡು ಬರುತ್ತಿರುವ ಪುಣ್ಯಕ್ಷೇತ್ರವಾಗಿದೆ.

ಮನವಿಯಲ್ಲಿ ಪ್ರತಿ ಸೋಮವಾರ ಸಾರ್ವಜನಿಕರಿಗಾಗಿ ಅನ್ನಸಂತರ್ಪಣೆಯ ವ್ಯವಸ್ಥೆ, ದೇವಸ್ಥಾನದ ಮತ್ತು ಸಾರ್ವಜನಿಕರ ಅನುಕೂಲಕ್ಕಾಗಿ ಒಂದು ಮೋಟರ್ ಸಹಿತ ಕೋಳವೆಬಾಯಿ, ಕಲ್ಯಾಣಿಯ ಹಿಂಭಾಗದ ಜಾಗದಲ್ಲಿ ಅಡಿಗೆ ಮನೆ ಮತ್ತು ದಾಸ್ತಾನು ಕೊಠಡಿ, ದೇವಸ್ಥಾನದ ಪ್ರವೇಶ ದ್ವಾರಕ್ಕೆ ಒಂದು ಸ್ವಾಗತ ಮಂಟಪ (ಸ್ವಾಗತ ಕಮಾನ್), ಹಾಲಿ ಇರುವ ಕಲ್ಯಾಣಿಯ ಮುಂಭಾಗದಲ್ಲಿ ಪಂಚಮುಖಿ ಈಶ್ವರನ ಪ್ರತಿಮೆ, ಅಲ್ಲದೆ ಭಕ್ತರು ದೇವಾಲಯದ ಆವರಣದಲ್ಲಿ ಭಕ್ತಿಯಿಂದ ಕುಳಿತುಕೊಳ್ಳುವಂತಹ ವಾತಾವರಣವನ್ನು ನಿರ್ಮಿಸುವ ಅವಶ್ಯಕತೆ ಇದೆ ಎಂದು ತಿಳಿಸಲಾಗಿದೆ.

ಈ ಸಂದರ್ಭದಲ್ಲಿ ಪುರಸಭಾ ಮಾಜಿ ಅಧ್ಯಕ್ಷ ಟಿ.ಎಸ್. ಧರ್ಮರಾಜ್, ಕಾಂಗ್ರೆಸ್ ಕಿಸಾನ್ ಶೆಲ್ ಅಧ್ಯಕ್ಷ ಗಿರೀಶ್ ಮತ್ತು ದೇವಸ್ಥಾನ ಸಮಿತಿ ಪದಾಧಿಕಾರಿಗಳು ಇದ್ದರು.

# ಅನುಮತಿ ಇಲ್ಲದೆ ಟ್ರೆಕ್ಕಿಂಗ್ ನಡೆಸುತ್ತಿದ್ದ 103 ಪ್ರವಾಸಿಗರ ಬಂಧನ

**ಚಿಕ್ಕಮಗಳೂರು:** ಪಶ್ಚಿಮಘಟ್ಟದ ನಿಷೇಧಿತ ಅರಣ್ಯ ಪ್ರದೇಶ ಬಿದಿರುತಳದಲ್ಲಿ ಅನುಮತಿ ಇಲ್ಲದೆ ಟ್ರೆಕ್ಕಿಂಗ್ ನಡೆಸುತ್ತಿದ್ದ 103 ಪ್ರವಾಸಿಗರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

ಈ ಘಟನೆ ಇಂದು ಮೂಡಿಗೆರೆ ತಾಲ್ಲೂಕಿನ ಚಾರ್ಮಾಡಿ ಘಾಟಿಯ ಆಳವಾದ ಕಾಡು ಪ್ರದೇಶದಲ್ಲಿ ಸಂಭವಿಸಿದೆ. ಕಾನೂನುಬಾಹಿರವಾಗಿ ಅರಣ್ಯ ಪ್ರದೇಶ ಪ್ರವೇಶಿಸಿ ಟ್ರೆಕ್ಕಿಂಗ್ ನಡೆಸಲಾಗುತ್ತಿದೆ ಎಂಬ ಖಚಿತ ಮಾಹಿತಿಯ ಮೇಲೆ ಬಣಕಲ್ ಹಾಗೂ ಬಾಳೂರು ಪೊಲೀಸ್ ಠಾಣೆಗಳ ಪೊಲೀಸರು ದಾಳಿ ನಡೆಸಿದರು.


ಬಣಕಲ್ ಪಿಎಸ್ಐ ರೇಣುಕಾ ಮತ್ತು ಬಾಳೂರು ಪಿಎಸ್ಐ ದಿಲೀಪ್ ಕುಮಾರ್ ನೇತೃತ್ವದಲ್ಲಿ ನಡೆದ ಕಾರ್ಯಾಚರಣೆಯಲ್ಲಿ ಎಲ್ಲ 103 ಜನರನ್ನು ವಶಕ್ಕೆ ಪಡೆಯಲಾಗಿದೆ. ಈ ತಂಡದಲ್ಲಿ ಭಾಗವಹಿಸಿದ್ದವರು ಬೆಂಗಳೂರು ಮೂಲದ ಪ್ರಮುಖ ಐಟಿ ಕಂಪನಿಗಳ ಉದ್ಯೋಗಿಗಳು ಎಂದು ಮಾಹಿತಿ ಲಭ್ಯವಾಗಿದೆ.

ಕಾರ್ಯಾಚರಣೆ ವೇಳೆ ಪ್ರಯಾಣಿಸಿದ್ದ ಎರಡು ಪ್ರವಾಸಿ ಬಸ್ಸುಗಳು ಹಾಗೂ ಎರಡು ಪಿಕಪ್ ವಾಹನಗಳನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

ಪ್ರವಾಸಿಗರನ್ನು ನಿಷೇಧಿತ ಅರಣ್ಯ ಪ್ರದೇಶಕ್ಕೆ ಕರೆದು–ಕೊಂಡು ಹೋಗಿದ್ದು ಸ್ಥಳೀಯ ಒಬ್ಬ ವ್ಯಕ್ತಿ ಎಂಬ ಮಾಹಿತಿ ಲಭ್ಯವಾಗಿದ್ದು, ಅವರ ಬಗ್ಗೆ ತನಿಖೆ ನಡೆಯುತ್ತಿದೆ.

ಅರಣ್ಯ ಇಲಾಖೆಯ ಅನುಮತಿಯಿಲ್ಲದೆ ನಿಷೇಧಿತ ಪ್ರದೇಶದಲ್ಲಿ ಪ್ರವೇಶಿಸುವುದು ಅರಣ್ಯ ಕಾಯ್ದೆಯ ಪ್ರಕಾರ ಗಂಭೀರ ಅಪರಾಧವಾಗಿದೆ.

# ತಮ್ಮ ವೃತ್ತಿ ಗೌರವಕ್ಕೆ ಚ್ಯುತಿ ಬಾರದಂತೆ ಕೆಲಸ ಮಾಡಬೇಕು : ಶಾಸಕ ದೇವೇಂದ್ರಪ್ಪ




**ಜಗಳೂರು :** ಪಟ್ಟಣದಲ್ಲಿ ನಿರ್ಮಾಣವಾಗುತ್ತಿರುವ ಪತ್ರಕರ್ತರ ಭವನ ಕಾಮಗಾರಿಯನ್ನು ಶೀಘ್ರ ಪೂರ್ಣಗೊಳಿಸಲು ಅನುದಾನ ನೀಡುವುದಾಗಿ ಶಾಸಕ ಬಿ. ದೇವೇಂದ್ರಪ್ಪ ಭರವಸೆ ನೀಡಿ–ದ್ದಾರೆ.

ಪತ್ರಿಕಾ ಭವನದಲ್ಲಿ ಕಾರ್ಯನಿರತ ಪತ್ರಕರ್ತರ ಸಂಘ ಹಮ್ಮಿಕೊಂಡಿದ್ದ ಪತ್ರಿಕಾ ದಿನಾಚರಣೆಯನ್ನು ಸಸಿಗೆ ನೀರೆರೆಯುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಪತ್ರಕರ್ತರನ್ನು ದುಂಬಿಗಳಂತೆ ಸಮಾಜದ ಮೂಲೆಮೂಲೆಗಳಿಂದ ಸುದ್ದಿಗಳನ್ನು ಸಂಗ್ರಹಿಸಿ, ವಾಸ್ತವಿಕತೆಯನ್ನು ನೈಜ ಸುದ್ದಿಗಳಿಂದ ಹೊರತರಬೇಕು. ಈ ವೃತ್ತಿಯಲ್ಲಿ ಅನೇಕ ಅಡೆತಡೆಗಳು ಎದುರಾದರೂ, ಅವುಗಳನ್ನು ಮೆಟ್ಟಿ ನಿಂತು ವೃತ್ತಿ ಗೌರವಕ್ಕೆ ಚ್ಯುತಿ ಬಾರದಂತೆ ಕೆಲಸ ಮಾಡಬೇಕು ಎಂದು ಕರೆ ನೀಡಿದರು.

ಪತ್ರಕರ್ತರು ನಿರಂತರ ಕಲಿಕೆ ಮತ್ತು ವೃತ್ತಿಪರತೆ ಹೊಂದುವ ಮೂಲಕ ಅವರ ಲೇಖನಗಳು ಪರಿಪಕ್ವವಾಗಿರಬೇಕು. ಸಾಕ್ಷ್ಯಾಧಾರ ಸಮೇತ ಸವಾಲುಗಳನ್ನು ಎದುರಿಸುವ ಧೈರ್ಯ ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ತಮ್ಮ ಶಾಸಕ ಹುದ್ದೆ ಶಾಶ್ವತವಲ್ಲ, ಕ್ಷೇತ್ರದ ಸರ್ವತೋಮುಖ ಅಭಿವೃದ್ಧಿ ಮುಖ್ಯ ಎಂದು ಹೇಳಿದ ದೇವೇಂದ್ರಪ್ಪ, ಪತ್ರಕರ್ತರ ಸಂಘದಲ್ಲೂ ಅಧಿಕಾರ ಮುಖ್ಯವಲ್ಲ, ಭಿನ್ನಾಭಿಪ್ರಾಯಗಳನ್ನು ಬದಿಗೊತ್ತಿ ಸಂಘದ ಏಳ್ಗೆಗೆ ಶ್ರಮಿಸಬೇಕು. ಸಂಘಟನೆ ಶಾಶ್ವತ. ತಾಲ್ಲೂಕಿನ ಪತ್ರಕರ್ತರ ಸಮಸ್ಯೆಗಳಿಗೆ ಸದಾ ಸ್ಪಂದಿಸುವುದಾಗಿ ತಿಳಿಸಿದರು.

ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಇ.ಎಂ. ಮಂಜುನಾಥ ಮಾತನಾಡಿ, ಪತ್ರಿಕಾ ದಿನಾಚರಣೆ ಪತ್ರಕರ್ತರ ಸಂಘಟನೆ ಮತ್ತು ಸಮಸ್ಯೆಗಳ ಈಡೇರಿಕೆಗೆ ವೇದಿಕೆಯಾಗಿದೆ. ಇದನ್ನು ಸದ್ಬಳಕೆ ಮಾಡಿಕೊಂಡು ವೃತ್ತಿ ಬದ್ಧತೆ ಕಾಪಾಡಿಕೊಳ್ಳುವ ಸಂಕಲ್ಪ ಮಾಡಬೇಕು. ಸಂಘಟನೆಯಲ್ಲಿನ ಆಂತರಿಕ ಲೋಪದೋಷಗಳನ್ನು ಸರಿಪಡಿಸಿಕೊಂಡು ಇತರರಿಗೆ ಪ್ರೇರಣೆಯಾಗಬೇಕು ಎಂದು ತಿಳಿಸಿದರು.

ಜಿಲ್ಲಾ ಉಪಾಧ್ಯಕ್ಷ ಡಿ. ಶ್ರೀನಿವಾಸ್ ಮಾತನಾಡಿ, ತಾಲ್ಲೂಕಿನಲ್ಲಿ ಅನೇಕ ಪತ್ರಕರ್ತರು ಅರೆಕಾಲಿಕ/ಬಿಡಿ ಸುದ್ದಿಗಾರರಾಗಿದ್ದು, ಸರ್ಕಾರದ ಸೌಲಭ್ಯಗಳಿಂದ ವಂಚಿತರಾಗುತ್ತಿದ್ದಾರೆ. ಸಮಾಜದಲ್ಲಿ ನಕಲಿ ಪತ್ರಕರ್ತರ ಹಾವಳಿಗೆ ಕಡಿವಾಣ ಹಾಕುವ ಅಗತ್ಯವಿದೆ ಎಂದು ಹೇಳಿದರು.

ಜಿಲ್ಲಾ ಸಮಿತಿ ಸದಸ್ಯ ಬಿ.ಪಿ. ಸುಬಾನ್ ಮಾತನಾಡಿ, ಪತ್ರಿಕಾ ವೃತ್ತಿ ಒಂದು ಸೇವೆಯಾಗಿದೆ. ವೃತ್ತಿ ಬದ್ಧತೆ ಕಾಪಾಡಿಕೊಂಡರೆ ಸಮಾಜದಲ್ಲಿ ಗೌರವ ಸ್ಥಾನಮಾನ ದೊರೆಯುತ್ತದೆ ಎಂದರು.

ತಾಲ್ಲೂಕು ಅಧ್ಯಕ್ಷ ಜಿ.ಎಸ್. ಚಿದಾನಂದಪ್ಪ ಮಾತನಾಡಿ, ದಶಕಗಳಿಂದ ಪತ್ರಕರ್ತರ ಭವನಕ್ಕಾಗಿ ಹೋರಾಟ ನಡೆಸುತ್ತಿದ್ದೇವೆ. ಮಾಜಿ ಶಾಸಕ ಎಸ್.ವಿ. ರಾಮಚಂದ್ರ ಅವರು 10 ಲಕ್ಷ ರೂ. ಅನುದಾನ ಒದಗಿಸಿದ್ದರಿಂದ ಭವನದ ಕಟ್ಟಡ ಅರ್ಧ–ಕ್ಕೆ ನಿಂತಿದೆ. ಹಾಲಿ ಶಾಸಕ ಬಿ. ದೇವೇಂದ್ರಪ್ಪ ಅವರ ಆಡಳಿತಾವಧಿಯಲ್ಲಿ ಪೂರ್ಣಗೊಳ್ಳುವ ವಿಶ್ವಾಸವಿದೆ. ಜೊತೆಗೆ, ಪಟ್ಟಣದಲ್ಲಿ ಪತ್ರಕರ್ತರಿಗೆ ನಿವೇಶನಗಳನ್ನು ಒದಗಿಸುವ ಬಹುದಿನದ ಬೇಡಿಕೆಯನ್ನು ಈಡೇರಿಸುವಂತೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಕಾ.ನಿ.ಪ. ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಫಕ್ರುದ್ದೀನ್, ರಾಷ್ಟ್ರೀಯ ಮಂಡಳಿ ಸದಸ್ಯ ಅಣಬೂರು ಮಠದ ಕೊಟ್ರೇಶ್, ತಾಲ್ಲೂಕು ಪ್ರಧಾನ ಕಾರ್ಯದರ್ಶಿ ಲೋಕೇಶ್ ಎಂ. ಐಹೊಳೆ, ತಾಲ್ಲೂಕು ಸಂಘದ ಪದಾಧಿಕಾರಿಗಳಾದ ಮಂಜಣ್ಣ, ಧನ್ಯಕುಮಾರ್, ಎಚ್.ಎಂ. ಹೊಳೆ, ರಾಜಪ್ಪ ವ್ಯಾಸಗೊಂಡನಹಳ್ಳಿ, ವಾಸೀಂ, ಕೆ.ಎಂ. ಜಗದೀಶ್, ಬಾಬು ಮರೇನಹಳ್ಳಿ, ಮಾದಿಹಳ್ಳಿ ಮಂಜಪ್ಪ, ಶಿವಲಿಂಗಪ್ಪ, ಸಂದೀಪ್, ಬಸವರಾಜ್, ತಿಪ್ಪೇಸ್ವಾಮಿ, ವೇದಮೂರ್ತಿ, ಸೋಮಣ್ಣ, ಮಾರಪ್ಪ, ಮಹಂತೇಶ್ ಬ್ರಹ್ಮ, ರಕೀಬ್, ಮಾರುತಿ, ಮುಖಂಡರಾದ ಪಲ್ಲಾಗಟ್ಟೆ ಶೇಖರಪ್ಪ, ಬಿ. ಮಹೇಶ್ವರಪ್ಪ, ಕಾಂತರಾಜ್, ಮಾಜಿ ಸೈನಿಕರಾದ ರಂಗಸ್ವಾಮಿ, ವಿರುಪಾಕ್ಷಿ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

### ಬೆಂಗಳೂರು ವಿಶ್ವವಿದ್ಯಾಲಯದಲ್ಲಿ ಮೀಸಲಾತಿ ಅಕ್ರಮ:

# ಉನ್ನತ ಶಿಕ್ಷಣ ಇಲಾಖೆಗೆ ಸಿಎಂ ಪತ್ರ, ಪರಿಶೀಲನೆಗೆ ಸೂಚನೆ

**ಬೆಂಗಳೂರು:** ಬೆಂಗಳೂರು ವಿಶ್ವವಿದ್ಯಾಲಯದಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡಕ್ಕೆ ಸೇರಿದ ಅಧ್ಯಾಪಕರ ನೇಮಕಾತಿಗಳಲ್ಲಿ ಮೀಸಲಾತಿ ನೀತಿಯ ಉಲ್ಲಂಘನೆಗಳ ಕುರಿತು ಆರೋಪಗಳು ಕೇಳಿ ಬಂದ ಹಿನ್ನೆಲೆಯಲ್ಲಿ ಪರಿಶೀಲನೆ ನಡೆಸುವಂತೆ ಉನ್ನತ ಶಿಕ್ಷಣ ಇಲಾಖೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸೂಚನೆ ನೀಡಿ–ದ್ದಾರೆ.



ಈ ಕುರಿತು ಉನ್ನತ ಶಿಕ್ಷಣ ಇಲಾಖೆ ಪ್ರಧಾನ ಕಾರ್ಯದರ್ಶಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪತ್ರ ಬರೆದಿದ್ದಾರೆ.

ಬೆಂಗಳೂರು ವಿಶ್ವವಿದ್ಯಾಲಯದಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡಕ್ಕೆ ಸೇರಿದ ಅಧ್ಯಾಪಕರಿಗೆ ತಾರತಮ್ಯ ಮಾಡಲಾಗುತ್ತಿದೆ ಎಂಬ ದೂರು ಕುರಿತು ಪರಿಶೀಲನೆ ನಡೆಸಿ, ವರದಿ ನೀಡುವಂತೆ ಪತ್ರದಲ್ಲಿ ಸೂಚನೆ ನೀಡಿದ್ದಾರೆ.

ಹೊರಗಿನ ವಿಶ್ವವಿದ್ಯಾಲಯದಿಂದ ಬಂದ ಅಧ್ಯಾಪಕರ ಸೇವಾ ಹಿರಿತನ, ರೋಸ್ಟರ್ ಅನುಪಾತವನ್ನು ನಿರ್ಧರಿಸಬೇಕು. ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮಕೈಗೊಳ್ಳಬೇಕು ಎಂದು ಅಧ್ಯಾಪಕರು ಕೋರಿದ್ದಾರೆ. ಹಾಗಾಗಿ, ತಕ್ಷಣ ಪರಿಶೀಲನೆ ನಡೆಸಬೇಕು ಎಂದು ಸೂಚಿಸಿದ್ದಾರೆ.

ಬೇರೆ ವಿಶ್ವವಿದ್ಯಾಲಯಗಳಿಂದ ಹಲವು ಅಧ್ಯಾಪಕರನ್ನು ಹುದ್ದೆರಹಿತವಾಗಿ ವರ್ಗಾವಣೆ ಮಾಡಲಾಗಿದೆ. ಅವರಲ್ಲಿ ಯಾರೊಬ್ಬರೂ ಪರಿಶಿಷ್ಟ ಜಾತಿ ಮತ್ತು ಪಂಗಡಗಳಿಗೆ ಸೇರಿಲ್ಲ. ವರ್ಗಾವಣೆಯಾದವರನ್ನು ಯಾವ ರೋಸ್ಟರ್ ಬಿಂದುಗಳಿಗೆ ಸೇರಿಸಲಾಗಿದೆ ಎಂಬ ಬಗ್ಗೆ ವಿಶ್ವವಿದ್ಯಾಲಯ ನಿರ್ಧರಿಸಿಲ್ಲ. ಇದು ಸರ್ಕಾರದ ಮೀಸಲಾತಿ ನೀತಿಗೆ ವಿರುದ್ಧವಾಗಿದೆ.

ಖಾಲಿ ಇರುವ 22 ಬ್ಯಾಕ್‌ಲಾಗ್ ಹುದ್ದೆಗಳನ್ನೂ ಭರ್ತಿ ಮಾಡಿಲ್ಲ. ಬಹುಸಂಖ್ಯಾತರಾಗಿರುವ ಪರಿಶಿಷ್ಟ ಸಮುದಾಯದ ಅಧ್ಯಾಪಕರ ಮಾನ್ಯತೆ ಕುಗ್ಗಿಸಲು ವಿಶ್ವವಿದ್ಯಾಲಯ ಮೀಸಲಾತಿ ವಿರೋಧಿ ನೀತಿ ಅನುಸರಿಸುತ್ತಿದೆ ಎಂದು 67 ಅಧ್ಯಾಪಕರು ದೂರು ನೀಡಿದ್ದರು.

# 'ಹಿಮಂತ ತಾನು ರಾಜ ಅಂದ್ಕೊಂಡಿದ್ದಾರೆ, ಆದರೆ ಭ್ರಷ್ಟಾಚಾರದಲ್ಲಿ ಜೈಲಿಗೆ ಹೋಗುತ್ತಾರೆ'



**ಚಾಯ್ಗಾಂವ್/ಗುವಾಹಟಿ:** ಅಸ್ಸಾಂ ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ತಮ್ಮನ್ನು ತಾವು 'ರಾಜ' ಅಂದ್ಕೊಂಡಿದ್ದರೂ, ಭ್ರಷ್ಟಾಚಾರಕ್ಕಾಗಿ ಅವರನ್ನು ಜೈಲಿಗೆ ಹಾಕಲಾಗುವುದು ಎಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಬುಧವಾರ ಹೇಳಿದ್ದಾರೆ.

ಬಿಜೆಪಿ ಮತ್ತು ಚುನಾವಣಾ ಆಯೋಗ, ಮಹಾರಾಷ್ಟ್ರ ಚುನಾವಣೆಯನ್ನು ಕಾಂಗ್ರೆಸ್ ಮತ್ತು ಅದರ ಮಿತ್ರಪಕ್ಷಗಳಿಂದ "ಕದ್ದಿದೆ" ಮತ್ತು ಬಿಹಾರದಲ್ಲಿ ಅದನ್ನು ಪುನರಾವರ್ತಿಸಲು ಪ್ರಯತ್ನಿಸುತ್ತಿದೆ ಎಂದು ಆರೋಪಿಸಿದ ರಾಹುಲ್ ಗಾಂಧಿ, ಈಶಾನ್ಯ ರಾಜ್ಯದಲ್ಲಿ ಅಂತಹ ಯಾವುದೇ ಪ್ರಯತ್ನವನ್ನು ತಡೆಯಬೇಕು ಎಂದು ಪಕ್ಷದ ಕಾರ್ಯಕರ್ತರಿಗೆ ಕರೆ ನೀಡಿದರು.

"ಮುಖ್ಯಮಂತ್ರಿ ತಮ್ಮನ್ನು ತಾವು 'ರಾಜ' ಎಂದು ಭಾವಿಸಿದ್ದಾರೆ ಮತ್ತು ದಿನದ 24 ಗಂಟೆ ನಿಮ್ಮ ಸಂಪತ್ತು, ಭೂಮಿಯನ್ನು ಅದಾನಿ ಹಾಗೂ ಅಂಬಾನಿಗೆ ಹಸ್ತಾಂತರಿಸುವಲ್ಲಿ ನಿರತರಾಗಿದ್ದಾರೆ. ಆದರೆ ಈಗ ಮುಖ್ಯಮಂತ್ರಿ ಭಯವಾಗುತ್ತಿದೆ. ಟಿವಿಯಲ್ಲಿ ಅವರ ಮುಖವನ್ನು ಹತ್ತಿರದಿಂದ ನೋಡಿ, ಭೀತ ಕಾಣಿಸುತ್ತದೆ" ಎಂದು ರಾಹುಲ್ ಗಾಂಧಿ ವಾಗ್ದಾಳಿ ನಡೆಸಿದರು.

ಗುವಾಹಟಿಯಿಂದ ಸುಮಾರು 40 ಕಿ.ಮೀ ದೂರದಲ್ಲಿರುವ ಚಾಯ್ಗಾಂವ್‌ನಲ್ಲಿ ಪಕ್ಷದ ಕಾರ್ಯಕರ್ತರನ್ನು ಉದ್ದೇಶಿಸಿ ಮಾತನಾಡಿದ ಲೋಕಸಭೆಯ ವಿರೋಧ ಪಕ್ಷದ ನಾಯಕ, "ನಿರ್ಭೀತ ಕಾಂಗ್ರೆಸ್ ಕಾರ್ಯಕರ್ತರು ತಮ್ಮನ್ನು ಜೈಲಿಗೆ ಹಾಕುತ್ತಾರೆ ಎಂದು ಹಿಮಂತ ಶರ್ಮಾ ಅವರಿಗೆ ಗೊತ್ತಿದೆ" ಎಂದರು.

ಮುಖ್ಯಮಂತ್ರಿ ಮತ್ತು ಅವರ ಕುಟುಂಬವನ್ನು ಭ್ರಷ್ಟಾಚಾರಕ್ಕೆ ಹೊಣೆಗಾರರನ್ನಾಗಿ ಮಾಡಲಾಗುವುದು. ಮಾಧ್ಯಮಗಳು ಅವರನ್ನು ಜೈಲಿಗೆ ಹಾಕುವುದನ್ನು ತೋರಿಸುತ್ತವೆ ಮತ್ತು ನರೇಂದ್ರ ಮೋದಿ ಅಥವಾ ಅಮಿತ್ ಶಾ ಕೂಡ ಅವರನ್ನು ರಕ್ಷಿಸಲು ಸಾಧ್ಯವಿಲ್ಲ ಎಂದು ರಾಹುಲ್ ಗಾಂಧಿ ಹೇಳಿದರು.

# ಕುಸುಮ್–ಬಿ ಯೋಜನೆಯಡಿ 40 ಸಾವಿರ ಪಂಪ್‌ಸೆಟ್‌ಗಳಿಗೆ ಅನುಮೋದನೆ; ತ್ವರಿತ ಅನುಷ್ಠಾನಕ್ಕೆ ಮುಖ್ಯಮಂತ್ರಿ ಸೂಚನೆ

**ಬೆಂಗಳೂರು:** ಸೌರ ಕೃಷಿ ಪಂಪ್ ಸೆಟ್ ಯೋಜನೆ ಕುಸುಮ್–ಬಿ ಅಡಿ 40 ಸಾವಿರ ಪಂಪ್ ಸೆಟ್‌ಗಳ ಅಳವಡಿಕೆಗೆ ಅನುಮೋದನೆ ನೀಡಲಾಗಿದ್ದು, ತ್ವರಿತ ಅನುಷ್ಠಾನಕ್ಕೆ ಕ್ರಮ ಕೈಗೊಳ್ಳುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಂಗಳವಾರ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಇಂದು ಕುಸುಮ್ ಬಿ ಯೋಜನೆಯ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಸಿಎಂ, ಕುಸುಮ್–ಬಿ ಯೋಜನೆ ಅನುಷ್ಠಾನವನ್ನು ತ್ವರಿತಗೊಳಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.



ಈ ಸಭೆಯಲ್ಲಿ ಇಂಧನ ಸಚಿವ ಕೆ.ಜೆ. ಜಾರ್ಜ್, ಇಲಾಖೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

ಕುಸುಮ್–ಬಿ ಪ್ರಧಾನ ಮಂತ್ರಿ ಕಿಸಾನ್ ಉರ್ಜಾ ಸುರಕ್ಷಾ ಏವಮ್ ಉತ್ಥಾನ ಮಹಾಭಿಯಾನ(ಪಿಎಂ ಕುಸುಮ್) ಯೋಜನೆಯ ಬಿ ಘಟಕವಾಗಿದ್ದು, ಇದು ನೀರಾವರಿಗಾಗಿ 14 ಲಕ್ಷ ಸ್ಟ್ಯಾಂಡ್–ಅಲೋನ್ ಸೌರ ಕೃಷಿ ಪಂಪ್‌ಸೆಟ್‌ಗಳ ಸ್ಥಾಪನೆಯ ಮೇಲೆ ಕೇಂದ್ರೀಕರಿಸುತ್ತದೆ.

ಈ ಯೋಜನೆಯಡಿಯಲ್ಲಿ, ಸೋಲಾರ್ ಕೃಷಿ ಪಂಪ್‌ಸೆಟ್ ಅಳವಡಿಸಲು ಕೇಂದ್ರ ಸರ್ಕಾರ ಶೇ.30 ರಷ್ಟು, ರಾಜ್ಯ ಸರ್ಕಾರ ಶೇ.50ರಷ್ಟು ಸಬ್ಸಿಡಿ ಒದಗಿಸುತ್ತಿದ್ದು, ಫಲಾನುಭವಿಗಳು ಶೇ. 20ರಷ್ಟು ಭರಿಸಬೇಕಿದೆ.

ಇಂದು ನಡೆದ ಸಭೆಯಲ್ಲಿ ಮುಖ್ಯಮಂತ್ರಿಗಳು, 40,000 ಪಂಪ್ ಸೆಟ್‌ಗಳ ಅಳವಡಿಕೆಗೆ ಅನುಮೋದನೆ ನೀಡಿರುವುದನ್ನು ಗಮನಿಸಿದರು ಮತ್ತು ಅವುಗಳ ಅನುಷ್ಠಾನಕ್ಕೆ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

ಈ ಯೋಜನೆಯಡಿಯಲ್ಲಿ ಹೆಚ್ಚುವರಿಯಾಗಿ 25,000 ರೈತರು ಅರ್ಜಿ ಸಲ್ಲಿಸಿದ್ದಾರೆ ಮತ್ತು ರಾಜ್ಯ ಸರ್ಕಾರವು ಇದಕ್ಕಾಗಿ

752 ಕೋಟಿ ರೂ.ಗಳನ್ನು ಖರ್ಚು ಮಾಡಲಿದೆ. ಯೋಜನೆ ಸಮರ್ಪಕ ಅನುಷ್ಠಾನಗೊಳಿಸಿದ ಬಳಿಕ ಸಬ್ಸಿಡಿ ಮೊತ್ತ ಕಡಿಮೆಯಾಗಲಿದೆ.

4.5 ಲಕ್ಷ ಅನಧಿಕೃತ ಐಪಿ ಸೆಟ್‌ಗಳ ಪೈಕಿ 2 ಲಕ್ಷ ಐಪಿ ಸೆಟ್ ಸಂಪರ್ಕ ಅಧಿಕೃತಗೊಳಿಸಲಾಗಿದೆ.

### ವಿಜಯನಗರ: ಆಶಾ ಕಾರ್ಯಕರ್ತೆಯರ ಬೃಹತ್ ಪ್ರತಿಭಟನೆ

# ಸರ್ಕಾರದ ಭರವಸೆಗಳನ್ನು ಜಾರಿಗೆ ತರಲು ಆಗ್ರಹ



**ವಿಜಯನಗರ:** ರಾಜ್ಯ ಸಂಯುಕ್ತ ಆಶಾ ಕಾರ್ಯಕರ್ತೆಯರ ಸಂಘದ ಜಿಲ್ಲಾ ಸಮಿತಿಯಿಂದ ಆಶಾ ಕಾರ್ಯಕರ್ತೆಯರ ನಾನಾ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಮಂಗಳವಾರ ಬೃಹತ್ ಪ್ರತಿಭಟನೆ ನಡೆಸಲಾಯಿತು. ಇಲ್ಲಿನ ಬಸ್ ನಿಲ್ದಾಣದಿಂದ ಹೊರಟ ಮೆರವಣಿಗೆ ಪ್ರಮುಖ ಬೀದಿಗಳಲ್ಲಿ ಸಂಚರಿಸಿ, ತಾಲೂಕು ಕಚೇರಿ ತಲುಪಿತು. ಬಳಿಕ ತಹಸೀಲ್ದಾರ್‌ಗೆ ಮನವಿ ಸಲ್ಲಿಸಿದರು.

ಮುಖ್ಯಮಂತ್ರಿಗಳು ಮಾತು ಕೊಟ್ಟಂತೆ ಎಲ್ಲ ಆಶಾ ಕಾರ್ಯಕರ್ತೆಯರಿಗೆ ಮಾಸಿಕ 10,000 ರೂ. ಖಾತ್ರಿಪಡಿಸುವ ಆದೇಶ ಹೊರಡಿಸಬೇಕು. ಪ್ರತಿ ಆಶಾಗೆ ಜನಸಂಖ್ಯೆ ಹೆಚ್ಚಿಸುವ ಹೆಸರಲ್ಲಿ, ಆಶಾಗಳನ್ನು ಮನೆಗೆ ಕಳುಹಿಸುವ ಆದೇಶ ಹಿಂಪಡೆಯಬೇಕು. ಆಶಾಗಳ ಅವೈಜ್ಞಾನಿಕ ಮೌಲ್ಯಮಾಪನ ಪ್ರಕ್ರಿಯೆ ಹಿಂಪಡೆಯಬೇಕು. ಅಂಗನವಾಡಿ, ಬಿಸಿಯೂಟ ಕಾರ್ಯಕರ್ತೆಯರಿಗೆ ಗೌರವ ಧನ ಹೆಚ್ಚಿಸಿದಂತೆ, ಎಲ್ಲ ಆಶಾ ಕಾರ್ಯಕರ್ತೆಯರಿಗೂ ಹೆಚ್ಚಿಸಬೇಕು ಎಂದು ಆಗ್ರಹಿಸಿದರು.

**ಮಾತು ತಪ್ಪಿದ ಸರಕಾರ :** ಎಐಯುಟಿಯುಸಿ ಜಿಲ್ಲಾ ಕಾರ್ಯದರ್ಶಿ ಡಾ.ಪ್ರಮೋದ್ ಮಾತನಾಡಿ ಜನವರಿಯಲ್ಲಿ ಅನಿರ್ದಿಷ್ಟಾವಧಿ ಮುಷ್ಕರದ ಸಂದರ್ಭದಲ್ಲಿ ಸಿಎಂ ಸಭೆ ಕರೆದು, ಎಲ್ಲ ಆಶಾ ಕಾರ್ಯಕರ್ತೆಯರಿಗೆ 10 ಸಾವಿರ ರೂ. ಖಾತ್ರಿ ಪಡಿಸಿ, ಏಪ್ರಿಲ್‌ನಿಂದ ಜಾರಿ ಮಾಡಲಾಗುವುದು. ಹೆಚ್ಚು ಕೆಲಸ ಮಾಡಿದವರಿಗೆ ಹೆಚ್ಚುವರಿ ಗೌರವ ಧನ ನೀಡಲಾಗುವುದು ಎಂದು ಘೋಷಿಸಿದ್ದರು.

ಈ ಸಭೆಯಲ್ಲಿ ಆರೋಗ್ಯ ಸಚಿವರು, ಹಿರಿಯ ಅಧಿಕಾರಿಗಳಿದ್ದರು. ಇದಾದ ನಂತರ ಸಿಎಂ ಹಾಗೂ ಸಚಿವರು, ಮಾಧ್ಯಮಗಳ ಮುಂದೆ ಅಧಿಕೃತವಾಗಿ ಘೋಷಣೆ ಮಾಡಿದ್ದರು. ಆದರೆ, ಇಲ್ಲಿಯವರೆಗೆ ಸರಕಾರ ಈ ಕುರಿತು ಆದೇಶ ಹೊರಡಿಸಿಲ್ಲ. ಮುಖ್ಯಮಂತ್ರಿಗಳು ಕೊಟ್ಟ ಮಾತು ಉಳಿಸಿಕೊಂಡಿಲ್ಲ ಎಂದು ಆರೋಪಿಸಿದರು.

ಸಂಘದ ಜಿಲ್ಲಾ ಕಾರ್ಯದರ್ಶಿ ಕೆ.ಎಸ್.ಗೌರಮ್ಮ ಮಾತನಾಡಿ 10–15 ವರ್ಷಗಳಿಂದ ಹಗಲು–ರಾತ್ರಿ ಗರ್ಭಿಣಿಯರ ಹಾಗೂ ಶಿಶುಗಳ ಆರೋಗ್ಯಕ್ಕಾಗಿ, ಸಮಾಜದ ಆರೋಗ್ಯಕ್ಕಾಗಿ ಕಷ್ಟಪಡುತ್ತಿರುವ ಆಶಾಗಳನ್ನು ಸರಕಾರ ಅತ್ಯಂತ ಅಗೌರವದಿಂದ ಕಾಣುತ್ತಿದೆ ಎಂದು ದೂರಿದರು.

ಜಿಲ್ಲಾಧ್ಯಕ್ಷೆ ಪಿ.ಎ.ಗೀತಾ ಮಾತನಾಡಿ ಕೋವಿಡ್ ಸಂದರ್ಭದಲ್ಲಿ ತಮ್ಮ ಜೀವ ಪಣಕ್ಕಿಟ್ಟು ದುಡಿದ ಹಲವಾರು ಆಶಾಗಳನ್ನು ಯಾವುದೇ ಮುಲಾಜಿಲ್ಲದೆ ಸರಕಾರ ಮನೆಗೆ ಕಳುಹಿಸಲು ಹೊರಟಿದೆ.

ಸರಕಾರ ಹಾಗೂ ಆರೋಗ್ಯ ಇಲಾಖೆಯ ಇಂತಹ ಕ್ರಮಗಳ ವಿರುದ್ಧ ಆಶಾಗಳು ಬೃಹತ್ ಸಂಖ್ಯೆಯ ಧ್ವನಿ ಎತ್ತಬೇಕು. ಮುಂದಿನ ದಿನಗಳಲ್ಲಿ ಮತ್ತೆ ಉಗ್ರ ಹೋರಾಟಕ್ಕೆ ತಯಾರಾಬೇಕು ಎಂದು ಕರೆ ನೀಡಿದರು.

# ಕಾಂಗ್ರೆಸ್ ನಾಯಕರಿಗೆ ಅಭಿವೃದ್ಧಿ ಚಿಂತೆ ಇಲ್ಲ, ಕುರ್ಚಿ ಚಿಂತೆ: ನಿಖಿಲ್



**ಇಂಡಿ:** ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಕುರ್ಚಿ ಉಳಿಸಿಕೊಳ್ಳುವ ಚಿಂತೆ, ಉಪಮುಖ್ಯ ಮಂತ್ರಿಗಳಿಗೆ ಮುಖ್ಯಮಂತ್ರಿಯಾಗುವ ಚಿಂತೆ ಸದಾ ದಿಲ್ಲಿ ಓಡಾಟ ಇದು ಸಾಧನೆಯೇ ? ಈ ರಾಜ್ಯದ ಬಡವರ, ರೈತರ, ಸಾಮಾನ್ಯ ಜನತೆಯ ಚಿಂತೆ ಇಲ್ಲದಾಗಿದೆ. ತಮ್ಮ ಚಿಂತೆಯಲ್ಲಿಯೇ ಕಾಂಗ್ರೆಸ್ ದಿನ ಕಳೆಯುತ್ತಿದೆ ಎಂದು ಜೆಡಿಎಸ್ ಯುವ ಘಟಕದ ರಾಜ್ಯ ಅಧ್ಯಕ್ಷ ನಿಖಿಲ ಕುಮಾರಸ್ವಾಮಿ ಕಾಂಗ್ರೆಸ್ ನಾಯಕರ ವಿರುದ್ಧ ಕಿಡಿಕಾರಿದರು.

ಪಟ್ಟಣದಲ್ಲಿ ಜೆ.ಡಿ.ಎಸ್ ಸದಸ್ಯತ್ವ ಅಭಿಯಾನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ಕಿತ್ತೂರ ಕರ್ನಾಟಕದ ವಿಜಯಪೂರ ಜಿಲ್ಲೆಯಲ್ಲಿ ನಾನು ಹಾಸನ, ಮಂಡ್ಯ, ಮೈಸೂರು ಸುಭದ್ರವಿದ್ದಂತೆ, ಮುಂಬರುವ ವಿಧಾನ ಸಭಾ ಚುನಾವಣೆಯಲ್ಲಿ ಹೆಚ್ಚು ಸ್ಥಾನ ಗಳಿಸುತ್ತೇವೆ ಎಂಬ ಆತ್ಮವಿಶ್ವಾಸ ನನಗಿದೆ. ಇಂತಹ ಜನಸಮುದಾಯ ಕಂಡಾಗ ಸಂತಸ ತಂದಿದೆ. ಹಳೆ ಮೈಸೂರಿನಂತೆ ಅಭಿವೃದ್ಧಿಯ ವೇಗ ಈ ಕಲ್ಯಾಣದ ಕರ್ನಾಟಕ ಭಾಗದಲ್ಲಿ ನಡೆದಿಲ್ಲ. ನೀವು ಕಾರ್ಯಕರ್ತರು ಸದಾ ಪಕ್ಷ ಕಟ್ಟುವಲ್ಲಿ ನಿರತರಾಗಿ ಮುಂಬರುವ ಚುನಾವಣೆಯಲ್ಲಿ ನಿಮ್ಮ ಶಕ್ತಿ ಸಾಮರ್ಥ್ಯದಿಂದ ಜಿಲ್ಲೆಯಲ್ಲಿ 4 ಜನತಾದಳ ಶಾಸಕರು ಗೆಲ್ಲಲ್ಲಿದ್ದಾರೆ. ಸಭೆ ಸಮಾರಂಭಗಳು ಮುಂಬರುವ ದಿನಗಳಲ್ಲಿ ಸಾಕಷ್ಟು ಮೋಡೋಣ ಪಕ್ಷವೇ ಜೀವಾಳ. ಬಿ.ಡಿ ಪಾಟೀಲರ ಪರವಾಗಿ ನಾವಿದ್ದೇವೆ ಎಂಬ ಸಂದೇಶ ನೀಡಿರುವ ನಿಮಗೆ ಸದಾ ನಿಮಗೆ ಕೈ ಬಿಡುವುದಿಲ್ಲ. ಬಿ.ಡಿ ಪಾಟೀಲ ಮುಂಬರುವ ದಿನಗಳಲ್ಲಿ ಅವರಿಗೆ ಎಲ್ಲಾ ವಿಧದ ಸಹಾಯ ಸಹಕಾರ ನೀಡಿ ಗೆಲ್ಲಿಸುತ್ತೇವೆ. ಬಿ.ಡಿ ಅಭಿಮಾನಿಗಳು ಅವರ ಬಗ್ಗೆ ಅನುಮಾನ ಬೇಡ ಬಿ.ಡಿ ಪಾಟೀಲ ಹಣಕಾಸಿನಿಂದ ಶ್ರೀಮಂತರಲ್ಲ ಹೃದಯದಿಂದ ಶ್ರೀಮಂತರು ,ಪ್ರಜಾಪ್ರಭುಇತ್ವ ವ್ಯವಸ್ಥೆಯಲ್ಲಿ ಜನರು ತೀರ್ಮಾನ ಮಾಡಿದರೆ ಎಂತ ಗಟಾನುಗಟ್ಟಿ ನಾಯಕರು ಸೋತ್ತಿರುವುದು ಇತಿಹಾಸ, ಧೃತೀಗೆಡಬೇಡಿ ನಿಮ್ಮ ಪ್ರಮಾಣಿಕತೆ ನಿಷ್ಠೇ ಜನರು ಗುರುತಿಸುವಂತಹ ದಿನಗಳು ಸನ್ನಿಹಿತವಾಗಿದೆ.

# ಮಾದಕ ವಸ್ತು : ಜಿಲ್ಲೆಯಲ್ಲಿ ವಿಶೇಷ ಕಾರ್ಯಾಚರಣೆ

**ದಾವಣಗೆರೆ :** ನಗರದಲ್ಲಿ ಮಾದಕ ವಸ್ತು ಮಾರಾಟದ ವಿರುದ್ಧ ಕಳೆದೊಂದು ವಾರದಿಂದ ವಿಶೇಷ ಕಾರ್ಯಾಚರಣೆ ನಡೆಸುತ್ತಿರುವ ಪೊಲೀಸರು, ಈಗಾಗಲೇ ಕೆಲವು ಪ್ರಕರಣಗಳನ್ನು ಭೇದಿಸಿ, ಆರೋಪಿಗಳನ್ನು ಬಂಧಿಸಿದ್ದಾರೆ.



ಈ ಕುರಿತು ಪತ್ರಕರ್ತರಿಗೆ ಮಾಹಿತಿ ನೀಡಿದ ಎಸ್ಪಿ ಉಮಾ ಪ್ರಶಾಂತ್, ಮುಖ್ಯವಾಗಿ ಗಾಂಧಿ ನಗರ, ಆಜಾದ್ ನಗರ, ಆರ್‌ಎಂಸಿ ಯಾರ್ಡ್, ಕೆಟಿಜೆ ನಗರ ಮತ್ತು ವಿದ್ಯಾನಗರದಂತಹ ಪ್ರದೇಶಗಳಲ್ಲಿ ನಿರ್ದಿಷ್ಟ ಮಾಹಿತಿಗಳ ಆಧಾರದ ಮೇಲೆ ದಾಳಿ ನಡೆಸಲಾಗಿದೆ ಎಂದರು. ರಾಮ್ ಅಂಡ್ ಕೋ ವೃತ್ತದಲ್ಲಿನ ಪಾನ್ ಶಾಪ್ ಮೇಲೆ ದಾಳಿ ಚಾಕೊಲೇಟ್ ರೂಪದಲ್ಲಿ ಮಾದಕ ವಸ್ತು ಮಾರಾಟ ಮಾಡುತ್ತಿದ್ದ ಪ್ರಕರಣವನ್ನು ಭೇದಿಸಲಾಗಿದೆ. ಇಲ್ಲಿ 1 ಕೆಜಿ 165 ಗ್ರಾಂ ಗಾಂಜಾ ಮತ್ತು 168 'ಬಾಂಗ್' ಚಾಕೊಲೇಟ್‌ಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಹೇಳಿದರು. ಪಾನ್ ಶಾಪ್ ಮಾಲೀಕ ರಾಜು, ಉತ್ತರ ಪ್ರದೇಶದ ಅಲಹಾಬಾದ್ ಮೂಲದವನಾಗಿದ್ದು, ಕಲೆದ ನಾಲ್ಕು ವರ್ಷಗಳಿಂದ ಪತ್ನಿ ಮತ್ತು ಮಗನೊಂದಿಗೆ ದಾವಣಗೆರೆಯಲ್ಲಿ ವಾಸವಾಗಿದ್ದ. ಈ ತನ್ನ ಪಾನ್ ಶಾಪ್‌ನಲ್ಲಿ 'ಭೋಲೆ ಚಾಕೊಲೇಟ್' ಎಂದು ಕರೆಯುವ ಈ ಚಾಕೊಲೇಟ್‌ಗಳನ್ನು ಉತ್ತರ ಪ್ರದೇಶದ ಭಾಗದಿಂದಲೇ ತಂದು ಮಾರಾಟ ಮಾಡುತ್ತಿದ್ದ ಎಂದರು.

ಮೂಲತಃ 1–2 ರೂಪಾಯಿಗೆ ಸಿಗುವ ಈ ಚಾಕೊಲೇಟ್‌ಗಳನ್ನು ಪಾನ್ ಶಾಪ್ ಮಾಲೀಕ 50–60 ರೂಪಾಯಿಗೆ ಮಾರಾಟ ಮಾಡುತ್ತಿದ್ದ. ಹಾಲು ಅಥವಾ ಜ್ಯೂಸ್‌ಗಳಲ್ಲಿ ಮಿಶ್ರಣ ಮಾಡಿ ಅಥವಾ ನೇರವಾಗಿ ಈ ಚಾಕೊಲೇಟ್‌ಗಳನ್ನು ಸೇವಿಸಲಾಗುತ್ತಿತ್ತು ಎಂದು ತಿಳಿದುಬಂದಿದೆ ಎಂದರು.

ಅಲ್ಲದೆ, ಪಾನ್ ಶಾಪ್ ಮಾಲೀಕ ತನ್ನ ಕಾನೂನು ಸಂಘರ್ಷಕ್ಕೊಳಗಾದ ಮಗನನ್ನೂ ಮಾದಕ ವಸ್ತು ಮಾರಾಟಕ್ಕೆ ಬಳಸಿಕೊಂಡಿರುವುದು ತನಿಖೆಯಿಂದ ಬಯಲಾಗಿದೆ. ಆತನ ಪಾನ್ ಶಾಪ್‌ನಲ್ಲಿ ಗಾಂಜಾ ಕೂಡ ದೊರೆತಿದ್ದು, ಪಾನ್‌ಗೆ ಗಾಂಜಾ ಮಿಶ್ರಣ ಮಾಡಿ ಮಾರಾಟ ಮಾಡುತ್ತಿದ್ದ ಎಂದು ತಿಳಿದುಬಂದಿದೆ. ಪ್ರಸ್ತುತ, ಆರೋಪಿ ನ್ಯಾಯಾಂಗ ಬಂಧನದಲ್ಲಿದ್ದಾನೆ ಮತ್ತು ಪ್ರಕರಣ ದಾಖಲಿಸಲಾಗಿದೆ ಎಂದರು.

ಪೊಲೀಸರ ವಿಶೇಷ ಕಾರ್ಯಾಚರಣೆಯ ಭಾಗವಾಗಿ, ಕಳೆದ ಒಂದು ವಾರದಲ್ಲಿ 80 ಡ್ರಗ್ ಟೆಸ್ಟಿಂಗ್‌ಗಳನ್ನು ನಡೆಸಲಾಗಿದ್ದು, 32 ಪಾಸಿಟಿವ್ ಪ್ರಕರಣಗಳು ದಾಖಲಾಗಿವೆ. ಗಾಂಜಾ ಸೇವಿಸುತ್ತಿದ್ದ ವಿದ್ಯಾರ್ಥಿಗಳು ಮತ್ತು ಅವರ ಪೋಷಕರನ್ನು ಕರೆದು ಕೌನ್ಸಿಲಿಂಗ್ ನೀಡಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಎಸ್ಪಿ ಉಮಾ ಪ್ರಶಾಂತ್ ತಿಳಿಸಿದ್ದಾರೆ.

**ಓರ್ವನ ಬಂಧನ, 2.3 ಲಕ್ಷ ರೂ. ಮೌಲ್ಯದ ಗಾಂಜಾ ವಶ :** ಅಕ್ರಮ ಗಾಂಜಾ ಮಾರಾಟ, ಸಾಗಾಟ ಮತ್ತು ಸಂಗ್ರಹವನ್ನು ತಡೆಗಟ್ಟಲು ರಚಿಸಲಾದ ವಿಶೇಷ ತಂಡವು ಮಹತ್ವದ ಕಾರ್ಯಾಚರಣೆ ನಡೆಸಿದೆ.

ಜುಲೈ 11 ರಂದು, ವಿದ್ಯಾನಗರ ಪೊಲೀಸ್ ಠಾಣಾ ವ್ಯಾಪ್ತಿಯ ಎಸ್.ಎಸ್.ಹೈಟೆಕ್ ಆಸ್ಪತ್ರೆಯ ಬಳಿಯ ಗಾಂಧಿ ಭವನದ ಸಮೀಪ ಸಾರ್ವಜನಿಕ ರಸ್ತೆಯಲ್ಲಿ ಅಕ್ರಮವಾಗಿ ಗಾಂಜಾ ಮಾರಾಟ ಮಾಡುತ್ತಿದ್ದ, ನಿಟುವಳ್ಳಿ ಚಿಕ್ಕನಹಳ್ಳಿ ಬಡಾವಣೆಯ ವಿಕಾಸ್ ಎಸ್ @ ವಿಕ್ಕಿ (24) ಎಂಬಾತನನ್ನು ದಾವಣಗೆರೆ ಮಾದಕ ದ್ರವ್ಯ ನಿಗ್ರಹ ಪಡೆ ಮತ್ತು ವಿದ್ಯಾನಗರ ಪಿಎಸ್ಐ ನಾಗರಾಜ್ ನೇತೃತ್ವದ ತಂಡ ಬಂಧಿಸಿದೆ. ಈ ವೇಳೆ ಆತನಿಂದ 1165 ಗ್ರಾಂ ಗಾಂಜಾ ವಶಪಡಿಸಿಕೊಳ್ಳಲಾಗಿದೆ.

ಕಳೆದ ಒಂದು ವಾರದಲ್ಲಿ, ದಾವಣಗೆರೆಯಲ್ಲಿ ಎರಡು ಅಕ್ರಮ ಗಾಂಜಾ ಮಾರಾಟ ಪ್ರಕರಣಗಳು ದಾಖಲಾಗಿದ್ದು, ಅಂದಾಜು 2.30 ಲಕ್ಷ ಮೌಲ್ಯದ ಒಟ್ಟು 2 ಕೆಜಿ 300 ಗ್ರಾಂ ಗಾಂಜಾವನ್ನು ವಶಪಡಿಸಿಕೊಳ್ಳಲಾಗಿದೆ. ಅಲ್ಲದೆ, ಗಾಂಜಾ ಸೇವನೆ ಮಾಡಿದ 11 ಜನರ ವಿರುದ್ಧವೂ ವಿವಿಧ ಪೊಲೀಸ್ ಠಾಣೆಗಳಲ್ಲಿ ಪ್ರಕರಣ ದಾಖಲಿಸಲಾಗಿದೆ. ಈ ಕಾರ್ಯಾಚರಣೆಯಲ್ಲಿ ಪಿಎಸ್ಐ ಸಾಗರ ಅತ್ತರವಾಲ್, ಪ್ರಕಾಶ ಹೆಚ್, ಮಂಜಪ್ಪ ಎಮ್, ಶಣ್ಮುಖ ಕೆ, ಶಿವರಾಜ್ ಎಮ್ ಎಸ್, ಮತ್ತು ಗೋವಿಂದ ರಾಜ್ ಇದ್ದರು.

### ರೈತರಿಗೆ ಗುಡ್‌ನ್ಯೂಸ್

# ಹೇಮಾವತಿ ಜಲಾಶಯದಿಂದ ಎಡ, ಬಲದಂಡೆಗೆ ನೀರು ಬಿಡುಗಡೆ ಆರಂಭ

**ಹಾಸನ:** ಖಾರೀಫ್ ಬೆಳೆಗಳಿಗೆ ಹೇಮಾವತಿ ಜಲಾಶಯದ ಎಡದಂಡೆ ಹಾಗೂ ಬಲದಂಡೆ ನಾಲೆಗಳಲ್ಲಿ ಜುಲೈ 16 ರಿಂದ ನವೆಂಬರ್ 30 ರವರೆಗೆ ನೀರು ಹರಿಸಲಾಗುತ್ತಿದೆ ಎಂದು ಗೊರೂರು ಹೇಮಾವತಿ ಯೋಜನಾ ವೃತ್ತದ ಸದಸ್ಯ ಕಾರ್ಯದರ್ಶಿ ಮತ್ತು ಹೇಮಾವತಿ ಜಲಾಶಯ ಯೋಜನೆ ಹಾಗೂ ಸೂಪರಿಂಟೆಂಡೆಂಟ್ ಎಂಜಿನಿಯರ್ ತಿಳಿಸಿದ್ದಾರೆ.

ಹೇಮಾವತಿ ಜಲಾನಯನ ಪ್ರದೇಶದಲ್ಲಿ ಬಿದ್ದ ಉತ್ತಮ ಮಳೆಯಿಂದಾಗಿ ಜಲಾಶಯವು ತುಂಬಿರುವ ಹಿನ್ನೆಲೆ ಜುಲೈ 15 ರಂದು ಉಸ್ತುವಾರಿ ಸಚಿವ ಕೆ.ಎನ್ ರಾಜಣ್ಣ ಹಾಗೂ ಹೇಮಾವತಿ ಜಲಾಶಯ ಯೋಜನೆಯ ನೀರಾವರಿ ಸಲಹಾ ಸಮಿತಿ ಅಧ್ಯಕ್ಷರ ಅಧ್ಯಕ್ಷತೆಯಲ್ಲಿನಡೆದ ಹೇಮಾವತಿ ಜಲಾಶಯ ಯೋಜನೆಯ ನೀರಾವರಿ ಸಲಹಾ ಸಮಿತಿ ಸಭೆಯಲ್ಲಿ ಕೈಗೊಂಡ ತೀರ್ಮಾನದಂತೆ ಜಲಾಶಯದಿಂದ ಬೆಳೆಗೆ ನೀರು ಹರಿಸಲು ತೀರ್ಮಾನಿಸಲಾಗಿದೆ ಎಂದು ಜಲಾಶಯ ಯೋಜನೆಯ ನೀರಾವರಿ ಸಲಹಾ ಸಮಿತಿ ತಿಳಿಸಿದೆ.



ಹೇಮಾವತಿ ಬಲಮೇಲ್ದಂಡೆ ನಾಲೆ ಪ್ರಾರಂಭದಿಂದ 97ನೇ ಕಿ.ಮೀ.ವರೆಗೆ ನೀರು

ಹೇಮಾವತಿ ಎಡದಂಡೆ ನಾಲೆ ಪ್ರಾರಂಭದಿಂದ 212ನೇ ಕಿ ಮೀವರೆಗೆ 1 ರಿಂದ 72 ರ ವರೆಗೆ ವಿತರಣಾ ನಾಲಾ, ಅರೆಖುಷ್ಕಿ 78915 ಒಟ್ಟು 78915 ಹೇಮಾವತಿ ಬಲದಂಡೆ ನಾಲೆ ಪ್ರಾರಂಭದಿಂದ 91 ನೇ ಕಿ.ಮೀ.ವರೆಗೆ 1 ರಿಂದ 57ರ ವರೆಗೆ ವಿತರಣಾ ನಾಲಾ,ಭತ್ತ 2833, ಅರೆಖುಷ್ಕಿ 5261 ಒಟ್ಟು 8094, ಪ್ರದೇಶಕ್ಕೆ ನೀರು ಬಿಡಲಾಗುವುದು.

ಹೇಮಾವತಿ ಬಲಮೇಲ್ದಂಡೆ ನಾಲೆ ಪ್ರಾರಂಭದಿಂದ 97ನೇ ಕಿ.ಮೀ.ವರೆಗೆ, 1 ರಿಂದ 41 ರ ವರೆಗೆ ವಿತರಣಾ ನಾಲಾ,ಭತ್ತ 2428, ಅರೆಖುಷ್ಕಿ 20234 ಒಟ್ಟು 22,662 ಹೆಕ್ಟೇರ್‌ಗೆ ನೀರು ಹರಿಸಲಾಗುವುದು.

ಚಂಗರವಳ್ಳಿ ಕಾಲುವೆ ಭತ್ತ 328 ಹೆಕ್ಟೇರ್, ಶ್ರೀರಾಮದೇವರ ದಕ್ಷಿಣ ನಾಲೆ ಭತ್ತ 892, ಶ್ರೀರಾಮದೇವರ ಉತ್ತರ ನಾಲೆಭತ್ತ 3830, ಹೇಮಗಿರಿ ನಾಲೆ ಭತ್ತ 1609, ಅಕ್ಕಿಹೆಬ್ಬಾಳು ನಾಲೆ ಭತ್ತ 150, ಮಂದಗೆರೆ ಎಡದಂಡೆ ನಾಲೆಭತ್ತ 1938, ಮಂದಗೆರೆ ಬಲದಂಡೆ ನಾಲೆಭತ್ತ 4706 ಒಟ್ಟುಭತ್ತ 13453 ಹೆಕ್ಟೇರ್‌ಗೆ ನಾಲೆ ಮೂಲಕ ನೀರು ಬಿಡುವ ಅವಧಿ ಜುಲೈ 16 ರಿಂದ ನವೆಂಬರ್ 30 ರವರೆಗೆ ಆಗಿದೆ ಎಂದು ತಿಳಿಸಲಾಗಿದೆ.

ಹೇಮಾವತಿ ಜಲಾಶಯದಲ್ಲಿಇರುವ ನೀರಿನ ಶೇಖರಣೆ ಮತ್ತು ಮಳೆಯನ್ನು ಆಧರಿಸಿ, ಜಲಾಶಯಕ್ಕೆ ಹರಿದು ಬರಬಹುದಾದ ಪರಿಮಾಣವನ್ನು ಅಂದಾಜು ಮಾಡಲಾಗಿದ್ದು, ಇಂತಹ ನಿಯಂತ್ರಣ ಪ್ರಾಕೃತಿಕ ಅಥವಾ ನೈಸರ್ಗಿಕ ವ್ಯತ್ಯಾಸದಿಂದ ನೀರಿನ ಕೊರತೆ ಉಂಟಾಗಿ ಬೆಳೆ ನಷ್ಟವಾದಲ್ಲಿಇಲಾಖೆ ಜವಾಬ್ದಾರಿಯಲ್ಲ ಹಾಗೂ ರೈತರಿಗೆ ಇದ–ರಿಂದ ಯಾವುದೇ ಪರಿಹಾರ ಕೇಳುವ ಹಕ್ಕು ಇರುವುದಿಲ್ಲ,"ಎಂದು ತಿಳಿಸಲಾಗಿದೆ.

**ರೈತರು ನಿಗದಿತ ಬೆಳೆಯನ್ನೇ ಬೆಳೆಯತಕ್ಕದ್ದು :** ರೈತರು ಪ್ರಕಟಣೆಗೆ ಅನುಸಾರವಾಗಿ ನಿಗದಿತ ಬೆಳೆಯನ್ನೇ ಬೆಳೆಯತಕ್ಕದ್ದು, ವಿರುದ್ಧವಾಗಿ ಬೇರೆ ಬೆಳೆ ಬೆಳೆದಲ್ಲಿಕರ್ನಾಟಕ ನೀರಾವರಿ ಕಾಯಿದೆಯ ಹಾಗೂ ಚಾಲ್ತಿಯಲ್ಲಿರುವ ನಿಯಮಾವಳಿಗಳ ಪ್ರಕಾರ ದಂಡವನ್ನು ವಿಧಿಸಲಾಗುವುದು ಹಾಗೂ ಆಗಬಹುದಾದ ನೀರಿನ ಕೊರತೆ ಮತ್ತು ಬೆಳೆ ನಷ್ಟಕ್ಕೆ ರೈತ–ರೇ ಜವಾಬ್ದಾರಾಗಿರುತ್ತಾರೆ ಎಂದು ಎಚ್ಚರಿಕೆ ನೀಡಿದೆ.

# ನಾಗರಪಂಚಮಿ ಶ್ರಾವಣ ಮಾಸದಲ್ಲಿ ಬರುವ ಮೊದಲನೇ ಹಬ್ಬ

ನಾಗರಪಂಚಮಿ ಹಬ್ಬಗಳ ತಿಂಗಳಾಗಿರುವ ಶ್ರಾವಣಮಾಸದಲ್ಲಿ ಬರುವ ಮೊದಲನೇ ಹಬ್ಬ. ನಾಗರಪಂಚಮಿಯನ್ನು ಶ್ರಾವಣ ಶುಕ್ಲ ಪಂಚಮಿಯಂದು (2025 ರಲ್ಲಿ ಜುಲೈ 29, ಮಂಗಳವಾರ) ಆಚರಿಸಲಾಗುತ್ತದೆ. ಈ ದಿನದಂದು ಸ್ತ್ರೀಯರು ಸಹೋದರನ ಹೆಸರಿನಲ್ಲಿ ಉಪವಾಸ ಮಾಡುತ್ತಾರೆ, ಹೊಸ ಬಟ್ಟೆ–ಅಲಂಕಾರವನ್ನು ಧರಿಸಿ, ನಾಗ ದೇವರನ್ನು ಪೂಜಿಸಿ, ನಾಗ ದೇವರಿಗೆ ಹಾಲಿನ ನೈವೇದ್ಯವನ್ನು ಅರ್ಪಿಸುತ್ತಾರೆ. ನಾಗಗಳ ಪೂಜೆಯನ್ನು ಮಾಡುವುದರಿಂದ ಸರ್ಪಭಯ ಉಳಿಯುವುದಿಲ್ಲ ಮತ್ತು ವಿಷಬಾಧೆಯಾಗುವ ಸಂಕಟ ತಪ್ಪುತ್ತದೆ ಎಂದು ಭಕ್ತರ ಬಲವಾದ ನಂಬಿಕೆಯಿದೆ. ನಾಗರಪಂಚಮಿಯ ಇತಿಹಾಸ, ಅಂದು ಏನು ಮಾಡಬೇಕು, ಏನು ಮಾಡಬಾರದು, ಇವೆಲ್ಲವುಗಳ ಹಿಂದಿರುವ ಶಾಸ್ತ್ರ ಇಲ್ಲಿ ನೀಡುತ್ತಿದ್ದೇವೆ.

ನಾಗರಪಂಚಮಿ ಇವನ್ನು ಮಾಡಿ

**ಉಪವಾಸ ಮಾಡಿ**

ಉಪವಾಸದಿಂದ ಶಕ್ತಿ ಹೆಚ್ಚಾಗಿ ಅದರ ಫಲವೂ ಲಭಿಸುತ್ತದೆ.ಶ್ರೀಕೃಷ್ಣ (ಕು. ಮೇಘಾ ನಕಾತೆ ಇವರ ಮಾಧ್ಯಮದಿಂದ), 2.8.2005, ಮಧ್ಯಾಹ್ನ 4.05

ನಾಗ ದೇವರಿಗೆ ಪೂಜೆ ಸಲ್ಲಿಸಿ

ನಾ ಗ ರ ಪ ಂ ಚ ಮಿ ಂ ಂ ಂ ದ ು ನಾಗಗಳಿಗೆ ಪೂಜೆ ಸಲ್ಲಿಸುವುದು ಎಂದರೆ ನಾಗದೇವತೆಯನ್ನು ಪ್ರಸನ್ನಗೊಳಿಸುವುದು. ನಾಗಗಳ ಪೂಜೆ ಅಂದರೆ ಸಗುಣ ರೂಪದಲ್ಲಿರುವ ಶಿವನ ಪೂಜೆಯೇ. ಆದುದರಿಂದ ಆ ದಿನ ವಾತಾವರಣದಲ್ಲಿರುವ ಶಿವ–ಲಹರಿಗಳು ಆಕರ್ಶಿತಗೊಂಡು ಆ ಜೀವಕ್ಕೆ ಇತರ 364 ದಿನಗಳ ಕಾಲ ಉಪಯುಕ್ತವಾಗುತ್ತವೆ.

ಸ್ತ್ರೀಯರು ನಾಗ ದೇವರಿಗೆ ಪೂಜೆ ಸಲ್ಲಿಸುವುದರಿಂದ ಅವರಿಗೆ ಶಕ್ತಿ ತತ್ತ್ವ ಪ್ರಾಪ್ತವಾಗುತ್ತದೆ.

ಸ್ತ್ರೀಯರು ನಾಗ ಪ್ರತಿಮೆಯನ್ನು ಸಹೋದರನೆಂದು ಪೂಜಿಸಿ

ಸ್ತ್ರೀಯರು ನಾಗ ದೇವರಿಗೆ ಪೂಜೆ ಸಲ್ಲಿಸುವುದರಿಂದ ಅವರ ಸಹೋದರನ ಆಯುಷ್ಯ ವೃದ್ಧಿಯಾಗುತ್ತದೆ.

ಹೊಸ ಬಟ್ಟೆ ಮತ್ತು ಅಲಂಕಾರ ಧರಿಸಿ

ಇದರಿಂದ ಆನಂದ ಮತ್ತು ಚೈತನ್ಯದ ಲಹರಿಗಳು ಆಕರ್ಷಿಸಲ್ಪಡುತ್ತವೆ.

ಸ್ತ್ರೀಯರು ಉಯ್ಯಾಲೆಯಲ್ಲಿ ಆಡಬೇಕು

ಇದರಿಂದ ಕ್ಷಾತ್ರಭಾವ ಮತ್ತು ಭಕ್ತಿಭಾವ ಹೆಚ್ಚಾಗಿ ಅದರಿಂದ ಸಾತ್ತ್ವಿಕತೆಯ ಲಹರಿಗಳು ಲಭಿಸುತ್ತವೆ.


ಪ್ರಾರ್ಥನೆ ಮಾಡಿ

ಈ ದಿನದಂದು ಶೇಷನಾಗ ಮತ್ತು ಶ್ರೀವಿಷ್ಣುವಿಗೆ ಮುಂದಿನಂತೆ ಪ್ರಾರ್ಥನೆ ಮಾಡಬೇಕು 'ತಮ್ಮ ಕೃಪೆಯಿಂದ ಈ ದಿನದಂದು ಶಿವ ಲೋಕದಿಂದ ಪ್ರಕ್ಷೇಪಿತವಾಗುವ ಲಹರಿಗಳು ನನ್ನಿಂದ ಹೆಚ್ಚೆಚ್ಚು ಗ್ರಹಿಸುವಂತಾಗಲಿ. ನನ್ನ ಆಧ್ಯಾತ್ಮಿಕ ಪ್ರಗತಿಗೆ ಎದುರಾಗುವ ಎಲ್ಲ ಅಡಚಣೆಗಳೂ ನಾಶವಾಗಲಿ. ದೇವತೆಗಳ ಶಕ್ತಿಯು ನನ್ನ ಪಂಚಪ್ರಾಣಗಳಲ್ಲಿ ಸಂಗ್ರಹವಾಗಿ ಅದು ಈಶ್ವರ ಪ್ರಾಪ್ತಿಗಾಗಿ ಮತ್ತು ರಾಷ್ಟ್ರ ರಕ್ಷಣೆಗಾಗಿ ಉಪಯೋಗವಾಗಲಿ. ನನ್ನ ಪಂಚಪ್ರಾಣಗಳ ಶುದ್ಧಿಯಾಗಲಿ.'

ನಾಗರ ಪಂಚಮಿಯಂದು ಸಹೋದರಿಯ ಮೊರೆಯು ಈಶ್ವರನು ಆಲಿಸುತ್ತಾನೆ. ಆದುದರಿಂದ ಸಹೋದರಿಯು ತನ್ನ ಸಹೋದರನ ಉನ್ನತಿಗಾಗಿ ದೇವರಲ್ಲಿ ಕಳಕಳಿಯಿಂದ ಮುಂದಿನಂತೆ ಪ್ರಾರ್ಥಿಸಬೇಕು 'ದೇವರೇ, ನನ್ನ ಸಹೋದರನಿಗೆ ಸದ್ಬುದ್ಧಿ, ಶಕ್ತಿ ಮತ್ತು ಸಾಮರ್ಥ್ಯವನ್ನು ದಯಪಾಲಿಸಿ.

## ನಾಗರಪಂಚಮಿ ಪೂಜೆಯ ವಿಧಿ

ಮನೆಯಲ್ಲಿ ಸ್ವಚ್ಛವಾದ ಮರದ ಮಣೆಯ ಮೇಲೆ ಗಂಧ, ಅರಿಶಿಣ ಮತ್ತು ಕುಂಕುಮ ಇವುಗಳ ಮಿಶ್ರಣದಿಂದ ಐದು ಹೆಡೆಗಳ



ನಾಗನನ್ನು ಬಿಡಿಸಬೇಕು ಅಥವಾ ರಕ್ತಚಂದನದಿಂದ ಒಂಬತ್ತು ನಾಗಗಳ ಆಕೃತಿಯನ್ನು ಬಿಡಿಸಬೇಕು. ಕೆಲವು ಸ್ಥಳಗಳಲ್ಲಿ ಮಣ್ಣಿನ ನಾಗವನ್ನು ಸಹ ತಯಾರಿಸಿ ಅದರ ಪೂಜೆಯನ್ನು ಮಾಡುತ್ತಾರೆ. ಕರಾವಳಿ ಭಾಗದಲ್ಲಿ ನಾಗದೇವರ ಕಲ್ಲಿನ ವಿಗ್ರಹಗಳಿಗೆ ಪೂಜೆಯನ್ನು ಸಲ್ಲಿಸುತ್ತಾರೆ. ನಾಗನ ಪೂಜೆಯನ್ನು ಮಾಡುವಾಗ ಅನಂತ, ವಾಸುಕಿ, ಶೇಷ, ಪದ್ಮನಾಭ, ಕಂಬಲ, ಶಂಖಪಾಲ, ಧೃತರಾಷ್ಟ್ರ, ತಕ್ಷಕ ಮತ್ತು ಕಾಲಿಯಾ ಈ ಒಂಭತ್ತು ನಾಗಗಳ ಹೆಸರುಗಳನ್ನು ಉಚ್ಚರಿಸಿ ಗಂಧ, ಅಕ್ಷತೆ ಮತ್ತು ಹೂವುಗಳನ್ನು ಅರ್ಪಿಸಬೇಕು. ಮನೆಯ ಸದಸ್ಯರು ಹೂವು, ಗರಿಕೆ, ಅರಳು, ಕಡಲೆಕಾಳು ಮುಂತಾದ ಪದಾರ್ಥಗಳನ್ನು ಅರ್ಪಿಸಬೇಕು.

ನಾಗರಪಂಚಮಿಯಂದು ಇವನ್ನು ಮಾಡದಿರಿ

ನಾಗರಪಂಚಮಿಯ ದಿನ ಏನನ್ನೂ ಹೆಚ್ಚಬಾರದು, ಕೊಯ್ಯಬಾರದು, ಕರಿಯಬಾರದು ಮುಂತಾದ ನಿಯಮಗಳನ್ನು ಪಾಲಿಸಬೇಕು. ಈ ದಿನ ಭೂಮಿಯನ್ನು ಅಗೆಯುವುದು ಕೂಡ ನಿಷೇಧಿಸಲಾಗಿದೆ. ಆದರೆ ವರ್ಷವಿಡೀ ಈ ಕೃತಿಗಳನ್ನು ಮಾಡುವುದರ ಮೇಲೆ ಯಾವುದೇ ನಿರ್ಬಂಧವಿಲ್ಲ. ಹಾಗಾದರೆ ನಾಗರಪಂಚಮಿಯಂದು ಈ ಕೃತಿಗಳನ್ನು ನಿಷೇಧಿಸಿರುವ ಕಾರಣ ಮತ್ತು ಅವುಗಳನ್ನು ಮಾಡುವುದರಿಂದಾಗುವ ಹಾನಿಯ ಬಗ್ಗೆ ತಿಳಿದುಕೊಳ್ಳೋಣ.

ಅ. ನಾಗದೇವತೆಯು ಇಚ್ಛೆಯ ಪ್ರತೀಕ. ಇಚ್ಛೆಯ ಪ್ರವರ್ತಕ (ಅಂದರೆ ಇಚ್ಛೆಗೆ ವೇಗ ನೀಡುವ) ಮತ್ತು ಸಕಾಮ ಇಚ್ಛೆಯನ್ನು ಪೂರ್ಣಗೊಳಿಸುವ ದೇವತೆಯೂ ಹೌದು. ನಾಗದೇವರು ಇಚ್ಛೆಗೆ ಸಂಬಂಧಿಸಿದ ಕನಿಷ್ಠ ದೇವತೆಯಾಗಿದ್ದಾರೆ. ನಾಗರಪಂಚಮಿಯಂದು ಸಂಬಂಧಸಿದ ತತ್ತ್ವದ ದೇವತೆಗಳಿಂದ ನಿರ್ಮಾಣವಾಗುವ ಇಚ್ಛಾ ಲಹರಿಗಳು ಭೂಮಿಯ ಮೇಲೆ ಅವತರಿಸುವುದರಿಂದ ವಾಯುಮಂಡಲದಲ್ಲಿ ನಾಗದೇವತೆಯ ತತ್ತ್ವದ ಪ್ರಮಾಣವು ಹೆಚ್ಚಿರುತ್ತದೆ. ಈ ದಿನದಂದು ಭೂಮಿಯಲ್ಲಿರುವ ಇಚ್ಛಾಜನ್ಯ ದೇವತಾಸ್ವರೂಪ ಲಹರಿಗಳು ಘನವಾಗುವ ಪ್ರಮಾಣವೂ ಹೆಚ್ಚಿರುತ್ತದೆ. ಹೆಚ್ಚುವುದು,

ಕೊಯ್ಯುವುದು, ಭೂಮಿ ಉಳುವುದು ಮುಂತಾದ ಕೃತಿಗಳಿಂದ ರಜ–ತಮಕ್ಕೆ ಸಂಬಂಧಿಸಿದ ಇಚ್ಛಾಲಹರಿಗಳು (ಅಂದರೆ ದೇವತಾಜನ್ಯ ಇಚ್ಛಾಲಹರಿಗಳ ಕಾರ್ಯವನ್ನು ವಿರೋಧಿಸುವ ಲಹರಿಗಳು) ವಾಯುಮಂಡಲದಲ್ಲಿ ಹೊರಸೂಸುವ ಪ್ರಮಾಣವು ಹೆಚ್ಚಾಗುವುದರಿಂದ ಈ ದಿನದಂದು ನಾಗದೇವತೆಯ ಲಹರಿಗಳಿಗೆ ತಮ್ಮ ಕಾರ್ಯ ಮಾಡುವಲ್ಲಿ ಅಡಚಣೆಗಳು ಬರಬಹುದು. ಈ ಕಾರಣದಿಂದ ನಾಗರಪಂಚಮಿಯಂದು ಹೆಚ್ಚುವುದು, ಕರಿಯುವುದು, ಉಳುಮೆ, ಹೊಲಿಗೆ ಮುಂತಾದ ಕೃತಿಗಳನ್ನು ಮಾಡುವುದರಿಂದ ಪಾಪ ತಗಲಬಹುದು.

ನಾಗರಪಂಚಮಿಯ ತುಲನೆಯಲ್ಲಿ ಇತರ ದಿನಗಳಂದು ಇಂತಹ ದೇವತಾಜನ್ಯ ಇಚ್ಛಾಲಹರಿಗಳು ಭೂಮಿಯತ್ತ ಬಾರದಿರುವುದರಿಂದ ಇಂತಹ ಕೃತಿಗಳನ್ನು ಮಾಡುವುದರಿಂದ ಸಮಷ್ಟಿ ಪಾಪ ತಗಲುವ ಪ್ರಮಾಣವೂ ಕಡಿಮೆಯಿರುತ್ತದೆ. ಈ ಕಾರಣದಿಂದಲೇ ಆಯಾ ದಿನದಂದು ಕಾರ್ಯನಿರತವಾಗಿರುವ ದೇವತೆಗಳ ತತ್ತ್ವಕ್ಕನುಗುಣವಾಗಿ ಆಯಾ ದಿನದಂದು ಆ ದೇವತೆಯ ಉತ್ಸವ ಅಥವಾ ಹಬ್ಬವನ್ನು ಆಚರಿಸಲು ಹಿಂದೂ ಧರ್ಮವು ಕಲಿಸುತ್ತದೆ.

ಹಿಂದಿನ ಕಾಲದಲ್ಲಿ ಗೆಡ್ಡೆ–ಗೆಣಸು ಹುರಿದು, ಅಥವಾ ಬೇಯಿಸಿ ತಿನ್ನುವ ರೂಢಿಯಿತ್ತು. ಇದರಲ್ಲಿ ಹೆಚ್ಚುವ, ಕೊಯ್ಯುವ ಮತ್ತು ಕರಿಯುವ ಕೃತಿಗಳು ಇರುತ್ತಿರಲಿಲ್ಲ. ಆದುದರಿಂದ ಪಾಪ ತಗಲುವ ಪ್ರಮಾಣವೂ ಕಡಿಮೆಯಿತ್ತು.ಕಲಿಯುಗದಲ್ಲಿ ಹಿಂದಿನ ಕಾಲದ ಪರಂಪರೆಗಳನ್ನು ಪಾಲಿಸುವುದು ಕಠಿಣವಾಗಿರುವುದರಿಂದ ಪ್ರತಿಯೊಂದು ಕೃತಿಯಿಂದ ನಿರ್ಮಾಣವಾಗುವ ಪಾಪವು ನಷ್ಟ ಮಾಡಲು ಆ ಕೃತಿಯನ್ನು ಸಾಧನೆಯ ರೂಪದಲ್ಲಿ ಅಂದರೆ ನಾಮಜಪದೊಂದಿಗೆ ಮಾಡುವುದು ಆವಶ್ಯಕವಾಗಿದೆ.

## ನಾಗರಪಂಚಮಿಯಂದು ಉಪವಾಸ ಮಾಡುವ ಮಹತ್ವ



ಸತ್ಯೇಶ್ವರನು ನಾಗರಪಂಚಮಿಯ ಹಿಂದಿನ ದಿನ ಮೃತ್ಯು ಹೊಂದಿದನು. ಆಗ ಸಹೋದರನ ಮೃತ್ಯುವಿನ ಶೋಕದಲ್ಲಿ ಸತ್ಯೇಶ್ವರಿಯು ಆಹಾರವನ್ನು ತ್ಯಜಿಸಿದಳು. ಆದುದರಿಂದ ಆ ದಿನ ಸ್ತ್ರೀಯರು ಸಹೋದರನ ಹೆಸರಿನಲ್ಲಿ ಉಪವಾಸ ಮಾಡುತ್ತಾರೆ.

'ಸಹೋದರನಿಗೆ ಅಖಂಡ ಆಯುಷ್ಯವು ದೊರಕಲಿ, ಅನೇಕ ಆಯುಧಗಳು ಪ್ರಾಪ್ತವಾಗಲಿ ಮತ್ತು ಅವನು ಪ್ರತಿಯೊಂದು ದುಃಖ ಮತ್ತು ಸಂಕಟಗಳಿಂದ ಪಾರಾಗಲಿ' ಎನ್ನುವುದು ಸಹ ಈ ಉಪವಾಸದ ಹಿಂದಿನ ಕಾರಣವಾಗಿದೆ. ನಾಗರಪಂಚಮಿಯ ಹಿಂದಿನ ದಿನ ಪ್ರತಿಯೊಬ್ಬ ಸಹೋದರಿಯು ದೇವರಲ್ಲಿ ಮೊರೆ ಇಡುವುದರಿಂದ ಅವಳ ಸಹೋದರನಿಗೆ ಲಾಭವಾಗುತ್ತದೆ ಮತ್ತು ಅವನ ರಕ್ಷಣೆಯಾಗುತ್ತದೆ.

ನಾಗರಪಂಚಮಿಯಂದು ಸ್ತ್ರೀಯರು ಹೊಸ ಬಟ್ಟೆ ತೊಟ್ಟು, ಅಲಂಕಾರ ಧರಿಸಿ, ಮದರಂಗಿ ಏಕೆ ಹಚ್ಚಿಕೊಳ್ಳುತ್ತಾರೆ?

ಸಹೋದರ ಮೃತನಾದಾಗ ಸತ್ಯೇಶ್ವರಿಗಾದ ಶೋಕವನ್ನು ನೋಡಿ ನಾಗ ದೇವರು ಪ್ರಸನ್ನರಾದರು. ಸತ್ಯೇಶ್ವರಿಯು ನಾಗ ದೇವರನ್ನು ತನ್ನ ಸಹೋದರನೆಂದು ಭಾವಿಸಿ ಪೂಜಿಸಿದಳು. ನಾಗ ದೇವರು ಸತ್ಯೇಶ್ವರಿಗೆ ಹೊಸ ಬಟ್ಟೆಗಳನ್ನು ಹಾಗೂ ಅಲಂಕಾರಗಳನ್ನು ತಂದು ನೀಡಿದರು. ಆದುದರಿಂದ ನಾಗರ ಪಂಚಮಿಯಂದು ಸ್ತ್ರೀಯರು ಹೊಸ ಬಟ್ಟೆಗಳನ್ನು ತೊಟ್ಟು, ಅಲಂಕಾರ ಧರಿಸುತ್ತಾರೆ.

## ನಾಗ ಪೂಜೆಯ ಮಹತ್ವ

1. ನಾಗಗಳಲ್ಲಿನ ಶ್ರೇಷ್ಠನಾದ 'ಅನಂತ'ನೇ ನಾನು, ಎಂದು ಗೀತೆಯಲ್ಲಿ (10.29) ಶ್ರೀಕೃಷ್ಣ ತನ್ನ ವಿಭೂತಿಯನ್ನು ಹೇಳುತ್ತಾನೆ.

2. ಅನನ್ತಂ ವಾಸುಕಿಂ ಶೇಷಂ ಪದ್ಮನಾಭಂ ಚ ಕಮ್ಬಲಮ್
ಶಂಖಪಾಲಂ ಧೃತರಾಷ್ಟ್ರಂ ತಕ್ಷಕಂ, ಕಾಲಿಯಂ ತಥಾ

ಅರ್ಥ: ಅನಂತ, ವಾಸುಕೀ, ಶೇಷ, ಪದ್ಮನಾಭ, ಕಂಬಲ, ಶಂಖಪಾಲ, ಧೃತರಾಷ್ಟ್ರ, ತಕ್ಷಕ ಮತ್ತು ಕಾಲಿಯಾ ಹೀಗೆ ಒಂಬತ್ತು ಜಾತಿಯ ನಾಗಗಳ ಆರಾಧನೆಯನ್ನು ಮಾಡುತ್ತಾರೆ. ಇದರಿಂದ ಸರ್ಪಭಯವಿರುವುದಿಲ್ಲ ಮತ್ತು ವಿಷದಿಂದ ತೊಂದರೆಯಾಗುವುದಿಲ್ಲ.

3. ಜಗತ್ತಿನಲ್ಲಿನ ಎಲ್ಲ ಜೀವಜಂತುಗಳು ಜಗತ್ತಿನ ಕಾರ್ಯಕ್ಕಾಗಿ ಪೂರಕವಾಗಿವೆ. ನಾಗರಪಂಚಮಿಯ ದಿನ ನಾಗಗಳ ಪೂಜೆಯಿಂದ 'ಭಗವಂತನು ಅವುಗಳ ಮೂಲಕ ಕಾರ್ಯವನ್ನು ಮಾಡುತ್ತಿದ್ದಾನೆ', ಎಂಬ ವಿಶಾಲ ದೃಷ್ಟಿಕೋನವನ್ನಿಡಲು ಎಂಬುದೇ ಕಲಿಕೆಯಿರುತ್ತದೆ.

4. ನಾಗರಪಂಚಮಿಯ ದಿನವನ್ನು ಬಿಟ್ಟು ಇತರ ದಿನಗಳಲ್ಲಿ ನಾಗಗಳಲ್ಲಿ ತತ್ತ್ವಗಳು ಅಪ್ರಕಟವಾಗಿರುತ್ತವೆ. ನಾಗರಪಂಚಮಿಯಂದು ತತ್ತ್ವಗಳು ಪ್ರಕಟ ರೂಪದಲ್ಲಿ ಕಾರ್ಯನಿರತವಾಗುವುದರಿಂದ ಪೂಜಕನಿಗೆ ಲಾಭವಾಗುತ್ತದೆ.

5. ಗಣಪತಿಯ ಹೊಟ್ಟೆಯನ್ನು ಸುತ್ತುವರಿದಿರುವ ಹಳದಿ ನಾಗ ಎಂದರೆ ಜಾಗೃತ ವಿಶ್ವಕುಂಡಲಿನಿಯ ಪ್ರತೀಕ. ಮನುಷ್ಯರಲ್ಲಿಯೂ ಕುಂಡಲಿನಿಯನ್ನು ನಾಗರೂಪವೆಂದು ಪರಿಗಣಿಸಲಾಗಿದೆ.

## ನಾಗರಪಂಚಮಿಯಂದು ಉಯ್ಯಾಲೆ ಆಡುವುದರ ಮಹತ್ವ



ನಾಗರಪಂಚಮಿಯಂದು ನಾಗ ದೇವರ ಶಾಸ್ತ್ರೋಕ್ತ ಪೂಜೆ ಆದ ನಂತರ ಆನಂದದ ಪ್ರತೀಕವೆಂದು ಸ್ತ್ರೀಯರು ಉಯ್ಯಾಲೆ ಆಡುವ ಪರಂಪರೆಯಿದೆ.

ನಾಗ ದೇವರು ಸತ್ಯೇಶ್ವರಿಯ ಮುಂದೆ ಅವಳ ಮೃತ ಸಹೋದರನಾದ ಸತ್ಯೇಶ್ವರನ ರೂಪದಲ್ಲಿ ಪ್ರಕಟವಾದರು. ಆಗ ಅವಳು ಮರಗಳ ಕೊಂಬೆಗಳಿಂದ ಜೋತಾಡಿ ಆನಂದವನ್ನು ವ್ಯಕ್ತಪಡಿಸಿದಳು.

ಉಯ್ಯಾಲೆ ಆಡುವುದರ ಹಿಂದಿರುವ ಉದ್ದೇಶ  ಉಯ್ಯಾಲೆ ಮೇಲೆ ಹೋದಂತೆ ಸಹೋದರನೂ ಪ್ರಗತಿಯ ಶಿಖರವನ್ನು ತಲುಪಲಿ, ಮತ್ತು ಉಯ್ಯಾಲೆ ಕೆಳಗೆ ಬಂದಂತೆ ಸಹೋದರನ ಜೀವನದಲ್ಲಿ ಬರುವ ಎಲ್ಲ ಅಡಚಣೆಗಳು ದುಃಖಗಳು ಹೋಗಲಿ. ಈ ರೀತಿ ಭಾವವನ್ನು ಇಟ್ಟುಕೊಂಡು ಸಹೋದರಿಯು ಪ್ರತಿಯೊಂದು ಕೃತಿಯನ್ನು ಮಾಡಿದರೆ, ಸಹೋದರನ 5% ಆಧ್ಯಾತ್ಮಿಕ ಪ್ರಗತಿ ಮತ್ತು 30% ವ್ಯಾವಹಾರಿಕ ಉನ್ನತಿಯಾಗುತ್ತದೆ.

ನಾಗರಪಂಚಮಿಯಂದು ಮಾಡುವ ಕೆಲವು ಕೃತಿಗಳ ಮಹತ್ವ

## ನಾಗರಪಂಚಮಿಯಂದು ಹುತ್ತದ ಪೂಜೆಯ ಮಹತ್ವ




ನಾಗರಪಂಚಮಿಯಂದು ನಾಗಗಳಿರುವ ಹುತ್ತಗಳಿಗೆ ಪೂಜೆಯನ್ನು ಸಲ್ಲಿಸುತ್ತಾರೆ. ಹುತ್ತದಲ್ಲಿ ನಾಗನ ವಾಸವಿರುವುದರಿಂದ ಅಲ್ಲಿಯ ವಾತಾವರಣದಲ್ಲಿಯೂ ಅದರ ಸೂಕ್ಷ್ಮ ಪರಿಣಾಮವಾಗುತ್ತದೆ.

ನಾಗಗಳ ಆಧ್ಯಾತ್ಮಿಕ ಮಹತ್ವ

ಕಶ್ಯಪ ಋಷಿ ಮತ್ತು ಕದ್ರೂ ಇವರಿಂದ ಎಲ್ಲ ನಾಗಗಳ ನಿರ್ಮಿತಿಯಾಯಿತು. ಶಿವನು ಎಲ್ಲ ನಾಗಗಳ ಅಧಿಪತಿಯಾಗಿದ್ದಾನೆ. ಹೆಚ್ಚಿನ ನಾಗಗಳು ಶಿವನ ಉಪಾಸನೆಯನ್ನೇ ಮಾಡುತ್ತವೆ. ಕೆಲವು ನಾಗಗಳು ವಿಷ್ಣುವಿನ, ಕೆಲವು ನಾಗಗಳು ಶ್ರೀಗಣೇಶನ ಉಪಾಸನೆಯನ್ನು ಮಾಡುತ್ತವೆ.

ತ್ರಿಗುಣಗಳಂತೆ ನಾಗಗಳಲ್ಲಿ ಮೂರು ವಿಧಗಳಿವೆ

**ತಾಮಸಿಕ ನಾಗ** : ಈ ನಾಗಗಳು ಮುಖ್ಯವಾಗಿ ಕಪ್ಪು ಬಣ್ಣದ್ದಾಗಿದ್ದು ಅವು ಪಾತಾಳದ ನಾಗಲೋಕದಲ್ಲಿ ವಾಸಿಸುತ್ತವೆ. ದೊಡ್ಡ ಅನಿಷ್ಟ ಶಕ್ತಿಗಳು ಈ ನಾಗಗಳನ್ನು ಸೂಕ್ಷ್ಮ ಯುದ್ಧದಲ್ಲಿ ಶತ್ರುಗಳ ಮೇಲೆ ವಿಷಪ್ರಯೋಗ ಮಾಡಲು ಶಸ್ತ್ರಗಳಂತೆ ಉಪಯೋಗಿಸುತ್ತವೆ. ಪಾತಾಳದ ನಾಗಗಳು ಪೃಥ್ವಿಯ ಮೇಲಿನ ನಾಗಗಳಿಗಿಂತ ಲಕ್ಷ ಪಟ್ಟು ಹೆಚ್ಚು ಸಾಮರ್ಥ್ಯಶಾಲಿ ಮತ್ತು ಸಾವಿರ ಪಟ್ಟು ವಿಷಕಾರಿಯಾಗಿರುತ್ತವೆ.

**ರಾಜಸಿಕ ನಾಗ** : ಈ ನಾಗಗಳು ಪೃಥ್ವಿಯ ಮೇಲೆ ವಾಸಿಸುತ್ತದೆ. ನಾಗಯೋನಿಯಲ್ಲಿ ಜನಿಸಿದ್ದರಿಂದ ಈ ನಾಗಗಳ ಆಚರಣೆಯು ಸಾಮಾನ್ಯ ನಾಗಗಳಂತೆ ಇರುತ್ತದೆ. ಅವು ಕಪ್ಪು, ನೀಲಿ, ಕಂದು, ಚಾಕಲೇಟ ಮುಂತಾದ ಬಣ್ಣದ್ದಾಗಿರುತ್ತವೆ.

**ಸಾತ್ತ್ವಿಕ ನಾಗ** : ಈ ನಾಗಗಳು ದೈವೀಯಾಗಿರುವುದರಿಂದ ಅವು ಶಿವಲೋಕದ ಸಮೀಪದಲ್ಲಿರುವ ದೈವೀ ನಾಗಲೋಕದಲ್ಲಿ ವಾಸಮಾಡುತ್ತವೆ. ಅವುಗಳ ಬಣ್ಣ ಹಳದಿಯಿರುತ್ತದೆ ಮತ್ತು ತಲೆಯ ಮೇಲೆ ಕೆಂಪು ಅಥವಾ ನೀಲಿ ಬಣ್ಣದ ನಾಗಮಣಿಯಿರುತ್ತದೆ.


ಸಾತ್ತ್ವಿಕ ನಾಗವು ಪಾತಾಳದ ನಾಗಗಳ ತುಲನೆಯಲ್ಲಿ ಲಕ್ಷ ಪಟ್ಟು ಹೆಚ್ಚು ಸಾಮರ್ಥ್ಯವುಳ್ಳದ್ದಾಗಿರುತ್ತದೆ. ಸಾತ್ತ್ವಿಕ ನಾಗಗಳನ್ನು ವಿವಿಧ ದೇವತೆಗಳು ಧರಿಸಿದ್ದಾರೆ. ಶಿವನ ಕೊರಳಲ್ಲಿ ವಾಸುಕಿ ಎಂಬ ನಾಗವಿದೆ.

ಗಣಪತಿಯ ಹೊಟ್ಟೆಗೆ ಸುತ್ತು ಹಾಕಿದ ಜಾಗೃತ ವಿಶ್ವಕುಂಡಲಿನಿಯ ಪ್ರತೀಕವಾಗಿರುವ ಹಳದಿ ನಾಗ ಎಂದರೆ ಪದ್ಮನಾಭ. ಶ್ರೀವಿಷ್ಣು ಶೇಷನಾಗನ 'ಶಯ್ಯೆ'ಯ ಮೇಲೆ ಮಲಗಿರುತ್ತಾನೆ.

ಸಾತ್ತ್ವಿಕ ನಾಗಗಳು ಸಿದ್ಧ ಮತ್ತು ಋಷಿಮುನಿಗಳ ಆಧೀನದಲ್ಲಿರುತ್ತವೆ. ಅವು ಅವರ ಆಜ್ಞೆಯ ಪಾಲನೆಯನ್ನು ಮಾಡುತ್ತವೆ. ಹಳದಿ ನಾಗಗಳು ಉಚ್ಚ ದೇವತೆಗಳ ಉಪಾಸಕರಾಗಿರುವುದರಿಂದ ಅವುಗಳಲ್ಲಿ ದೈವಿ ಬಲವಿರುತ್ತದೆ. ಆದುದರಿಂದ ಅವರಿಗೆ ಆಶೀರ್ವಾದ ನೀಡುವ, ಅಂದರೆ ಸಂಕಲ್ಪಕ್ಕನುಸಾರ ಕಾರ್ಯವನ್ನು ಮಾಡುವ ಸಾಮರ್ಥ್ಯ ಪ್ರಾಪ್ತವಾಗಿದೆ.

ಆಧಾರ ಗ್ರಂಥ: ಈ ಮಾಹಿತಿಯನ್ನು ಸನಾತನದ 'ಹಬ್ಬಗಳನ್ನು ಆಚರಿಸುವ ಯೋಗ್ಯ ಪದ್ಧತಿ ಮತ್ತು ಶಾಸ್ತ್ರ' ಗ್ರಂಥದಿಂದ ಆರಿಸಲಾಗಿದೆ.

## ನಾಗರಪಂಚಮಿ : ಇತಿಹಾಸ



1. **ಸರ್ಪಯಜ್ಞದ ಸಮಾಪ್ತಿಯ ದಿನ** : ಸರ್ಪಯಜ್ಞ ಮಾಡುತ್ತಿದ್ದ ಜನಮೇಜಯ ರಾಜನನ್ನು ಪ್ರಸನ್ನಗೊಳಿಸಿದ ಆಸ್ತಿಕ ಋಷಿಗಳು ಬೇಡಿದ ವರಕ್ಕನುಸಾರ ಜನಮೇಜಯ ರಾಜನು ಯಜ್ಞ ನಿಲ್ಲಿಸಿದನು, ಮತ್ತು ಆಸ್ತಿಕ ಋಷಿಗಳು ವಿಶ್ವದಲ್ಲಿನ ಎಲ್ಲ ನಾಗಗಳಿಗೆ ಅಭಯವನ್ನು ನೀಡಿದರು

2. **ಕಾಲಿಯಾಮರ್ದನದ ತಿಥಿ** : ಭಗವಾನ ಶ್ರೀಕೃಷ್ಣನು ಗೋಕುಲದಲ್ಲಿರುವಾಗ ಶ್ರಾವಣ ಶುಕ್ಲ ಪಕ್ಷ ಪಂಚಮಿಯ ದಿನದಂದು ಯಮುನಾ ನದಿಯಲ್ಲಿದ್ದ ಕಾಲಿಯಾ ಎಂಬ ನಾಗನ ಮರ್ದನವನ್ನು ಮಾಡಿದನು.

3. **5 ಯುಗಗಳ ಹಿಂದೆ ಸತ್ಯೇಶ್ವರೀ ಎಂಬ ಹೆಸರಿನ ಕ್ಷುದ್ರ** ದೇವಿಯಿದ್ದಳು. ಅವಳಿಗೆ ಸತ್ಯೇಶ್ವರ ಎಂಬ ಸಹೋದರನಿದ್ದನು. ಸತ್ಯೇಶ್ವರನು ನಾಗರಪಂಚಮಿಯ ಹಿಂದಿನ ದಿನ ಮೃತನಾದ. ಸತ್ಯೇಶ್ವರಿಗೆ ಅವಳ ಸಹೋದರನು ನಾಗರೂಪದಲ್ಲಿ ಕಂಡನು. ಆಗ ಅವಳು ಆ ನಾಗರೂಪವನ್ನು ತನ್ನ ಸಹೋದರನೆಂದು ಭಾವಿಸಿದಳು. ಆಗ ನಾಗದೇವನು, ನನ್ನನ್ನು ಸಹೋದರನೆಂದು ಭಾವಿಸಿ ಪೂಜೆ ಮಾಡಿದ ಸಹೋದರಿಯ ರಕ್ಷಣೆಯನ್ನು ನಾನು ಮಾಡುವೆನು ಎಂದು ಅವಳಿಗೆ ಮಾತು ನೀಡಿದನು. ಆದುದರಿಂದಲೇ ಆ ದಿನ ಪ್ರತಿಯೊಬ್ಬ ಸ್ತ್ರೀಯು ನಾಗನ ಪೂಜೆ ಮಾಡಿ ನಾಗರಪಂಚಮಿಯನ್ನು ಆಚರಿಸುತ್ತಾಳೆ.

4. ನಾಗಗಳು ಪರಮೇಶ್ವರನ ಅವತಾರಗಳೊಂದಿಗೆ, ಅಂದರೆ ಸಗುಣ ರೂಪದೊಂದಿಗೆ ಅವಿನಾಭಾವ ಸಂಬಂಧವನ್ನು ಹೊಂದಿವೆ. ಸಮುದ್ರ ಮಂಥನದ ಸಮಯದಲ್ಲಿ ಕೂರ್ಮಾವತಾರಕ್ಕೆ ವಾಸುಕೀ ಎಂಬ ನಾಗವು ಸಹಾಯವನ್ನು ಮಾಡಿತ್ತು. ಶ್ರೀವಿಷ್ಣು ಶೇಷನಾಗನ ಶಯ್ಯೆಯ ಮೇಲೆ ಮಲಗಿರುತ್ತಾನೆ. ಶ್ರೀವಿಷ್ಣು ರಾಮನಾಗಿ ಅವತರಿಸಿದಾಗ ಅದೇ ಶೇಷನಾಗನು ಲಕ್ಷ್ಮಣನ ಅವತಾರವನ್ನು ತಾಳಿದ್ದನು. ಭಗವಾನ ಶಿವನು ಮೈಮೇಲೆ ಒಂಬತ್ತು ನಾಗಗಳನ್ನು ಧರಿಸಿದ್ದಾನೆ.5. ಶಿವನು ಹಾಲಾಹಲ ವಿಷ ಸೇವಿಸಿದಾಗ ಅವನಿಗೆ ಸಹಾಯ ಮಾಡಲು ಒಂಬತ್ತು ನಾಗಗಳು ಬಂದವು ಮತ್ತು ಅವುಗಳು ಸಹ ಹಾಲಾಹಲದ ಅಂಶವನ್ನು ಸೇವಿಸಿದವು. ಇದರಿಂದ ನಾಗಗಳ ಮೇಲೆ ಪ್ರಸನ್ನನಾದ ಶಿವನು ನಾಗಗಳು ಸಮಸ್ತ ಸೃಷ್ಟಿಯ ರಕ್ಷಣೆಯನ್ನು ಮಾಡಲು ನೀಡಿದ ಯೋಗದಾನಕ್ಕಾಗಿ 'ಮನುಷ್ಯನು ಯಾವಾಗಲೂ ನಾಗಗಳ ಬಗ್ಗೆ ಕೃತಜ್ಞನಾಗಿದ್ದು ಅವನು ನಾಗಗಳ ಪೂಜೆಯನ್ನು ಮಾಡುತ್ತಾನೆ', ಎಂಬ ಆಶೀರ್ವಾದವನ್ನು ನೀಡಿದನು. ಅಂದಿನಿಂದ ಒಂಬತ್ತು ನಾಗಗಳು ಮನುಷ್ಯನಿಗೆ ಪೂಜನೀಯವಾದವು. ಒಂಬತ್ತು ನಾಗಗಳು ಒಂಬತ್ತು ವಿಧದ ಪವಿತ್ರಕಗಳನ್ನು (ಚೈತನ್ಯಲಹರಿಗಳು) ಗ್ರಹಣ ಮಾಡುವ ಘಟಕಗಳಾಗಿವೆ. ಅವುಗಳ ಪೂಜೆಯಿಂದ ಚೈತನ್ಯ ಲಹರಿಗಳನ್ನು ಧಾರಣೆ ಮಾಡುವ ಸಮೂಹದ್ದೇ ಪೂಜೆಯಾಗುತ್ತದೆ.

**ಸಂಗ್ರಹ**
**ಶ್ರೀ. ವಿನೋದ ಕಾಮತ್,**
**ರಾಜ್ಯ ವಕ್ತಾರರು, ಸನಾತನ ಸಂಸ್ಥೆ**
**(ಸಂಪರ್ಕ : 9342599299)**

## ವಿವಿ ಪತ್ಯಕ್ಕೆ ರೇವಣ ಸಿದ್ದಪ್ಪ ಕವಿತೆ

**ದಾವಣಗೆರೆ:** ಸಂತೇಬೆನ್ನೂರಿನ ಸರಕಾರಿ ಎಸ್ ಜೆವಿಪಿ ಪದವಿಪೂರ್ವ ಕಾಲೇಜಿನ ಆಂಗ್ಲಭಾಷಾ ಉಪನ್ಯಾಸಕ ಜಿ.ಆರ್. ರೇವಣಸಿದ್ದಪ್ಪ ಅವರ ಕವಿತೆ ಕುವೆಂಪು ವಿಶ್ವವಿದ್ಯಾಲಯದ ಕನ್ನಡ ಭಾಷಾ ಪತ್ಯಕ್ಕೆ ಆಯ್ಕೆಯಾಗಿದೆ. ಬಿ.ಕಾಂ.ಪದವಿಯ ಮೂರನೇ ಸೆಮಿಸ್ಟರ್ ಕನ್ನಡ ಪತ್ಯದಲ್ಲಿ ಇವರ ಬುದ್ಧ, ಬಸವ, ಅಂಬೇಡ್ಕರ್ ಮತ್ತು ನಾವು ಕವಿತೆ ಸ್ಥಾನಪಡೆದಿದೆ. ಕಾಲೇಜು ಪ್ರಾಚಾರ್ಯ ಶಾರದ, ಉಪನ್ಯಾಸಕರು ಮತ್ತು ಆಡಳಿತ ಮಂಡಳಿ ಅಭಿನಂದಿಸಿದೆ.

## ಅಪಘಾತ: ಅಧಿಕಾರಿ ಸಾವು

**ಹಿರೇಕೋಗಲೂರು:** ಹೊನ್ನಾಳಿ ತಾಲೂಕಿನ ಸಿದ್ದೇಶ್ವರ ನಗರ ಬಳಿ ಬೈಕ್‌ನಿಂದ ಜಾರಿಬಿದ್ದು ಹಿರೇಕೋಗಲೂರು ವೃತ್ತದ ಗ್ರಾಮಲೆಕ್ಕಾಧಿಕಾರಿ ಮೃತಪಟ್ಟ ಘಟನೆ ಶುಕ್ರವಾರ ನಡೆದಿದೆ. ಹಿರೇಕೋಗಲೂರು ವೃತ್ತದ ಗ್ರಾಮ ಲೆಕ್ಕಾಧಿಕಾರಿ ತಿಲಕ್ ಕುಮಾರ್ (48) ಮೃತ ವ್ಯಕ್ತಿ. ಕಳೆದ 20 ವರ್ಷಗಳಿಂದ ಹಿರೇಕೋಗಲೂರು ಗ್ರಾಮಲೆಕ್ಕಾಧಿಕಾರಿಯಾಗಿ ಕೆಲಸ ಮಾಡುತ್ತಿದ್ದರು. ಹೊನ್ನಾಳಿಯಲ್ಲಿ ನೆಲೆಸಿದ್ದ ಇವರು, ಶುಕ್ರವಾರ ಕೆಲಸ ಮುಗಿಸಿ ಹೊನ್ನಾಳಿಗೆ ಹಿಂದಿರುಗುವಾಗ ಬೈಕ್ ನಿಯಂತ್ರಣ ಸಿಗದೆ ಜಾರಿಬಿದ್ದು ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಹೊನ್ನಾಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಆರೇಹಳ್ಳಿಯಲ್ಲಿ ಪೂಜಾ ಲಿಂಗರಾಜ್ ಅವರ ಮನೆಯಲ್ಲಿ ಶನಿವಾರ ಅನಿಲ ಸೋಸಿ ಲಿಂಡರ್‌ಗೆ ಬೆಂಕಿ ಬಿದ್ದಿತ್ತು

**ತ್ಯಾವಣಿಗೆ:** ಸಮೀಪದ ಅರೇಹಳ್ಳಿ ಬೆಂಕಿ ಹತ್ತಿಕೊಂಡಿದರಿಂದ ಗೋಮಾಳದ ಪೂಜಾ ಲಿಂಗರಾಜು ಮನೆಯಲ್ಲಿ ಶನಿವಾರ ಅಡುಗೆ ಮಾಡುವಾಗ ಸಿಲಿಂಡರ್‌ಗೆ ಆಕಸ್ಮಿಕವಾಗಿ ಮನೆಯವರಲ್ಲಿ ಸೃಷ್ಟಿಯಾಗಿತ್ತು.

ಬೆಂಕಿ ಕಾಣಿಸಿಕೊಂಡ ತಕ್ಷಣವೇ ಗ್ರಾಮಸ್ಥರು ಸಮೀಪದಲ್ಲಿ ಇದ್ದ ಮಣ್ಣು ಎಂ.ಸ್ಯಾಂಡ್ ಮೂಲಕ ಅದನ್ನು ನಂದಿಸಲು ಪ್ರಯತ್ನಿಸಿದರು. ಸ್ಥಳದಲ್ಲಿದ್ದ ಪಂಚಾಯಿತಿ ಸದಸ್ಯ ಚೇತನ್ ಕುಮಾರ್ ಅರೇಹಳ್ಳಿ ಮತ್ತು ಜೆಜೆಎಂನ ಜಿಲ್ಲಾ ಪಂಚಾಯಿತಿ ಸಿಬ್ಬಂದಿ ಅನಿಲ್ ಸರ್ಕಾರಿ ಶಾಲೆಯಲ್ಲಿರುವ ಅಗ್ನಿನಂದನ ತಂದು ಅದರ ಮೂಲಕ ಹಾಗೂ ಗ್ಯಾಸ್ ಏಜೆನ್ಸಿಯ ಮಾಲೀಕರ ಸಹಕಾರದೊಂದಿಗೆ ಸಿಲಿಂಡರ್ ಸಿಡಿಯದಂತೆ ಎಚ್ಚರವಹಿಸಿದ್ದರಿಂದ ಹೆಚ್ಚಿನ ಅನಾಹುತ ತಪ್ಪಿದೆ.

ಮನೆಯಲ್ಲಿನ ವಿದ್ಯುತ್ ವೈರ್, ಬಟ್ಟೆ, ಪಾತ್ರೆ ಸುಟ್ಟು ಕರಕಲಾಗಿದ್ದು, ಅಂದಾಜು * 50 ಸಾವಿರ ನಷ್ಟವಾಗಿದೆ

## ಜೆಡಿಎಸ್ ಪಕ್ಷ ಸಂಘಟನೆ ಮಾಡುವ ಮೂಲಕ ಚುನಾವಣೆಗಳನ್ನು ಸಮರ್ಥವಾಗಿ ಎದುರಿಸುವ ಅಗತ್ಯ ಇದೆ



**ಚಿಕ್ಕಮಗಳೂರು:** ಜೆಡಿಎಸ್ ಪಕ್ಷವನ್ನು ತಳ ಮಟ್ಟದಿಂದ ಪಕ್ಷ ಸಂಘಟನೆ ಮಾಡುವ ಮೂಲಕ ಮುಂಬರುವ ಗ್ರಾಪಂ, ತಾಪಂ, ಜಿಪಂ ಚುನಾವಣೆಗಳನ್ನು ಸಮರ್ಥವಾಗಿ ಎದುರಿಸುವ ಅಗತ್ಯ ಇದೆ ಎಂದು ಪಕ್ಷದ ರಾಜ್ಯ ಮುಖಂಡ ನಿಖಿಲ್ ಕುಮಾರಸ್ವಾಮಿ ಕಾರ್ಯಕರ್ತರಿಗೆ ಕರೆ ನೀಡಿದರು.

ಅವರು ಇಂದು ಜಿಲ್ಲೆಯ ಶೃಂಗೇರಿ ವಿಧಾನ ಸಭಾ ಕ್ಷೇತ್ರದಲ್ಲಿ, ಕೊಪ್ಪ ಪಟ್ಟಣದಲ್ಲಿ ಕ್ಷೇತ್ರ ಸಮಿತಿ ಏರ್ಪಡಿಸಿದ್ದ ಜೆಡಿಎಸ್ ಕಾರ್ಯಕರ್ತರ ಸಭೆ ಹಾಗೂ ಸದಸ್ಯತ್ವ ನೊಂದಣಿ ಅಭಿಯಾನವನ್ನು ಉದ್ಘಾಟಿಸಿ ಮಾತನಾಡಿದರು.

ಮಲೆನಾಡು ಭಾಗದಲ್ಲಿ ಧಾರಾಕಾರವಾಗಿ ಸುರಿಯುತ್ತಿರುವ ಮಳೆಯನ್ನು ಲೆಕ್ಕಿಸದೆ ಪಕ್ಷದ ಮೇಲೆ ಅಭಿಮಾನವಿಟ್ಟು ಆಗಮಿಸಿರುವ ಕಾರ್ಯಕರ್ತರು, ಹಿತೈಷಿಗಳ ನಿರೀಕ್ಷೆಗೆ ಚ್ಯುತಿ ಬಾರದಂತೆ ನೆಡೆಯುತ್ತೇವೆ, ಪಕ್ಷ ಸಂಘಟನೆ ಬಲವಾದಷ್ಟು ನಾಯಕ ಹಾಗೂ ಕೇಂದ್ರ ಸಚಿವ ಹೆಚ್.ಡಿ ಕುಮಾರಸ್ವಾಮಿ ರವರಿಗೆ ಧ್ವನಿಯಾಗಿ ಕೆಲಸ ಮಾಡಬೇಕೆಂದು ಮನವಿ ಮಾಡಿದರು.

ಸುಧಾಕರ ಶೆಟ್ಟಿ ರವರು ಪಕ್ಷ ಸಂಘಟನೆಗೆ ಗಟ್ಟಿಯಾಗಿ ಶ್ರಮವಹಿಸುತ್ತಿರುವುದು ಶ್ಲಾಘನೀಯ ಎಂದ ಅವರು ಕಳೆದ ವಿಧಾನಸಭಾ ಚುನಾವಣೆಯಲ್ಲಿ ಸ್ಪರ್ಧೆ ಮಾಡಿದಾಗ ಜೆಡಿಎಸ್ ಪಕ್ಷದ ಅಭ್ಯರ್ಥಿಯಾಗಿದ್ದ ತಮಗೆ ಮತ ನೀಡಿದವರನ್ನು ಮರೆಯಬಾರದೆಂದು, ಈ ದೃಢ ನಿರ್ಧಾರ ಕೈಗೊಂಡಿದ್ದೀರಿ ಎಂದರು.

ಪಕ್ಷದ ಕಾರ್ಯಕರ್ತರು ಶೃಂಗೇರಿ ಕ್ಷೇತ್ರದಲ್ಲಿ ಜೆಡಿಎಸ್ ಪಕ್ಷವನ್ನು ಬಲವಾಗಿ ಕಟ್ಟುವ ಸಂಕಲ್ಪ ಮಾಡಬೇಕಾಗಿದೆ, ಸುಧಾಕರ ಶೆಟ್ಟರವರು ಯಾವುದೇ ಅಪೇಕ್ಷೆ ಇಟ್ಟುಕೊಳ್ಳದೆ ಅಮ್ಮ ಫೌಂಡೇಷನ್ ಮೂಲಕ ಶಿಕ್ಷಣ, ಆರೋಗ್ಯ ಕ್ಷೇತ್ರಕ್ಕೆ ಗಣನೀಯ ಸೇವೆ ಸಲ್ಲಿಸುತ್ತಿದ್ದಾರೆ, ಮಾಜಿ ಶಿಕ್ಷಣ ಸಚಿವ ಗಾಂಧಿವಾದಿ ಹೆಚ್.ಜಿ ಗೋವಿಂದೇ ಗೌಡರ ಕರ್ತವ್ಯ ನಿಷ್ಠೆಯ ಬಗ್ಗೆ ಸ್ಮರಿಸಿದರು.

ಮಾಜಿ ಪ್ರಧಾನಿ ಹೆಚ್.ಡಿ ದೇವೇಗೌಡರ ಮಾರ್ಗದರ್ಶನ, ನಾಯಕರಾದ ಹೆಚ್.ಡಿ ಕುಮಾರಸ್ವಾಮಿ ರವರ ಆದೇಶದ ಮೇರೆಗೆ ಈ ಸದಸ್ಯತ್ವ ಅಭಿಯಾನವನ್ನು ನಡೆಸುತ್ತಿದ್ದು, ಆ. 20 ರೊಳಗೆ ಇದನ್ನು ಮುಕ್ತಾಯಗೊಳಿಸಬೇಕೆಂಬ ಹಿನ್ನೆಲೆಯಲ್ಲಿ ರಾಜ್ಯಾದ್ಯಂತ ಪ್ರವಾಸ ಕೈಗೊಳ್ಳುವುದಾಗಿ ತಿಳಿಸಿದರು.

ಜೆಡಿಎಸ್ ಪಕ್ಷದ ಮೇಲೆ ಇಟ್ಟಿರುವ ಅಭಿಮಾನಕ್ಕೆ ಬೆಲೆ ಕಟ್ಟಲಾಗದು, ಪಕ್ಷದ ಕಾರ್ಯಕರ್ತರು ಮಳೆ, ಗಾಳಿ, ಚಳಿ, ಬಿಸಿಲಿಗೆ ಜಗ್ಗುವುದಿಲ್ಲ ಎಂಬುವುದಕ್ಕೆ ಇಲ್ಲಿ ಸೇರಿರುವ ಕಾರ್ಯಕರ್ತರ ಪಡೆ ನಿದರ್ಶನ ಎಂದ ಅವರು ಮೂರು ಬಾರಿ ಚುನಾವಣೆಯಲ್ಲಿ ಪರಾಭವಗೊಂಡಿದ್ದರು ನಗು ಮುಖವನ್ನು ಯಾರು ಕಿತ್ತುಕೊಳ್ಳಲು ಸಾದ್ಯವಿಲ್ಲ, ಪ್ರತಿ ಹಂತದಲ್ಲೂ ಪಕ್ಷ ಸಂಘಟನೆ ಮಾಡಿ ಬೆಂಬಲಿಸುತ್ತಿದ್ದೀರಿ ಎಂದರು.

ಸಕಲೇಶಪುರ ಮಾಜಿ ಶಾಸಕ ಹೆಚ್.ಕೆ ಕುಮಾರಸ್ವಾಮಿ ಮಾತನಾಡಿ ಒಂದು ಪಕ್ಷ ರಾಜಕೀಯವಾಗಿ ಸದೃಢವಾಗಬೇಕಾದರೆ ಪ್ರಾಥಮಿಕ ಸದಸ್ಯತ್ವ ನೋಂದಣಿ ಅಗತ್ಯವಾಗಿದ್ದು, ಈ ಮೂಲಕ ಪಕ್ಷ ಸಂಘಟನೆ ಮಾಡಬೇಕು ಎಂದು ಅಭಿಪ್ರಾಯಿಸಿದರು.

ಯಾವುದೇ ಅಭಿವೃದ್ಧಿ ಕೈಗೊಳ್ಳದ ಜನ ವಿರೋಧಿ ಕಾಂಗ್ರೆಸ್ ಸರ್ಕಾರದ ವಿರುದ್ಧ ಹೋರಾಟ ಮಾಡಲು ಕಾರ್ಯಕರ್ತರು ಮನಸ್ಸು ಮಾಡಿ ಪಕ್ಷಕ್ಕೆ ಶಕ್ತಿ ತುಂಬಬೇಕೆಂದು ಹೇಳಿದ ಅವರು ನೂತನ ಸದಸ್ಯತ್ವ ಪಡೆಯುವಾಗ ಎಲ್ಲಾ ವರ್ಗದ ಜನರಿಗೆ ಅವಕಾಶ ನೀಡಬೇಕು, ಈ ನಿಟ್ಟಿನಲ್ಲಿ ಬೂತ್ ಮಟ್ಟದಲ್ಲಿ ಸಮಿತಿ ರಚಿಸುವ ಅಗತ್ಯ ಇದೆ ಎಂದು ಸಲಹೆ ನೀಡಿದರು,ಕಾರ್ಯಕ್ರಮದಲ್ಲಿ ಪಕ್ಷದ ಜಿಲ್ಲಾಧ್ಯಕ್ಷ ರಂಜನ್ ಅಜಿತ್ ಕುಮಾರ್, ಕೋರ್ ಕಮಿಟಿ ಸದಸ್ಯ ಹೆಚ್.ಜಿ ವೆಂಕಟೇಶ್, ಕ್ಷೇತ್ರ ಸಮಿತಿ ಅಧ್ಯಕ್ಷ ದಿವಾಕರ ಭಟ್, ರಾಜ್ಯ ಮಹಿಳಾ ಘಟಕದ ರಶ್ಮೀ ರಾಮೇಗೌಡ, ಕುಸುಮ ವಾಸಪ್ಪ, ರಾಮಸ್ವಾಮಿ, ಗೋವಿಂದೇಗೌಡ, ಮಂಜುನಾಥ್, ಚಂದ್ರಶೇಖರ್, ಉದಯ ಸುವರ್ಣ, ಅನಿಲ್ ನಾರ್ವೆ, ಬದ್ರಿಯಾ ಮಹ್ಮದ್, ಸುರೇಶ್, ದೇವೇಂದ್ರ, ಶುಭಾಅರುಣ್, ಪುಷ್ಪಲತ, ಶಿವದಾಸ್, ಕಳಸಪ್ಪ, ಸಂಜಯ್ ಮತ್ತಿತರರು ಉಪಸ್ಥಿತರಿದ್ದರು, ಮೊದಲಿಗೆ ಪಕ್ಷದ ಮುಖಂಡ ವಿನಯ್ ಕಣಿವೆ ಸ್ವಾಗತಿಸಿದರು.

## ಆಧುನಿಕ ಹೈನುಗಾರಿಕೆ ತರಬೇತಿ

**ದಾವಣಗೆರೆ:** ದಾವಣಗೆರೆ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರದಲ್ಲಿ ಜುಲೈ 28 ಮತ್ತು 29 ರಂದು ಆಧುನಿಕ ಹೈನುಗಾರಿಕೆ ತರಬೇತಿಯನ್ನು ಆಯೋಜಿಸಲಾಗಿದೆ.

ಆಸಕ್ತ ರೈತರು ಆಧಾರ್ ಕಾರ್ಡ್ ಜೆರಾಕ್ಸ್, 2 ಪಾಸ್ ಪೋರ್ಟ್ ಸೈಜ್ ಪೋಟೋ ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರು ಜಾತಿ ಪ್ರಮಾಣ ಪತ್ರದ ಜೆರಾಕ್ಸ್ ಪ್ರತಿಯೊಂದಿಗೆ ಹಾಜರಾಗಬೇಕು. ತರಬೇತಿ ಕಾರ್ಯಕ್ರಮಕ್ಕೆ ಯಾವುದೇ ಪ್ರೋತ್ಸಾಹಧನ ಮತ್ತು ಭತ್ಯೆಗಳನ್ನು ನೀಡಲಾಗುವುದಿಲ್ಲ. ತರಬೇತಿಯು ದಾವಣಗೆರೆ ಜಿಲ್ಲೆಯ ರೈತರಿಗೆ ಮಾತ್ರ ಇರುತ್ತದೆ. ಹೆಚ್ಚಿನ ಮಾಹಿತಿಗಾಗಿ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರ, ದಾವಣಗೆರೆ ಕಚೇರಿ ದೂ.ಸಂ: 08192–233787 ಸಂಪರ್ಕಿಸಿ ಮಾಹಿತಿ ಪಡೆದುಕೊಳ್ಳಬಹುದು ಎಂದು ಪಶುವೈದ್ಯಾಧಿಕಾರಿಗಳು ತಿಳಿಸಿದ್ದಾರೆ.

## ಮಾಸ್ಟರ್ ಆಫ್ ವಿಜ್ಯುಯಲ್ ಆರ್ಟ್ಸ್ (ಎಂ.ವಿ.ಎ) ಪದವಿಗೆ ಅರ್ಜಿ ಆಹ್ವಾನ

**ದಾವಣಗೆರೆ** : ಮೈಸೂರು ವಿಶ್ವವಿದ್ಯಾಲಯಕ್ಕೆ ಸಂಯೋಜನೆಗೊಂಡಿರುವ ಚಾಮರಾಜೇಂದ್ರ ಸರ್ಕಾರಿ ದೃಶ್ಯಕಲಾ ಕಾಲೇಜು ಸಂಸ್ಥೆಯಲ್ಲಿ ಪ್ರಥಮ ಬಿ.ಎ.ವಿ ಸ್ನಾತಕ ಪದವಿಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಂದ ಮಾಸ್ಟರ್ ಆಫ್ ವಿಜ್ಯುಯಲ್ ಆರ್ಟ್ಸ್ (ಎಂ.ವಿ.ಎ) ಪದವಿಗೆ ಪ್ರಸಕ್ತ ಸಾಲಿಗೆ ಗಗಅಒಖ ಕಔಖಖಿಂಐ ನಲ್ಲಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಈ ಪದವಿಯು ಚಿತ್ರಕಲೆ ಮತ್ತು ಶಿಲ್ಪಕಲೆ ವಿಭಾಗಗಳಲ್ಲಿ ವಿಶೇಷ ಅಧ್ಯಯನದ ಸ್ನಾತಕೋತ್ತರ ಪದವಿಯಾಗಿರುತ್ತದೆ. ಅರ್ಜಿ ಸಲ್ಲಿಸಲು ಆಗಸ್ಟ್ 8 ಕೊನೆಯ ದಿನವಾಗಿದ್ದು, ಆ.11ರಂದು ಅರ್ಹತಾ ಪರೀಕ್ಷೆ ಹಾಗೂ ಮಧ್ಯಾಹ್ನ 2 ರಿಂದ ವೈಯಕ್ತಿಕ ಸಂದರ್ಶನ ನಡೆಸಲಾಗುವುದು.

ಆಸಕ್ತ ಅರ್ಹ ಅಭ್ಯರ್ಥಿಗಳು ಸರ್ಕಾರದ ಅಂತರ್ಜಾಲ http://www.mysore.nic.in http://www.cavamysore.karnataka.gov.in ಮೂಲಕ ಮಾಹಿತಿ ಪಡೆಯಬಹುದು. ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂರವಾಣಿ ಸಂಖ್ಯೆ 0821–2438931 ಗೆ ಸಂಪರ್ಕಿಸಬಹುದು ಎಂದು ದೃಶ್ಯಕಲಾ ಕಾಲೇಜ್ ಡೀನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಭಾರತೀಯ ಜನತಾ ಪಾರ್ಟಿ ವತಿಯಿಂದ ಕಾರ್ಗಿಲ್ ವಿಜಯೋತ್ಸವ

**ಚಿತ್ರದುರ್ಗ:** ಚಿತ್ರದುರ್ಗ ನಗರದ ಭಾರತೀಯ ಜನತಾ ಪಾರ್ಟಿಯವತಿಯಿಂದ ಕಾರ್ಗಿಲ್ ವಿಜಯ ದಿವಸವನ್ನು ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಒನಕೆ ಓಬವ್ವ ವೃತ್ತದಲ್ಲಿ ಆಚರಿಸಲಾಯಿತು.

ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಬಿಜೆಪಿ ಜಿಲ್ಲಾಧ್ಯಕ್ಷ ಕೆ.ಟಿ.ಕುಮಾರಸ್ವಾಮಿ ಮಾತನಾಡಿ, ನಮ್ಮ ದೇಶದ ಸೈನಿಕರು ಪಾಕಿಸ್ತಾನಿ ಸೈನ್ಯವನ್ನು ಸದೇ ಬಡಿಯವುದರ ಮೂಲಕ ನಮ್ಮ ಜಾಗವನ್ನು ಆಕ್ರಮಿಸಿದ್ದ ಅವರನ್ನು ಅಲ್ಲಿಂದ ಹೊಡೆದೊಡಿಸಿದ ದಿವಸವಾಗಿದೆ. ಈ ದಿವಸ ಭಾರತೀಯರಿಗೆ ಹೆಮ್ಮೆಯ ದಿನವಾಗಿದೆ. ಇದರಲ್ಲಿ ವೀರ ಮರಣವನ್ನು ಅರ್ಪಿದಿವರಿಗೆ ಗೌರವನ್ನು ಸಲ್ಲಿಸಿ ಅವರ ಆತ್ಮಕ್ಕೆ ಶಾಂತಿಯನ್ನು ಕೋರಬೇಕಿದೆ. ಈ ಘಟನೆ ನಡೆದು 26 ವರ್ಷಗಳು ಕಳೆದಿವೆ. ಕಾರ್ಗಿಲ್ ಬೆಟ್ಟಗಳಿಂದ ಉಗ್ರಗಾಮಿಗಳನ್ನು ಹೊಡೆದೋಡಿಸಿದ ಸಂದರ್ಭವನ್ನು ಸ್ಮರಿಸಲು ಇಂದು ದೇಶಾದ್ಯಂತ 'ಕಾರ್ಗಿಲ್ ವಿಜಯ್ ದಿವಸ್' ಆಚರಿಸಲಾಗುತ್ತಿದೆ. ಭಾರತೀಯ ಭೂಪ್ರದೇಶವನ್ನು ಆಕ್ರಮಿಸಿ ಕೊಳ್ಳಲು ಸಂಚು ರೂಪಿಸುತ್ತಿದ್ದ ಪಾಕಿಸ್ತಾನಕ್ಕೆ ಭಾರತೀಯ ಸೇನೆ ತನ್ನ ಶೌರ್ಯವನ್ನು ಪ್ರದರ್ಶಿಸಿದ ದಿನ ಇದು. 'ಆಪರೇಷನ್ ವಿಜಯ್' ಹೆಸರಿನಲ್ಲಿ ಯುದ್ಧ ಘೋಷಣೆ ಕೂಗುವ ಮೂಲಕ ಶತ್ರು ಪಡೆಗಳನ್ನು ಕಾರ್ಗಿಲ್‌ನಿಂದ ಓಡಿಸಿದ ಸಂದರ್ಭವನ್ನು ಕಾರ್ಗಿಲ್ ವಿಜಯ್ ದಿವಸ್ ಎಂದು ನೆನಪಿಸಿಕೊಳ್ಳುತ್ತೇವೆ ಎಂದರು.





ನಮ್ಮ ದೇಶವನ್ನು ಉಳಿಸಲು ಅತ್ಯಂತ ಕಠಿಣ ಭೂಪ್ರದೇಶದಲ್ಲಿ ಅಸಾಧಾರಣ ಧೈರ್ಯ ಮತ್ತು ದೃಢಸಂಕಲ್ಪದಿಂದ ಹೋರಾಡಿ ತಮ್ಮ ಪ್ರಾಣವನ್ನು ತ್ಯಾಗ ಮಾಡಿದ ಧೈರ್ಯಶಾಲಿ ಸೈನಿಕರಿಗೆ ಗೌರವ ಸಲ್ಲಿಸುತ್ತೇವೆ ಕಾರ್ಗಿಲ್ ಯುದ್ಧದಲ್ಲಿ ಅವರ ತ್ಯಾಗ ನಮ್ಮ ಸಶಸ್ತ್ರ ಪಡೆಗಳ ದೃಢಸಂಕಲ್ಪಕ್ಕೆ ಸಾಕ್ಷಿಯಾಗಿದೆ. ಈ ದೇಶವು ಅವರಿಗೆ ಎಂದೆಂದಿಗೂ ಋಣಿಯಾಗಿರುತ್ತದೆ ಎಂದು ಕುಮಾರಸ್ವಾಮಿ ತಿಳಿಸಿದರು.

ಜಿಲ್ಲಾ ರೈತ ಮೋರ್ಚಾದ ಅಧ್ಯಕ್ಷ ವೆಂಕಟೇಶ್ ಯಾದವ್ ಮಾತನಾಡಿ 1999 ರ ಮೇ–ಜುಲೈನಲ್ಲಿ, ಕಾರ್ಗಿಲ್ ಬೆಟ್ಟಗಳಲ್ಲಿ ಭಾರತ ಮತ್ತು ಪಾಕಿಸ್ತಾನದ ನಡುವೆ ಭೀಕರ ಯುದ್ಧ ನಡೆಯಿತು. ಶತ್ರು ಪಡೆಗಳು ನಿಯಂತ್ರಣ ರೇಖೆಯನ್ನು ದಾಟಿ ಭಾರತದ ಪ್ರದೇಶವನ್ನು ಪ್ರವೇಶಿಸಿದವು. ಅವರು ಕಾರ್ಗಿಲ್‌ನಲ್ಲಿ ಖಾಲಿಯಾಗಿದ್ದ ಪ್ರಮುಖ ನೆಲೆಗಳ ಮೇಲೆ ದಾಳಿ ಮಾಡಿದರು. ಅವರ ಆಕ್ರಮಣದ ಬಗ್ಗೆ ತಿಳಿದ ನಂತರ, ಭಾರತೀಯ ಸೇನೆಯು 'ಆಪರೇಷನ್ ವಿಜಯ್' ಎಂಬ ಕಾರ್ಯಾಚರಣೆಯನ್ನು ಪ್ರಾರಂಭಿಸಿತು. ಭಾರತೀಯ ಸೇನೆಯ ಪ್ರತಿದಾಳಿಯಿಂದ ಪಾಕಿಸ್ತಾನಿ ಪಡೆಗಳು ಸೋತವು. ಅವರು 'ಪೀಚ್‌ಮಡ್' ಎಂದು ಹೇಳುತ್ತಾ ಗಡಿಯಿದ್ದಕ್ಕೂ ಓಡಿಹೋದರು. ಪಾಕಿಸ್ತಾನಿ ಸೇನೆಯನ್ನು ಓಡಿಸಲಾಗಿದೆ ಎಂದು ಭಾರತೀಯ ಸೇನೆ ಜುಲೈ 26 ರಂದು ಘೋಷಿಸಿತು. ಅಂದಿನಿಂದ, ನಾವು ಪ್ರತಿ ವರ್ಷ ಆ ದಿನವನ್ನು ಕಾರ್ಗಿಲ್ ವಿಜಯ್ ದಿವಸ್ ಎಂದು ಆಚರಿಸುತ್ತಿದ್ದೇವೆ ಎಂದರು.

ಇದೇ ಸಂದರ್ಭದಲ್ಲಿ ಸೈನಿಕರ ಪರವಾಗಿ ಜೈಕಾರವನ್ನು ಹಾಕಿ ಕಾರ್ಗಿಲ್ ಯುದ್ದದಲ್ಲಿ ಮಡಿದವರಿಗೆ ಶಾಂತಿಯನ್ನು ಸಲ್ಲಿಸಿ ವಿಜಯಯಾಗಿದ್ದಕೆ ಅಲ್ಲಿ ನೆರದಿದ್ದವರಿಗೆ ಸಿಹಿಯನ್ನು ಹಂಚಲಾಯಿತು.

# ಯುವಜನರಿಗೆ ಅಬ್ದುಲ್ ಕಲಾಂ ಸ್ಫೂರ್ತಿದಾಯಕ ವ್ಯಕ್ತಿ : ರಘು



**ಚಿಕ್ಕಮಗಳೂರು :** ಬಾಹ್ಯಕಾಶದ ವಿಜ್ಞಾನಿ ಡಾ॥ ಎ.ಪಿ.ಜೆ.ಅಬ್ದುಲ್ ಕಲಾಂ ಅವರ 10ನೇ ವರ್ಷದ ಪುಣ್ಯಸ್ಮರಣೆ ಅಂಗವಾಗಿ ನಗರದ ಶ್ರೀ ಸುಬ್ರಹ್ಮಣ್ಯ ಭಾರತಿ ಮಹಾಸಭಾ ತಮಿಳು ಸಂಘದಿಂದ ಕಚೇರಿಯಲ್ಲಿ ಭಾನುವಾರ ಭಾವಚಿತ್ರಕ್ಕೆ ಮುಖಂಡರುಗಳು ಪುಷ್ಪನಮನ ಸಲ್ಲಿಸಿ ಗೌರವ ಸಮರ್ಪಿಸಿದರು.

ಈ ಕುರಿತು ಮಾತನಾಡಿದ ಸಂಘದ ಜಿಲ್ಲಾಧ್ಯಕ್ಷ ಜಿ.ರಘು ತಮಿಳುನಾಡಿನ ರಾಮೇಶ್ವರದ ಮುಸ್ಲಿಂ ಬಡಕುಟುಂಬದಲ್ಲಿ ಜನಿಸಿದ ಅಬ್ದುಲ್ ಕಲಾಂ ಅವರು ಜೀವನದಲ್ಲಿ ಅನೇಕ ಏರುಪೇರುಗಳನ್ನು ಕಂಡವರು. ಬಳಿಕ ಬಾಹ್ಯಕಾಶ ಕ್ಷೇತ್ರದಲ್ಲಿ ವಿಶಿಷ್ಟ ಸಾಧನೆ ಮಾಡಿ ರಾಷ್ಟ್ರದ ಪ್ರಗತಿಗಾಗಿ ದುಡಿದ ಮಹಾಚೇತನ ಎಂದರು.

ಸಮಾಜದ ಯುವಜನರಿಗೆ ಮಾದರಿ ವ್ಯಕ್ತಿಯಾಗಿ ಅಬ್ದುಲ್ ಕಲಾಂ ಸ್ಫೂರ್ತಿ ನೀಡುತ್ತಾರೆ. ಮರಣಕ್ಕೂ ಮುನ್ನ ತಮ್ಮ ಹೆಸರಿನಲ್ಲಿ ರಜೆ ಘೋಷಿಸದೇ ಒಂದುಗ–'ಂಟೆ ಹೆಚ್ಚು ಕೆಲಸ ನಿರ್ವಹಿಸಲಿ ಎಂದು ಸೂಚಿಸಿದ್ದ ರು. ಮರಣದ ನಂತರ ಇಂದಿಗೂ ಜೀವಂತಿಕೆ ಉಳಿಸಿಕೊಂಡಿರುವ ಮಹಾಮೇಧಾವಿ ಎಂದು ಹೇಳಿದರು.

ಮುಸ್ಲಿಂ ಜನಾಂಗ ವ್ಯಕ್ತಿಯಾದರೂ ಕಲಾಂ ಅವರು ಯಾವುದೇ ಒಂದು ಜಾತಿ, ಧರ್ಮಕ್ಕೆ ಸೀಮಿತ ರಾಗಿರಲಿಲ್ಲ. ಜಾತ್ಯಾತೀತ ನಿಲುವು ಹಾಗೂ ಎಲ್ಲಾ ಧರ್ಮವನ್ನು ಸಮಾನವಾಗಿ ಅಪ್ಪಿಕೊಳ್ಳುವ ವಿಶೇಷ ಗುಣ ಅವರಲ್ಲಿತ್ತು. ತಮ್ಮ 83ನೇ ವಯಸ್ಸಿನಲ್ಲಿ ಮಕ್ಕಳೊಂದಿಗಿನ ಸಂವಾದದಲ್ಲೇ ಪ್ರಾಣ ತ್ಯಜಿಸಿದರು ಎಂದು ತಿಳಿಸಿ ದರು.

ತಿರುವಳ್ಳರ್ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಶಂಕರ್ ಮಾತನಾಡಿ ಕಲಾಂ ಅವರು ಕನಸನ್ನು ನನಸಾ ಗಿಸುವ ಸಾಮರ್ಥ್ಯ ಹೊಂದಿದವರು. ಅಲ್ಪಸಂಖ್ಯಾತರ ಕುಟುಂಬದಲ್ಲಿ ಜನಿಸಿದ ಅವರು ರಾಷ್ಟ್ರಕ್ಕಾಗಿ ಅಪಾರ ಕೊಡುಗೆ ನೀಡಿದ್ದಾರೆ. ಯುವಜನತೆಯ ಕನಸನ್ನು ನನಸಾಗಿಸುವ ಸ್ಫೂರ್ತಿಧಾಯಕ ಮಾತುಗಳು ಅವರ ಕಂ ಠದಲಿದೆ ಎಂದರು.ಬಾಹ್ಯಕಾಶ ವಿಜ್ಞಾನಿ, ದೇಶದ ರಾಷ್ಟ್ರಪತಿ ನಂತರ ಬೋಧನೆ, ಬರವಣಿಗೆ ಮತ್ತು ಸಾರ್ವಜನಿಕ ಸೇವೆ ಯಲ್ಲಿ ತೊಡಗಿಸಿಕೊಂಡರು. ಭಾರತದ ಅತ್ಯುನ್ನತ ನಾಗರಿಕ ಗೌರವವಾದ ಭಾರತ ರತ್ನ ಸೇರಿದಂತೆ ಹಲ ವಾರು ಪ್ರಶಸ್ತಿಗಳನ್ನು ಪಡೆದುಕೊಂಡು ಮೇರು ವ್ಯಕ್ತಿತ್ವದವರು ಎಂದು ಬಣ್ಣಿಸಿದರು.

ಸಂಘದ ಸಲಹೆ ಸಮಿತಿ ಅಧ್ಯಕ್ಷ ವಿಜಯ್‌ಕುಮಾರ್ ಮಾತನಾಡಿ ವಿಜ್ಞಾನ ಕ್ಷೇತ್ರದಲ್ಲಿ ಅಬ್ದುಲ್ ಕಲಾಂ ನೀಡಿದ ಕೊಡುಗೆಗಳು ವಿಶ್ವದ ಬಲಾಡ್ಯ ದೇಶಗಳು ಭಾರತದತ್ತ ನೋಡುವಂತೆ ಮಾಡಿತು. 1998ರಲ್ಲಿ ಪೋ ಖ್ರಾನ್ ಪರಮಾಣು ಪರೀಕ್ಷೆಗಳಲ್ಲಿ ಅವರು ಪ್ರಮುಖ ತಾಂತ್ರಿಕ ಮತ್ತು ರಾಜಕೀಯ ಪಾತ್ರವನ್ನು ವಹಿಸಿದ್ದರು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಸಂಘದ ಕಾರ್ಯದರ್ಶಿ ಮೂರ್ತಿ, ಯುವಘಟಕದ ಅಧ್ಯಕ್ಷ ಕೆ.ಕುಮಾರ್, ಕಾರ್ಯ ದರ್ಶಿ ಜಿ.ಕೆ. ಕಾರ್ತೀಕ್, ಸದಸ್ಯರಾದ ಮಂಜು, ಕೇಶವ, ರವಿಕುಮಾರ್, ರಾಮಣ್ಣ, ಭರತ್, ದಕ್ಷಿಣಮೂರ್ತಿ, ಲಕ್ಷ್ಮೀ, ವೆಂಕಟೇಶ್, ಆನಂದ್ ಮತ್ತಿತರರು ಉಪಸ್ಥಿತರಿದ್ದರು.

# ಎಸ್‌ಐಟಿ ತಂಡ ನಿಷ್ಪಕ್ಷಪಾತ ತನಿಖೆಗೆ ಆಗ್ರಹಿಸಿ ಪ್ರತಿಭಟನೆ




**ಚಿಕ್ಕಮಗಳೂರು :** ಧರ್ಮಸ್ಥಳ ಗ್ರಾಮದಲ್ಲಿ ನೂರಾರು ಶವಗಳನ್ನು ಹೂತಿಟ್ಟ ಪ್ರಕರಣವ ನ್ನು ರಾಜ್ಯಸರ್ಕಾರ ಎಸ್‌ಐಟಿ ತಂಡದಿಂದ ನಿಷ್ಪಕ್ಷಪಾತವಾಗಿ ತನಿಖೆಗೆ ನಡೆಸಬೇಕು ಎಂದು ಆಗ್ರಹಿಸಿ ಭೀ ಮ್ ಆರ್ಮಿ ಮುಖಂಡರುಗಳು ಶುಕ್ರವಾರ ಆಲ್ದೂರು ಗ್ರಾಮದಲ್ಲಿ ಪ್ರತಿಭಟನೆ ನಡೆಸಿದರು.
ಈ ಸಂದರ್ಭದಲ್ಲಿ ಭೀಮ್ ಆರ್ಮಿ ಜಿಲ್ಲಾಧ್ಯಕ್ಷ ಗಿರೀಶ್, ಉಪಾಧ್ಯಕ್ಷ ಸತೀಶ್, ಆಲ್ದೂರು ಘಟಕದ ಅಧ್ಯಕ್ಷ ಸುರೇಶ್, ಉಪಾಧ್ಯಕ್ಷ ಹರೀಶ್, ಮುಖಂಡರುಗಳಾದ ಯೋಗೀಶ್, ಮಲ್ಲಿಕಾರ್ಜುನ್, ಧರ್ಮೇಶ್ ಮತ್ತಿತರರು ಹಾಜರಿದ್ದರು.

# ಕುಡಿಯುವ ನೀರನ್ನು ಮಿತವಾಗಿ ಬಳಸಲು ಶಾಸಕ ದೇವೇಂದ್ರಪ್ಪ ಕರೆ

**ಜಗಳೂರು :** ಕುಡಿಯುವ ನೀರನ್ನು ಮಿತವಾಗಿ ಬಳಸಿ ನೀರು ಪೋಲಾಗದಂತೆ ಸಾರ್ವಜನಿಕರು ಜಾಗೃತರಾಗಬೇಕು ಎಂದು ಶಾಸಕ ಬಿ.ದೇವೇಂದ್ರಪ್ಪ ಹೇಳಿದರು.

ತಾಲ್ಲೂಕಿನ ಚಿಕ್ಕಬಂಟನಹಳ್ಳಿ, ಜಮ್ಮಾಪುರ ಗ್ರಾಮಗಳಲ್ಲಿ ಜೆಜೆಎಂ ನಡಿ ಚಿಕ್ಕಬಂಟನಹಳ್ಳಿ, ಜಾಡನಕಟ್ಟೆ,ಜಮ್ಮಾಪುರ, ಜಮ್ಮಾಪುರ ಗೊಲ್ಲರಹಟ್ಟಿ, ರಸ್ತೆ ಮಾಕುಂಟೆ, ಗ್ರಾಮಗಳಿಗೆ 24ಥ7 ಕುಡಿಯುವ ನೀರು ಸರಬರಾಜು ಗ್ರಾಮಗಳ ಘೋಷಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ದಶಕಗಳ ಹಿಂದೆ ಗ್ರಾಮೀಣ ಭಾಗದ ಹೆಣ್ಣುಮಕ್ಕಳು ನೀರಿಗಾಗಿ ಬೋರ್ ವೆಲ್, ಬಾವಿಗಳ ಮುಂದೆ ಹಗಲು ರಾತ್ರಿ ಸಾಲುಗಟ್ಟಿ ನಿಲ್ಲುತ್ತಿದ್ದ ಸಂದರ್ಭಗಳನ್ನು ಎದುರಿಸಿದ್ದಾರೆ. ಸಿರಿಗೆರೆ ಶ್ರೀಗಳ ಆಶೀರ್ವಾದ ಹಾಗೂ ಆಡಳಿತ ಸರ್ಕಾರಗಳ ಕಾಳಜಿಯಿಂದ 57 ಕೆರೆ ತುಂಬಿಸುವ ಯೋಜನೆ ಸಾಕಾರಗೊಂಡು ತಾಲ್ಲೂಕಿನ ಬಹುತೇಕ ಕೆರೆಗಳಿಗೆ ಭದ್ರಾಗಂಗೆ ಹರಿದಿದ್ದಾಳೆ ಎಂದರು.



ನಂಜುಂಡಪ್ಪ ವರದಿ ಪ್ರಕಾರ ಅತ್ಯಂತ ಹಿಂದುಳಿದ ತಾಲೂಕಿನ ಅಭಿವೃದ್ಧಿಗೆ ಅಧಿಕ ಅನುದಾನವನ್ನು ಜಿ ಪಂ ಸಿಇಓ ಒದಗಿಸಬೇಕು ಎಂದು ಶಾಸಕರು ಹೇಳಿದರು. ಜಿ.ಪಂ ಸಿಇಓ ಗಿತ್ತೆ ಮಾಧವ್ ವಿಠಲ್ ರಾವ್ ಮಾತನಾಡಿ, ಜೀವ ಸಂಕುಲಕ್ಕೆ ನೀರು ಅತ್ಯಗತ್ಯ ವಾಗಿದೆ. ನೀರು ಪೋಲಾಗದಂತೆ ನೋಡಿಕೊಳ್ಳಿ. 24x7 ಕುಡಿಯುವ ನೀರು ಸರಬರಾಜಿನಡಿ ಕರ್ನಾಟಕದಲ್ಲಿ 38 ಗ್ರಾಮಗಳಾದರೆ ಜಿಲ್ಲೆಯಲ್ಲಿ 23 ಗ್ರಾಮಗಳನ್ನು ಆಯ್ಕೆ ಮಾಡಲಾಗಿದೆ. ಗ್ರಾಮ ಪಂಚಾಯಿತಿ ವ್ಯಾಪ್ತಿ ಸಮಸ್ಯೆಗಳನ್ನು ಸಾರ್ವಜನಿಕರು ನೇರವಾಗಿ ದೂರವಾಣಿ ಸಂಪರ್ಕದಲ್ಲಿ ಮಾಹಿತಿ ನೀಡಿಬಹುದು ಎಂದು ತಿಳಿಸಿದರು.

ಜೆಜೆಎಂ ಮುಖ್ಯ ಇಂಜಿನಿಯರ್ ಷಣ್ಮುಖಪ್ಪ ಮಾತನಾಡಿ, ಜಲಜೀವನ್ ಯೋಜನೆಯಡಿ ಹಳ್ಳಿಗಳಿಗೆ ಸಮುದಾಯ ಸಹಭಾಗಿತ್ವದಡಿ 24ಥ7 ಸುಸ್ಥಿರ ಕುಡಿಯುವ ನೀರು ಪೂರೈಕೆ ಮಾಡಲಾಗುತ್ತಿದೆ. 6 ತಿಂಗಳುಗಳ ಕಾಲ ಸಮರ್ಪಕ ನಿರ್ವಹಣೆ ಮಾಡಿದರೆ ವಿಶ್ವಬ್ಯಾಂಕ್ ನಿಂದ ಆರ್ಥಿಕ ನೆರವು ಸಿಗಲಿದೆ. ಸ್ವಸಹಾಯ ಸಂಘಗಳಿಗೆ ಕುಡಿಯುವ ನೀರು ನಿರ್ವಹಣೆಗೆ ಅವಕಾಶ ನೀಡಲಾಗಿದೆ ಎಂದು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ತಾ.ಪಂ ಇಓ ಕೆಂಚಪ್ಪ,ಗ್ರಾ.ಪಂ ಅಧ್ಯಕ್ಷರಾದ ಪರಿಮಳ ನಾಗರಾಜ್, ರೂಪ, ಸರೋಜಮ್ಮ, ಉಪಾಧ್ಯಕ್ಷ ಶ್ರೀನಿವಾಸ್, ಸದಸ್ಯರಾದ ನಿರ್ಮಲ ಪಂಚಾಕ್ಷರಿ, ರೇಣುಕಮ್ಮ, ಸರಸ್ವತಿ, ಮಂಜಪ್ಪ, ಮಲ್ಲೇಶಪ್ಪ, ತಿರುಮಲ, ರಾಜಪ್ಪ, ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಎಇಇ ಸಾಧಿಕ್ ಉಲ್ಲಾ, ಪಿಡಿಓ ಗಳಾದ ವಾಸುದೇವ,ಶಿವಕುಮಾರ್,ಅನಿಲ್ ಕುಮಾರ್, ಮರುಳಸಿದ್ದಪ್ಪ, ಮುಖಂಡರಾದ ರಂಗಪ್ಪ, ಬಾಲರಾಜ್, ಕೃಷ್ಣಮೂರ್ತಿ, ಪಲ್ಲಾಗಟ್ಟೆ ಶೇಖರಪ್ಪ, ಗಿಡ್ಡನಕಟ್ಟೆ ಕಾಂತರಾಜ್, ಮಾಜಿ ಮಂಜುನಾಥ್, ಹಟ್ಟಿ ತಿಪ್ಪಣ್ಣ ಮತ್ತಿತರರು ಇದ್ದರು.

## AI–171 ವಿಮಾನ ಪತನ: ಏರ್ ಇಂಡಿಯಾದಿಂದ 147 ಕುಟುಂಬಗಳಿಗೆ ಮಧ್ಯಂತರ ಪರಿಹಾರ ಬಿಡುಗಡೆ



**ನವದೆಹಲಿ:** ಅಹಮದಾಬಾದ್‌ನಲ್ಲಿ AI–171 ವಿಮಾನ ಪತನದಲ್ಲಿ ಪ್ರಾಣ ಕಳೆದುಕೊಂಡ 147 ಪ್ರಯಾಣಿಕರ ಕುಟುಂಬಗಳಿಗೆ ತಲಾ 25 ಲಕ್ಷ ರೂ. ಮಧ್ಯಂತರ ಪರಿಹಾರವನ್ನು ಪಾವತಿಸಲಾಗಿದೆ ಎಂದು ಏರ್ ಇಂಡಿಯಾ ಶನಿವಾರ ತಿಳಿಸಿದೆ. ವಿಮಾನಯಾನ ಸಂಸ್ಥೆಯು ಇನ್ನೂ 52 ಕುಟುಂಬಗಳಿಗೆ ಪರಿಹಾರ ವಿತರಿಸುವ ಪ್ರಕ್ರಿಯೆ ನಡೆಸುತ್ತಿದೆ. ಒಂದು ತಿಂಗಳ ಹಿಂದೆಯೇ ಮೃತರ ಕುಟುಂಬಗಳಿಗೆ ತಕ್ಷಣದ ಆರ್ಥಿಕ ಅಗತ್ಯಗಳನ್ನು ಪೂರೈಸಲು ಏರ್ ಇಂಡಿಯಾ 25 ಲಕ್ಷ ರೂ. ಮಧ್ಯಂತರ ಪರಿಹಾರವನ್ನು ಬಿಡುಗಡೆ ಮಾಡಲು ಪ್ರಾರಂಭಿಸಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

# ಗಿರಿಭಾಗಕ್ಕೆ ಪ್ರವೇಶ ಶುಲ್ಕ ಮತ್ತು ಪಾಸ್ ವಿರುದ್ಧ ಗ್ರಾಮಸ್ಥರು ಆಕ್ರೋಶ

**ಚಿಕ್ಕಮಗಳೂರು:** ಮುಳ್ಳಯ್ಯನಗಿರಿ ಮತ್ತು ಐ.ಡಿ.ಪೀಠ ವ್ಯಾಪ್ತಿಯಲ್ಲಿ ವಾಸಿಸುತ್ತಿರುವ ನಿವಾಸಿಗಳಿಗೆ ಪ್ರವೇಶ ಶುಲ್ಕ ಮತ್ತು ಪಾಸ್ ವಿತರಿಸುವ ನಿರ್ಧಾರ ಖಂಡಿಸಿ ಅತ್ತಿಗುಂಡಿ, ಮಹಲ್, ಬಿಸಗ್ನಿ ಮಠ, ಕೆಸವಿನಮನೆ, ಪಂಡರವಳ್ಳಿ, ಉಕುಡ, ಚಂದ್ರಗಿರಿ, ಗೌರಿಶಂಕರದ ನೂರಾರು ಗ್ರಾಮಸ್ಥರು ಅತ್ತಿಗುಂಡಿ ಗ್ರಾಮದಲ್ಲಿ ಆಕ್ರೋಶ ವ್ಯಕ್ತಪಡಿಸಿದರು.



ಗ್ರಾಮದ ವಾಹನ ಚಾಲಕರು, ವ್ಯಾಪಾರಿಗಳು ಸ್ವಯಂಪ್ರೇರಿತ ಬಂದ್‌ಗೊಳಿಸಿದರು. ನಂತರ ಗ್ರಾಮ ಪಂಚಾಯಿತಿ ಕಚೇರಿವರೆಗೆ ಕಾಲ್ನಡಿಗೆ ಜಾಥಾ ನಡೆಸುವ ಮೂಲಕ ಪ್ರವೇಶ ಶುಲ್ಕ ಮತ್ತು ಪಾಸ್ ಕೊಡುವ ನಿರ್ಧಾರವನ್ನು ಕೂಡಲೇ ಕೈಬಿಡಬೇಕು ಎಂದು ಪಿಡಿಓ ಮಂಜುನಾಥ್ ಮೂಲಕ ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಿದರು.

ಈ ವೇಳೆ ಗ್ರಾಮಸ್ಥರು ಮಾತನಾಡಿ, ಪಾಸ್ ವಿತರಿಸುವ ಸಂಬಂಧ ಗಿರಿಪ್ರದೇಶ ನಿವಾಸಿಗಳ ಜೊತೆ ಚರ್ಚಿಸಿ ನಂತರ ನಿರ್ಣಯ ಕೈಗೊಳ್ಳುವ ಬದಲು, ಏಕಾಏಕಿ ಪಾಸ್ ವ್ಯವಸ್ಥೆ ಜಾರಿಗೆ ಮುಂದಾಗಿರುವುದು ಸರಿಯಲ್ಲ. ಈ ಬಗ್ಗೆ ಗ್ರಾಮಾಡಳಿತವು ನಿವಾಸಿಗಳ ಅಭಿಪ್ರಾಯ ಸಂಗ್ರಹಿಸಿ ಜಿಲ್ಲಾಡಳಿತಕ್ಕೆ ಪತ್ರ ಬರೆದಿದ್ದರೂ ಜಿಲ್ಲಾಧಿಕಾರಿಗಳು ದಿಢೀರನೇ ಸ್ಥಳೀಯರಿಗೆ ಪಾಸ್ ಕಡ್ಡಾಯಗೊಳಿಸುವುದು ನ್ಯಾಯ ಸಮಂಜಸವಲ್ಲ ಎಂದು ಹೇಳಿದರು.

ಎನ್‌ಎಂಡಿಸಿ ಚೆಕ್‌ಪೋಸ್ಟ್‌ನಿಂದ ಮುಂದೆ ಸುಮಾರು ಎರಡು ಸಾವಿರ ಕುಟುಂಬಗಳ ಪೈಕಿ ಏಳು ಸಾವಿರ ಮಂದಿ ವಾಸಿಸುತ್ತಿದ್ದಾರೆ. ಮದುವೆ ಕಾರ್ಯ ಅಥವಾ ಸಾವು–ನೋವುಗಳು ಸಂಭವಿಸಿದರೆ ದೂರದ ಊರಿನಿಂದ ಬರುವಂಥ ಬಂಧುಗಳು, ಸ್ನೇಹಿತರು ಪಾಸ್‌ನಲ್ಲಿಯೇ ಆಗಮಿಸಬೇಕೇ ಎಂದು ಪ್ರಶ್ನಿಸಿದ ಅವರು, ಆ ರೀತಿಯ ನಿರ್ಣಯ ಕೈಗೊಂಡಲ್ಲಿ ಯಾವುದೇ ಕಾರ್ಯ ನಡೆದರೂ ಚೆಕ್‌ಪೋಸ್ಟ್‌ನಲ್ಲಿ ಕುಟುಂಬಸ್ಥರು ಟಿಕಾಣಿ ಹೂಡಬೇಕಾಗುತ್ತದೆ ಎಂದರು. ಗಿರಿಭಾಗಕ್ಕೆ ದಿನಕ್ಕೆ ಒಂದು ಬಸ್ಸಿನ ವ್ಯವಸ್ಥೆಯಿದ್ದು, ಈ ಹಿಂದಿನಂತೆ ಖಾಸಗೀ ಬಸ್‌ಗಳ ಸಂಚಾರವಿಲ್ಲ. ಇದನ್ನು ಹೊರತುಪಡಿಸಿ ಉಳಿದಂತ ಗ್ರಾಮಗಳಿಗೆ ಬಹುತೇಕ ಸ್ವಂತ ವಾಹನಗಳಲ್ಲಿ ತೆರಳಬೇಕಾಗಿದೆ. ಜೊತೆಗೆ ಈ ವ್ಯಾಪ್ತಿಯಲ್ಲಿ ತೋಟ, ಕಟ್ಟಡ ಅಥವಾ ಇನ್ನಿತರೆ ಕೆಲಸಗಳಿಗೆ ತೆರಳಲು ಸ್ಥಳೀಯರಿಗೆ ಪಾಸ್ ಕಡ್ಡಾಯವಾದರೆ ಜೀವನ ರೂಪಿಸಿಕೊಳ್ಳುವುದು ಕಷ್ಟಸಾಧ್ಯವಾಗಿದೆ ಎಂದು ಹೇಳಿದರು.ಪರಿಸರ ಕಾಳಜಿ ದೃಷ್ಟಿಯಿಂದ ಜಿಲ್ಲಾಡಳಿತ ಆದೇಶದಂತೆ ಗಿರಿಭಾಗದ ಅಂಗಡಿಗಳಲ್ಲಿ ನೀರಿನ ಪ್ಲಾಸ್ಟಿಕ್ ಬಾಟಲ್‌ಗಳ ಮಾರಾಟಕ್ಕೆ ಕಡಿವಾಣ ಹಾಕಿದೆ. ಆದರೆ, ಸ್ಥಳೀಯರು ತಮ್ಮ ತಮ್ಮ ಮನೆಗಳಿಗೂ ತೆರಳಲು ಸ್ವತಂತ್ರವಿಲ್ಲದೇ ಅಪ್ಪಣೆ ಪಡೆಯಬೇಕೇ ಎಂದ ಅವರು, ಈ ನಿರ್ಣಯ ಕೇವಲ ಗುಬ್ಬಿ ಮೇಲೆ ಬ್ರಹ್ಮಾಸ್ತ್ರದಂತಾಗಿದ್ದು ಬಲಾಢ್ಯ ರೆಸಾರ್ಟ್ ಹಾಗೂ ಎಸ್ಟೇಟ್ ಮಾಲೀಕರಿಗೆ ಅನ್ವಯಿಸುವುದಿಲ್ಲ ಎಂದರು. ಪ್ರವಾಸಿಗರು ಗಿರಿಪ್ರದೇಶ ಭೇಟಿನೀಡಲು ಜಿಲ್ಲಾಡಳಿತ ಇಂತಿಷ್ಟು ವಾಹನಗಳ ಸಂಚಾರ ನಿಗಧಿಪಡಿಸಿರುವುದು ಉತ್ತಮ ಕೆಲಸ. ಆದರೆ, ಈ ಭಾಗದಲ್ಲಿ ಮುಳ್ಳಪ್ಪಸ್ವಾಮಿ, ಸೀತಳಯ್ಯನಗಿರಿ, ದತ್ತಾತ್ರೇಯಸ್ವಾಮಿ, ಬಿಸಗ್ನಿಮಠ, ಬೈರೇಶ್ವರ ಬೆಟ್ಟ, ಹೊನ್ನಮ್ಮದೇವಿಹಳ್ಳ, ಮುತ್ತಿನಮ್ಮ ದೇವಾಲಯ, ದರ್ಗಾ ಸೇರಿದಂತೆ ಅನೇಕ ಪವಿತ್ರ ಶ್ರದ್ಧಾಕೇಂದ್ರಗಳಿರುವ ಕಾರಣ ಪಾಸ್ ನಿರ್ಧಾರವನ್ನು ಕೈಬಿಡಬೇಕಿದೆ ಎಂದರು.

ಈ ಪವಿತ್ರ ಕೇಂದ್ರಗಳಿಗೆ ಬರುವ ಬಹುತೇಕ ಭಕ್ತಾಧಿಗಳು ಅನಕ್ಷರಸ್ಥರಾದ ಕಾರಣ ಆನ್‌ಲೈನ್ ಬುಕ್ಕಿಂಗ್ ವ್ಯವಸ್ಥೆಯ ಅರಿವಿಲ್ಲ ಹಾಗೂ ಗೊಂದಲಗಳು ಉಂಟಾಗಲಿದೆ. ಆದ್ದರಿಂದ ಜಿಲ್ಲಾಧಿಕಾರಿಗಳು ಕೈಗೊಂಡಿರುವ ನಿರ್ಧಾರವನ್ನು ಕೈಬಿಡದಿದ್ದಲ್ಲಿ ಗಿರಿಪ್ರದೇಶದ ನಿವಾಸಿಗಳು ಒಟ್ಟಾಗಿ ದೊಡ್ಡಮಟ್ಟದಲ್ಲಿ ಉಗ್ರ ಪ್ರತಿಭಟನೆ ನಡೆಸಬೇಕಾಗುತ್ತದೆ ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ಗ್ರಾಮಸ್ಥರಾದ ಶಿವಕುಮಾರ್, ಶಾಂತಕುಮಾರ್, ಸತೀಶ್, ಮುನ್ನ, ಅಬ್ದುಲ್ ಸುಮಾನ್, ಆದಿಲ್, ಬಾಬಿ, ಇಬ್ರಾಹಿಂ, ಮಹಮ್ಮದ್ ಅಫ್ಸರ್, ಸೈಯದ್ ನಜೀಮ್, ಸಿದ್ದಿಕ್, ಉಮೇಶ್, ಸುಂದರೇಶ್, ಹೊನ್ನಪ್ಪ, ನವೀನ್, ನಾಗರಾಜ್, ಸೈಯದ್ ಮುಕ್ತಾಶ, ಪ್ರೇಮ, ಭರತ್, ಧರ್ಮರಾಜ್, ಚನ್ನಕೇಶವ, ಶಹಬುದ್ಧೀನ್, ಅವಿನಾಶ್ ಮತ್ತಿತರರು ಹಾಜರಿದ್ದರು.

## ಸ್ಪರ್ಧಾತ್ಮಕ ಪರೀಕ್ಷಾ ಪೂರ್ವ ತರಬೇತಿಗೆ ಅರ್ಜಿ ಆಹ್ವಾನ

**ದಾವಣಗೆರೆ :** ಯುಪಿಎಸ್‌ಸಿ, ಐಎಎಸ್ ಸ್ಪರ್ಧಾತ್ಮಕ ಪರೀಕ್ಷಾ ಪೂರ್ವ ತರಬೇತಿಯನ್ನು ಹಜ್ ಭವನ ಬೆಂಗಳೂರು ಇಲ್ಲಿ ನಡೆಸಲಾಗುತ್ತಿದ್ದು, ತರಬೇತಿಗೆ ಅರ್ಹ ಅಲ್ಪಸಂಖ್ಯಾತರ ಸಮುದಾಯದ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ

ಜಾಲತಾಣ https://dom.karnataka.gov.in ನಲ್ಲಿ ಅರ್ಜಿ ನಮೂನೆಗಳನ್ನು ಪಡೆದು ಮಾರ್ಗಸೂಚಿಗಳನ್ವಯ ಅರ್ಜಿ ಜೂನ್ 30 ರೊಳಗಾಗಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ, ತಾಲ್ಲೂಕು ಮಾಹಿತಿ ಕೇಂದ್ರ 08192–250066 ಹಾಗೂ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ,# 44, ಎ ಬ್ಲಾಕ್ , 2ನೇ ಮಹಡಿ, ಜಿಲ್ಲಾ ಆಡಳಿತ ಭವನ , ಕರೂರು ಕ್ರಾಸ್, ಹರಿಹರ ರಸ್ತೆ, ದಾವಣಗೆರೆ– 08192–250022 ಸಂಪರ್ಕಿಸಲು ಇಲಾಖೆಯ ಅಧಿಕಾರಿ ತಿಳಿಸಿದ್ದಾರೆ.

# ಸಂಚಾರಿ ವಿಜ್ಞಾನ ಪ್ರಯೋಗಾಲಯ ಪ್ರದರ್ಶನದ ವಿಜ್ಞಾನ ರಥಕ್ಕೆ ಶಾಸಕ ಡಾ. ಚಂದ್ರಪ್ಪ ಚಾಲನೆ

**ಹೊಳಲ್ಕೆರೆ :** ವಿಜ್ಞಾನ–ತಂತ್ರಜ್ಞಾನದಲ್ಲಿ ಮುಂದುವರೆದಿರುವ ಭಾರತ ದೇಶ ಬ್ರಹ್ಮೋಸ್ ಕ್ಷಿಪಣಿ ಕಂಡು ಹಿಡಿದಿರುವುದರಿಂದ ಮುಂದುವರೆದ ರಾಷ್ಟ್ರಗಳು ನಮ್ಮ ಕಡೆ ತಿರುಗಿ ನೋಡುವಂತಾಗಿದೆ ಎಂದು ಶಾಸಕ ಡಾ.ಎಂ.ಚಂದ್ರಪ್ಪ ಹೇಳಿದರು.

ಶಾಲಾ ಶಿಕ್ಷಣ ಇಲಾಖೆ, ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್, ವಿಜ್ಞಾನ ತಂತ್ರಜ್ಞಾನ ಸಂಶೋಧನೆ ಮತ್ತು ಕಲಾ ಸಂಸ್ಥೆ ಬೆಂಗಳೂರು ಇವರ ಸಂಯುಕ್ತಾಶ್ರಯದಲ್ಲಿ ಸಂಚಾರಿ ವಿಜ್ಞಾನ ಪ್ರಯೋಗಾಲಯ ಪ್ರದರ್ಶನ ವಿಜ್ಞಾನದ ರಥಕ್ಕೆ ಶನಿವಾರ ಚಾಲನೆ ನೀಡಿ ಮಾತನಾಡಿದರು.

ಜಮ್ಮು–ಕಾಶ್ಮೀರದಲ್ಲಿ ಉಗ್ರರು ಅಮಾಯಕರ ಮೇಲೆ ಗುಂಡಿನ ದಾಳಿ ನಡೆಸಿ ಬಲಿ ಪಡೆದಿದ್ದಕ್ಕೆ ಪ್ರತೀಕಾರವಾಗಿ ನಮ್ಮ ದೇಶದ ಯೋಧರು ಪಾಕಿಸ್ತಾನದೊಳಗಿನ ಉಗ್ರರ ನೆಲೆಗಳನ್ನು ಪತ್ತೆಹಚ್ಚಿ ಧ್ವಂಸ ಪಡಿಸಿದ್ದಾರೆಂದರೆ ನಮ್ಮ ದೇಶ ವಿಜ್ಞಾನದಲ್ಲಿ ಅಷ್ಟೊಂದು ಮುಂದುವರೆದಿದೆ ಎಂದರ್ಥ. ಮುಂದೆ ನೀವುಗಳು ಸಿಕ್ಕ ಅವಕಾಶಗಳನ್ನು ಸರಿಯಾಗಿ ಬಳಸಿಕೊಂಡು ವಿದ್ಯಾವಂತರಾಗುವ ಮೂಲಕ ಉತ್ತಮ ವಿಜ್ಞಾನಿಗಳಾಗಿ ಹೊರ ಹೊಮ್ಮಬೇಕೆಂದು ವಿದ್ಯಾರ್ಥಿಗಳಿಗೆ ಶಾಸಕ ಡಾ.ಎಂ.ಚಂದ್ರಪ್ಪ ಕರೆ ನೀಡಿದರು.




ಹತ್ತನೆ ತರಗತಿ ಪರೀಕ್ಷೆಯಲ್ಲಿ 625 ಕ್ಕೆ 625 ಅಂಕಗಳನ್ನು ಪಡೆಯುವ ವಿದ್ಯಾರ್ಥಿಗಳಿಗೆ ಒಂದು ಲಕ್ಷ ರೂ.ಗಳ ಬಹುಮಾನ ನೀಡುವುದಾಗಿ ಘೋಷಿಸಿದ್ದೇನೆ. ಆ.15 ರ ಸ್ವಾತಂತ್ರ್ಯೋತ್ಸವದಂದು ಬಹುಮಾನ ವಿತರಿಸಲಾಗುವುದು. ಚಳ್ಳಕೆರೆ ತಾಲ್ಲೂಕಿನಲ್ಲಿರುವ ಡಿ.ಆರ್.ಡಿ.ಓ.ದಲ್ಲಿ ಅತ್ಯಾಧುನಿಕ ಯುದ್ದ ಪರಿಕರಗಳನ್ನು ತಯಾರು ಮಾಡುವ ಸಂಬಂಧ ದೇಶದ ಪ್ರಧಾನಿಯವರು ಚರ್ಚಿಸುತ್ತಿದ್ದಾರೆ. ದೇಶ ಬಲಿಷ್ಟವಾಗಬೇಕಾದರೆ ಶಿಕ್ಷಣದಲ್ಲಿ ಮುಂದೆ ಬರಬೇಕು. ತಾಲ್ಲೂಕಿನಾದ್ಯಂತ ಪ್ರಾಥಮಿಕ ಶಾಲೆ, ಪ್ರೌಢಶಾಲೆ, ಪಿ.ಯು. ಡಿಗ್ರಿ ಕಾಲೇಜು, ಐ.ಟಿ.ಐ. ಪಾಲಿಟೆಕ್ನಿಕ್, ವಸತಿ ಶಾಲೆಗಳನ್ನು ಕಟ್ಟಿಸಿದ್ದೇನೆ. ಉತ್ತಮ ಗುಣಮಟ್ಟದ ರಸ್ತೆ, ಹೈಟೆಕ್ ಆಸ್ಪತ್ರೆ, ಸಮುದಾಯ ಭವನ, ಸ್ಟೇಡಿಯಂ

ಈಜುಕೊಳ ನಿರ್ಮಿಸಿದ್ದೇನೆ. ಸರ್ಕಾರಿ ಶಾಲೆಗೆ ಬರುವ ಬಡ ಮಕ್ಕಳ ಶಿಕ್ಷಣಕ್ಕೆ ತೊಂದರೆಯಾಗಬಾರದೆಂದು ಸ್ವಂತ ಖರ್ಚಿನಿಂದ ಬಸ್‌ಗಳ ವ್ಯವಸ್ಥೆ ಕಲ್ಪಿಸಿದ್ದೇನೆ. ರಾಜ್ಯದಲ್ಲಿ ಯಾವ ಶಾಸಕರು ಇಂತಹ ಪುಣ್ಯ ಸಾರ್ಥಕ ಕೆಲಸ ಮಾಡಿಲ್ಲವೆಂದು ಹೇಳಿದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankri Temple Arch, Main Road, Davanagere, Karnataka-577004. Editor: **MALLIKARJUNAPPA H.G.**